ಕನ್ನಡ ದಿನಪತ್ರಿಕೆ
14 ಫೆಬ್ರುವರಿ | ಬುಧವಾರ
14 February 2024

# ಬೆಳಗಾವಿ ವರದಿ

ಪ್ರಧಾನ ಸಂಪಾದಕ : ಸತೀಶ ಬ ಗುಡಗೆನಟ್ಟಿ
BELAGAVI VARADI KANNADA DAILY NEWS PAPER
ಗಡಿ ಜಿಲ್ಲೆಯ ಧ್ವನಿ...

₹ 4 | ಸಂಪುಟ – 4 ಸಂಚಿಕೆ – 314 ಪುಟ – 4 | RNI . KARKAN/2020/79084 | ADVRT EMAIL. BELAGAVIVARADIEDITOR@GMAIL.COM | NEWSBELAGAVI@GMAIL.COM | 9900332089 | REG.NO G-2/PMG/KA/NK/BM/139/2024-26

## ಫೆ.17ರಂದು ಸರ್ಕಾರಿ ಕಚೇರಿಗಳಲ್ಲಿ ಬಸವಣ್ಣರ ಭಾವಚಿತ್ರ ಹಾಕಿ: ಸಿಎಂ ಸೂಚನೆ



ಬೆಂಗಳೂರು: ಫೆ.17 ರಂದು ಸರ್ಕಾರಿ ಕಚೇರಿಗಳಲ್ಲಿ ಬಸವಣ್ಣರ ಭಾವಚಿತ್ರ ಹಾಕಬೇಕು ಎಂದು ಸಿಎಂ ಸಿದ್ದರಾಮಯ್ಯ ಸೂಚನೆ ನೀಡಿದ್ದಾರೆ.

ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಬಸವಣ್ಣನವರ ಭಾವಚಿತ್ರ ಅನಾವರಣಗೊಳಿ ಮಾತನಾಡಿ, ಫೆ. 17 ರಂದು ಹಾಕುವ ಬಸವಣ್ಣನವರ ಫೋಟೊ ಕೆಳಗೆ ವಿಶ್ವ ಗುರು ಬಸವಣ್ಣ–ಸಾಂಸ್ಕೃತಿಕ ನಾಯಕ" ಎಂದು ನಮೂದಿಸಬೇಕು ಎಂದಿದ್ದಾರೆ.

ಬಸವಣ್ಣನವರ ಕಾರ್ಯಕ್ರಮಕ್ಕೆ ಸರ್ಕಾರದ ಬಳಿ ದುಡ್ಡಿಲ್ಲ ಎಂದು ಜಾತಿ ವಿಷಯವನ್ನು ತಗಲು ಹಾಕಿ ಕೆಲವರು ಮಾತನಾಡಿದ್ದಾರೆ. ಆದರೆ ಯಾರು ಯಾವ ಜಾತಿಯಲ್ಲಿ ಹುಟ್ಟಬೇಕು ಎಂದು ಅರ್ಜಿ ಹಾಕಿರೋದಿಲ್ಲ ಇಷ್ಟಾದ್ರೂ ಗೊತ್ತಿರಲಿ ಎಂದಿದ್ದಾರೆ.

## ರೈತರ ಧ್ವನಿ ಹತ್ತಿಕ್ಕುತ್ತಿದೆ ಮೋದಿ ಸರ್ಕಾರ: ಮಲ್ಲಿಕಾರ್ಜುನ ಖರ್ಗೆ ಆರೋಪ

ನವದೆಹಲಿ: ಕಳೆದ 10 ವರ್ಷಗಳಿಂದ ರೈತರಿಗೆ ನೀಡಿದ್ದ ಭರವಸೆಗಳನ್ನು ಈಡೇರಿಸಲು ವಿಫಲವಾಗಿರುವ ಮೋದಿ ಸರ್ಕಾರ ರೈತರ ಧ್ವನಿಯನ್ನು ಹತ್ತಿಕ್ಕುತ್ತಿದೆ ಎಂದು ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಆರೋಪಿಸಿದ್ದಾರೆ.

ಸಾವಿರಾರು ರೈತರು ದೆಹಲಿ ಚಲೋ ಪ್ರತಿಭಟನೆಗೆ ಕರೆ ನೀಡಿದ ದಿನದಂದು ಸರ್ಕಾರದ ವಿರುದ್ಧ ಖರ್ಗೆ ಅವರು ವಾಗ್ದಾಳಿ ನಡೆಸಿದ್ದಾರೆ. ರಾಜಧಾನಿಗೆ ಆಗಮಿಸುವ ರೈತರನ್ನು ತಡೆಯಲು ಕೇಂದ್ರ ಸರ್ಕಾರ ಕೈಗೊಂಡಿರುವ ಕ್ರಮಗಳು ಸರ್ವಾಧಿಕಾರಿ ಧೋರಣೆ ಎಂದು ಜರಿದಿರುವ ಅವರು ಮೋದಿ ಸರಕಾರ ರೈತರ ಧ್ವನಿಯನ್ನು ಹತ್ತಿಕ್ಕಲು ಪ್ರಯತ್ನಿಸುತ್ತಿದೆ ಎಂದು ಅವರು ಎಕ್ಸ್ ನಲ್ಲಿ




ತಿಳಿಸಿದ್ದಾರೆ. ಆಂದೋಲನ ಜೀವಿ ಮತ್ತು ಪರಾವಲಂಬಿ ಎಂದು ಕರೆಯುವ ಮೂಲಕ ರೈತರನ್ನು ಹೇಗೆ ಮಾನನಷ್ಟಗೊಳಿಸಲಾಯಿತು ಮತ್ತು 750 ರೈತರು ಹೇಗೆ ಪ್ರಾಣ ಕಳೆದುಕೊಂಡರು ಎಂಬುದನ್ನು ನೆನಪಿಸಿಕೊಳ್ಳಿ ಎಂದು ಅವರು ಹಿಂದಿಯಲ್ಲಿ ತಮ್ಮ ಪೋಸ್ಟ್‌ನಲ್ಲಿ ತಿಳಿಸಿದ್ದಾರೆ.

10 ವರ್ಷಗಳಲ್ಲಿ ಮೋದಿ ಸರ್ಕಾರ ದೇಶದ ಅನ್ನದಾತರಿಗೆ ನೀಡಿದ್ದ ಮೂರು ಭರವಸೆಗಳನ್ನು ಉಲ್ಲಂಘಿಸಿದೆ ಎಂದು ಖರ್ಗೆ ಹೇಳಿದರು. ಅವುಗಳೆಂದರೆ, 2022 ರ ವೇಳೆಗೆ ರೈತರ ಆದಾಯವನ್ನು ದ್ವಿಗುಣಗೊಳಿಸುವುದು, ಸ್ವಾಮಿನಾಥನ್ ವರದಿಗೆ ಅನುಗುಣವಾಗಿ ಇನ್ಪುಟ್ ವೆಚ್ಚಗಳ ಅನುಷ್ಠಾನ ಮತ್ತು ಶೇ.50 ರಷ್ಟು ಮತ್ತು ಎಂಎಸ್ಪಿಗೆ ಕಾನೂನು ಸ್ಥಾನಮಾನವನ್ನು ನೀಡುವುದು.

ರೈತರ ಆಂದೋಲನಕ್ಕೆ ಸಂಪೂರ್ಣ ಬೆಂಬಲ ವ್ಯಕ್ತಪಡಿಸಿದ ಖರ್ಗೆ, ಇಂದು ಛತ್ತೀಸ್ಗಢದ ಅಂಬಿಕಾಪುರದಲ್ಲಿ ನಡೆದ ಕಾರ್ಯಕ್ರಮದಲ್ಲಿ ಕಾಂಗ್ರೆಸ್ ರೈತ ಪರ ನ್ಯಾಯದ ಧ್ವನಿ ಎತ್ತಲಿದೆ ಎಂದು ಹೇಳಿದರು. ಇದರ ಜತೆ ನಾವು ಹೆದರುವುದಿಲ್ಲ, ತಲೆಬಾಗುವುದಿಲ್ಲ ಎಂದು ಖರ್ಗೆ ತಮ್ಮ ಪೋಸ್ಟ್‌ನಲ್ಲಿ ತಿಳಿಸಿದ್ದಾರೆ.

## ಮೋದಿ ಕಟೌಟ್ ಜೊತೆ ರೊಮ್ಯಾನ್ಸ್: ಕಿಡಿಕಾರಿದ ನೆಟ್ಟಿಗರು



ನವದೆಹಲಿ: ಪ್ರಧಾನಿ ನರೇಂದ್ರ ಮೋದಿ ಕಟೌಟ್ ಜೊತೆ ಮಹಿಳೆಯೊಬ್ಬರು ರೊಮ್ಯಾಂಟಿಕ್ ಆಗಿ ಡ್ಯುಯೆಟ್ ಮಾಡಿರುವ ವಿಡಿಯೋ ಸೋಷಿಯಲ್ ಮೀಡಿಯಾದಲ್ಲಿ ಅಲ್ಲಲ್ ಮೂಡಿಸಿದೆ.

ಕೇಂದ್ರ ಸರ್ಕಾರವು ರೈಲ್ವೆ ನಿಲ್ದಾಣ, ಪಡಿತರ ಅಂಗಡಿಗಳು ಸೇರಿದಂತೆ ವಿವಿಧ ಸ್ಥಳಗಳಲ್ಲಿ ಪ್ರಧಾನಿ ಮೋದಿ ಕಟೌಟ್ಗಳನ್ನಿಟ್ಟು ಸೆಲ್ಫಿ ಪಾಯಿಂಟ್ಗೆಂದು ಅಳವಡಿಸಿದೆ. ಇದರ ಮೂಲಕ ಸರ್ಕಾರದ ಕಲ್ಯಾಣ ಯೋಜನೆಗಳು ಪ್ರಚಾರ ಮಾಡಲು ಸರ್ಕಾರ ಮುಂದಾಗಿದೆ.

ಆದರೆ ಮಹಿಳೆಯೊಬ್ಬರು ಮೋದಿ ಕಟೌಟ್ ಜೊತೆ ಸಖತ್ ರೊಮ್ಯಾಂಟಿಕ್ ಆಗಿ ಸಾಂಗ್ವೊಂದಕ್ಕೆ ಡ್ಯಾನ್ಸ್ ಮಾಡಿದ್ದಾರೆ. ಈ ಸಾಂಗ್ 1993ರಲ್ಲಿ ರಿಲೀಸ್ ಆದ ಹಿಂದಿಯ ಖಳನಾಯಕ್ ಸಿನಿಮಾದ ಆಜಾ ಸಾಜನ್ ಆಜಾ ಎನ್ನುವ ಹಾಡು ಆಗಿದೆ. ಸದ್ಯ ಇದು ಸೋಷಿಯಲ್ ಮೀಡಿಯಾದಲ್ಲಿ ಫುಲ್ ವೈರಲ್ ಆಗ್ತಿದೆ.

ಸೋಷಿಯಲ್ ಮೀಡಿಯಾದಲ್ಲಿ ಪ್ರಸಿದ್ಧಿ ಪಡೆಯಲು ಮಹಿಳೆ ಈ ರೀತಿ ಮಾಡಿದ್ದಾಳೆ ಎಂದು ನೆಟ್ಟಿಗರು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಉನ್ನತ ಸ್ಥಾನದಲ್ಲಿರುವ ವ್ಯಕ್ತಿಗಳನ್ನು ಗೌರವಿಸಬೇಕು ಎಂದು ಹಲವರು ಕಾಮೆಂಟ್ಗಳನ್ನ ಮಾಡುತ್ತಿದ್ದಾರೆ. ಇನ್ನು ಈ ಮಹಿಳೆ ಯಾರು, ಯಾವ ಕಚೇರಿ ಮುಂದೆ ಈ ರೀತಿ ಡ್ಯಾನ್ಸ್ ಮಾಡಿದ್ದಾರೆ.

## ಅಭದ್ರತೆ ಕಾಡಿದಾಗ ಅಷ್ಟೇ ಬಿಜೆಪಿಗೆ ದೇಶಪ್ರೇಮ: ಆಯನೂರು ಮಂಜುನಾಥ್

ಶಿವಮೊಗ್ಗ: ಮೇಕೆದಾಟು ಯೋಜನೆ, ಮಹದಾಯಿ ಯೋಜನೆ, ವಿಐಎಸ್ ಐಎಲ್ ಕಾರ್ಖಾನೆ, ಶರಾವತಿ ಮುಳುಗಡೆ ಸಂತ್ರಸ್ಥರ ಸಮಸ್ಯೆ ಹಾಗೂ ರಾಜ್ಯಕ್ಕೆ ತೆರಿಗೆ ಹಂಚಿಕೆಯಲ್ಲಿ ಆಗುತ್ತಿರುವ ಅನ್ಯಾಯದ ವಿಚಾರದಲ್ಲಿ ಮೌನವಾಗಿರುವ ಬಿಜೆಪಿ ನಾಯಕರಲ್ಲಿ ಸಮಾಜಘಾತುಕ, ಉದ್ರೇಕದಿಂದ ಮಾತನಾಡುವ ದೇಶಭಕ್ತಿ ಮುಗಿಲು ಮುಟ್ಟಿದೆ ಎಂದು ಕೆಪಿಸಿಸಿ ವಕ್ತಾರ ಆಯನೂರು ಮಂಜುನಾಥ್ ಕಿಡಿಕಾರಿದರು.

ಪತ್ರಿಕಾ ಗೋಷ್ಠಿಯಲ್ಲಿ ಮಾತನಾಡಿದ ಅವರು, ಕೆಲವು ದಿನಗಳಿಂದ ಸಂಸದ ಡಿ.ಕೆ. ಸುರೇಶ್ ಅವರು ರಾಜ್ಯಕ್ಕೆ ಆಗುತ್ತಿರುವ ಅನ್ಯಾಯವನ್ನು ವ್ಯಕ್ತಮಾಡಿದ್ದಾರೆ. ಅವರ ಬಾಯ್ತಪ್ಪಿನಿಂದ ಬಂದ ಒಂದು ಪದವನ್ನು ಇಟ್ಟುಕೊಂಡು ರಾಷ್ಟ್ರಪ್ರೇಮ ಮೆರೆಯುತ್ತಿರುವ ಬಿಜೆಪಿ ನಾಯಕರು ಅವರ ಒಳ್ಳೆಯ ಉದ್ದೇಶವನ್ನು ಗಮನಿಸಿಲ್ಲ. ರಾಜ್ಯಕ್ಕೆ ಆದ ಅನ್ಯಾಯವನ್ನು ಹೇಳುವುದು ತಪ್ಪಾ? ಎಂದು ಪ್ರಶ್ನಿಸಿದರು.

ರಾಜ್ಯಕ್ಕೆ ಒಂದು ಪೈಸೆ ಬರಗಾಲದ ಪರಿಹಾರ ಸಿಕ್ಕಿಲ್ಲ. ಬಿಜೆಪಿಯವರಿಗೆ ಯಾವಾಗ ರಾಜಕೀಯ ಅಭದ್ರತೆ ಕಾಡುತ್ತೋ ಆಗ ಇಂತಹ ಹೇಳಿಕೆ ನೀಡುತ್ತಾರೆ. ಬಿಜೆಪಿಯವರು ಇಂತಹ ಹೇಳಿಕೆ ನೀಡಿ ತಾವು ಇರುವಿಕೆ ತೋರಿಸುತ್ತಾರೆ. ಕರ್ನಾಟಕದ ಜ್ವಲಂತ ಸಮಸ್ಯೆಗಳ ಬಗ್ಗೆ ಕೇಂದ್ರ ಸರ್ಕಾರ ಮಲತಾಯಿ ಧೋರಣೆ ಅನುಸರಿಸುತ್ತಿದ್ದರೂ ಬಿಜೆಪಿ ಯಾವ ಎಂಪಿಯೂ ಪ್ರಶ್ನೆ ಮಾಡಿಲ್ಲ.



ರಾಜ್ಯದಲ್ಲಿ ಬಲಗಾಲವಿದ್ದರೂ ಕೇಂದ್ರ ಸರ್ಕಾರ ಒಂದು ಪೈಸೆಯು ಬರ ಪರಿಹಾರ ನೀಡಿಲ್ಲ ಎಂದು ಆರೋಪಿಸಿದರು.

ಕಾವೇರಿ ನದಿ ನೀರಿನ ಹಂಚಿಕೆ ವಿಚಾರದಲ್ಲಿ ತಮಿಳುನಾಡಿನ ಪರ ನಿಲುವು ತಾಳಿದ್ದ ಕೇಂದ್ರ ಸರ್ಕಾರ ಕನ್ನಡಿಗರ ಹಿತಕಾಪಾಡುವಲ್ಲಿ ವಿಫಲವಾಗಿದೆ. ಕೇಂದ್ರ ಗೃಹ ಅಮಿತ್ ಶಾ ಬೆಳಗಾವಿ ಪ್ರವಾಸ ಮಾಡಿ ರಾಜ್ಯಕ್ಕೆ ಒಂದು ಪೈಸೆ ಪರಿಹಾರ ನೀಡಿಲ್ಲ. ಭದ್ರಾವತಿಯ ವಿಐಎಸ್ಎಲ್ ಕಾರ್ಖಾನೆ ಉಳಿಸುವ ನಿಟ್ಟಿನಲ್ಲಿ ಅಮಿತ್ ಶಾ ಗೆ ಮಾಜಿ ಸಿಎಂ ಯಡಿ ಯೂರಪ್ಪ ಅವರು ಪತ್ರ ಬರೆದಿದ್ದಾರೆ. ಅಮಿತ್ ಶಾ ಸಂಬಂಧಪಟ್ಟ ಸಚಿವರಿಗೆ ಪತ್ರ ಬರೆದಿದ್ದಾರೆ. ಇದು ಕೇವಲ ನಾಟಕೀಯ ಪತ್ರ ವ್ಯವಹಾರ ನಡೆಸಿದ್ದಾರೆ ಎಂದರು.

ಕೇಂದ್ರ ಸಚಿವ ಧರ್ಮೇಂದ್ರ ಪ್ರದಾನ್ ಅವರಿಗೆ ಸೇಲಂ ಪ್ಲಾಂಟ್ ಬಗ್ಗೆ ಇರುವ ಪ್ರೀತಿ ವಿಐಎಸ್ಎಲ್ ಕಾರ್ಖಾನೆ ಉಳಿಸುವ ನಿಟ್ಟಿನಲ್ಲಿ ಯಾಕಿಲ್ಲ. ಸೇಲಂ ಪ್ಲಾಂಟ್ ಗೆ 1500 ಕೋಟಿ ರು. ಹೂಡಿಕೆ ಮಾಡಿದ್ದಾರೆ. ಆದರೆ, ಭದ್ರಾವತಿಯ ವಿಐಎಸ್ ಐಎಲ್ ಕಾರ್ಖಾನೆಗೆ ಹೂಡಿಕೆ ಮಾಡಿಲ್ಲ ಎಂದು ಆಪಾದಿಸಿದರು.

## ಸಂಕೇಶ್ವರದ ನ್ಯಾಯವಾದಿ ಮೇಲೆ ಹಲ್ಲೆ ನಡೆಸಿ ಕೊಲೆಗೆ ಯತ್ನ : ಇಬ್ಬರು ವಶಕ್ಕೆ



ಬೆಳಗಾವಿ: ಯುವ ನ್ಯಾಯವಾದಿಯೊಬ್ಬರ ಮೇಲೆ ಹಲ್ಲೆ ನಡೆಸಿ ಕೊಲೆ ಯತ್ನಿಸಿರುವ ಘಟನೆ ಹುಕ್ಕೇರಿ ತಾಲೂಕಿನ ಸೊಲ್ಲಾಪುರ ಗ್ರಾಮದಲ್ಲಿ ನಡೆದಿದೆ ಎಂದು ವರದಿಯಾಗಿದ್ದು, ಈ ಸಂಬಂಧ ಇಬ್ಬರನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ.

ಸಂಕೇಶ್ವರದ ನ್ಯಾಯಾಲಯದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸಾಗರ ಮಾನೆ ಎಂಬ ನ್ಯಾಯವಾದಿ ಮೇಲೆ ಹಲ್ಲೆ ಹಲ್ಲೆ ನಡೆಸಲಾಗಿದೆ ಎಂದು ಹೇಳಲಾಗಿದೆ. ಫೆಬ್ರವರಿ 11 ರಂದು ತಮ್ಮ ಸ್ವಗ್ರಾಮವಾದ ಸೊಲ್ಲಾಪುರ ಗ್ರಾಮದ ಗೇಟ್ ಹತ್ತಿರ ತನ್ನ ಮೇಲೆ ಸುಮಾರು 10 ಜನರು ಸೇರಿ ಮಾರಣಾಂತಿಕ ಹಲ್ಲೆ ಮಾಡಿ ಕೊಲೆಗೆ ಯತ್ನಿಸಿದ್ದಾರೆ ಎಂದು ಅವರು ಸಂಕೇಶ್ವರ ಪೊಲೀಸರಿಗೆ ದೂರು ನೀಡಿದ್ದಾರೆ.

ಒಂದು ಕಡೆಯ ಗುಂಪಿನ ಕಕ್ಷಿದಾರನಿಗೆ ಬೆಂಬಲ ನೀಡುತ್ತಿದ್ದಾರೆ ಎನ್ನುವ ಕಾರಣದ ಹಿನ್ನೆಲೆಯಲ್ಲಿ ಈ ಹಲ್ಲೆಯನ್ನು ಮಾಡಲಾಗಿದೆ ಎಂದು ಪೊಲೀಸರಿಗೆ ನೀಡಲಾಗಿರುವ ದೂರಿನಲ್ಲಿ ತಿಳಿಸಲಾಗಿದೆ. ಈ ಬಗ್ಗೆ ದೂರು ದಾಖಲಿಸಿಕೊಂಡಿರುವ ಸಂಕೇಶ್ವರ ಪೊಲೀಸರು ಇಬ್ಬರನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಿದ್ದು, ಇನ್ನುಳಿದವರು ಪತ್ತೆಗಾಗಿ ಶೋಧ ನಡೆಸಿದ್ದಾರೆ.

## ಲೋಕಾಯುಕ್ತ ಬಲೆಗೆ ಬಿದ್ದ ಮಾಲಿನ್ಯ ನಿಯಂತ್ರಣಾ ಮಂಡಳಿ ಅಧಿಕಾರಿ




ಬೆಂಗಳೂರು: ಪೆಟ್ರೋಲ್ ಬಂಕ್ಗೆ ಎನ್ಒಸಿ ಪ್ರಮಾಣ ಪತ್ರ ನೀಡಲು 30 ಸಾವಿರ ರೂ ಲಂಚ ಪಡೆಯುತ್ತಿದ್ದ ಮಾಲಿನ್ಯ ನಿಯಂತ್ರಣಾ ಮಂಡಳಿ ಅಧಿಕಾರಿ ಲೋಕಾಯುಕ್ತ ಪೊಲೀಸರ ಬಲೆಗೆ ಬಿದ್ದಿದ್ದಾರೆ. ಚಿಕ್ಕಬಳ್ಳಾಪುರ ಜಿಲ್ಲೆ ಚಿಂತಾಮಣಿಯ ದೊಡ್ಡಗಂಜೂರ್ನಲ್ಲಿ ಪೆಟ್ರೋಲ್ ಬಂಕ್ ಆರಂಭಿಸುತ್ತಿದ್ದ ಎನ್.ವಿ.ಶ್ರೀನಾಥ್ ಅವರು ಎನ್ಒಸಿ ಪ್ರಮಾಣ ಪತ್ರ ಕೋರಿ ಅರ್ಜಿ ಸಲ್ಲಿಸಿದ್ದರು.

ಈ ವೇಳೆ ಮಂಡಳಿಯ ದ್ವಿತೀಯ ದರ್ಜೆ ಅಧಿಕಾರಿ ಖಚಾ ವಾಳಿ (53) ಅವರು 30 ಸಾವಿರ ಲಂಚದ ಬೇಡಿಕೆ ಇಟ್ಟಿದ್ದರು.ಇದನ್ನು ಅರ್ಜಿದಾರರು ಲೋಕಾಯುಕ್ತ ಪೊಲೀಸರಿಗೆ ದೂರು ನೀಡಿದ್ದರು. ಇಂದು ಬೆಳಿಗ್ಗೆ ಲಂಚದ ಹಣ ಪಡೆಯುವಾಗ ಇನ್ಸ್ಪೆಕ್ಟರ್ ಮೋಹನ್ ಕುಮಾರ್ ನೇತೃತ್ವದಲ್ಲಿ ಸಿಬ್ಬಂದಿ ನಡೆಸಿದ ಕಾರ್ಯಾಚರಣೆಯಲ್ಲಿ ಅದಿಕಾರಿ ಖಚಾ ವಾಳಿ ಅವರು ಲಂಚದ ಹಣ ಸಮೇತ ರೆಡ್ಹ್ಯಾಂಡ್ಆಗಿ ಸಿಕ್ಕಿಬಿದ್ದಿದ್ದಾರೆ.

## ಮಾತೃ ಭಾಷೆಯಲ್ಲಿ CAPF ಪರೀಕ್ಷೆ ಬರೆಯಲು ಅನುಮತಿ


ನವದೆಹಲಿ: ಕೇಂದ್ರ ಸಶಸ್ತ್ರ ಪೊಲೀಸ್ ಪಡೆ (CAPF) ಗಳಲ್ಲಿ ಕಾನ್ಸ್ಟೇಬಲ್‌ಗಳ ನೇಮಕಾತಿಗಾಗಿ ಪರೀಕ್ಷೆಯನ್ನು ಇದೇ ಮೊದಲ ಬಾರಿಗೆ ಹಿಂದಿ ಮತ್ತು ಇಂಗ್ಲಿಷ್ ಜೊತೆಗೆ 13 ಪ್ರಾದೇಶಿಕ ಭಾಷೆಗಳಲ್ಲಿ ನಡೆಸಲಾಗುವುದು ಎಂದು ಕೇಂದ್ರ ಗೃಹ ಇಲಾಖೆ ಹೇಳಿದೆ. ಈ ಬಗ್ಗೆ ಮಾಧ್ಯಮ ಪ್ರಕಟಣೆ ಹೊರಡಿಸಿದ್ದು, ದೇಶಾದ್ಯಂತ 128 ನಗರಗಳಲ್ಲಿ ಸುಮಾರು 48 ಲಕ್ಷ ಅಭ್ಯರ್ಥಿಗಳಿಗೆ ಫೆಬ್ರವರಿ 20ರಿಂದ ಮಾರ್ಚ್ 7 ರ ವರೆಗೆ ಪರೀಕ್ಷೆ ನಡೆಸಲಾಗುವುದು ಎಂದು ತಿಳಿಸಿದೆ.

ಪ್ರಧಾನ ಮಂತ್ರಿ ನರೇಂದ್ರ ಮೋದಿ ನೇತೃತ್ವದಲ್ಲಿ ಮತ್ತು ಕೇಂದ್ರ ಗೃಹ ಮತ್ತು ಸಹಕಾರ ಸಚಿವ ಅಮಿತ್ ಶಾ ಮಾರ್ಗದರ್ಶನದಲ್ಲಿ ಗೃಹ ವ್ಯವಹಾರಗಳ ಸಚಿವಾಲಯವು 13 ಪ್ರಾದೇಶಿಕ ಭಾಷೆಗಳಲ್ಲಿ ಸಿಎಪಿಎಫ್ ಗಳ ನೇಮಕಾತಿಗಾಗಿ ಕಾನ್ಸ್ಟೇಬಲ್ (ಸಾಮಾನ್ಯ ಕರ್ತವ್ಯ) ಪರೀಕ್ಷೆ ನಡೆಸಲು ನಿರ್ಧರಿಸಿದೆ. ಕೇಂದ್ರ ಸಶಸ್ತ್ರ ಪೊಲೀಸ್ ಪಡೆಗಳಲ್ಲಿ ಸ್ಥಳೀಯ ಯುವಕರ ಭಾಗವಹಿಸುವಿಕೆ ಹೆಚ್ಚಿಸಲು ಮತ್ತು ಪ್ರಾದೇಶಿಕ ಭಾಷೆಗಳನ್ನು ಉತ್ತೇಜಿಸಲು ಕೇಂದ್ರ ಗೃಹ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ.

ಕಾನ್ಸ್ಟೇಬಲ್ ಜಿಡಿ ಪರೀಕ್ಷೆಯು ಸಿಬ್ಬಂದಿ ಆಯ್ಕೆ ಆಯೋಗ (ಎಸ್ಎಸ್ಸಿ) ನಡೆಸುವ ಪ್ರಮುಖ ಪರೀಕ್ಷೆಗಳಲ್ಲಿ ಒಂದಾಗಿದೆ, ಇದು ದೇಶಾದ್ಯಂತ ಲಕ್ಷಾಂತರ ಯುವಕರನ್ನು ಆಕರ್ಷಿಸುತ್ತದೆ. ಆದ್ದರಿಂದ, ಗೃಹ ವ್ಯವಹಾರಗಳ ಸಚಿವಾಲಯ ಮತ್ತು ಸಿಬ್ಬಂದಿ ಆಯ್ಕೆ ಆಯೋಗವು ಹಿಂದಿ ಮತ್ತು ಇಂಗ್ಲಿಷ್ ಜೊತೆಗೆ ಮೇಲಿನ 13 ಪ್ರಾದೇಶಿಕ ಭಾಷೆಗಳಲ್ಲಿ ಪರೀಕ್ಷೆಯನ್ನು ನಡೆಸಲು ಅನುಕೂಲವಾಗುವಂತೆ ತಿಳಿವಳಿಕೆ ಪತ್ರಕ್ಕೆ ಸಹಿ ಹಾಕಿದೆ.

ಸರ್ಕಾರದ ಈ ನಿರ್ಧಾರವು ಲಕ್ಷಾಂತರ ಯುವಕರು ತಮ್ಮ ಮಾತೃಭಾಷೆ, ಪ್ರಾದೇಶಿಕ ಭಾಷೆಯಲ್ಲಿ ಪರೀಕ್ಷೆಯಲ್ಲಿ ಪಾಲ್ಗೊಳ್ಳಲು ಅವಕಾಶ ಕಲ್ಪಿಸುತ್ತದೆ. ಜೊತೆಗೆ ಅವರಿಗೆ ಆಯ್ಕೆಯ ಭವಿಷ್ಯವನ್ನು ಸುಧಾರಿಸುತ್ತದೆ. ಪರಿಣಾಮವಾಗಿ, ಇಡೀ ದೇಶದ ಅಭ್ಯರ್ಥಿಗಳಲ್ಲಿ ಈ ಪರೀಕ್ಷೆಯ ವ್ಯಾಪ್ತಿಯು ಹೆಚ್ಚಾಗುತ್ತದೆ. ಎಲ್ಲರಿಗೂ ಸಮಾನ ಉದ್ಯೋಗ ಅವಕಾಶ ಸಿಗುತ್ತದೆ.

## ಸ್ಪೀಕರ್ ಯು.ಟಿ ಖಾದರ್ ಗೆ ಬಂತು ಐಷಾರಾಮಿ ಕಾರು



ಬೆಂಗಳೂರು: ಸ್ಪೀಕರ್ ಯು.ಟಿ ಖಾದರ್ ಅವರ ಪ್ರಯಾಣಕ್ಕೆ ಇದೀಗ ಹಲವು ವಿಶೇಷತರ ಹೊಂದಿರುವ ಐಷಾರಾಮಿ ಕಾರು ಬಂದಿದೆ. ಸಚಿವಾಲಯದಿಂದ ವಿಶೇಷ ಕಾರಿನ ಸೌಲಭ್ಯವನ್ನು ಕಲ್ಪಿಸಲಾಗಿದ್ದು, ಐಷಾರಾಮಿ ಫಾರ್ಚೂನರ್ ಕಾರು ಹಲವು ವಿಶೇಷತೆಗಳನ್ನು ಹೊಂದಿದೆ.

ಐಶಾರಾಮಿ ಕಾರು, 360 ಡಿಗ್ರಿ ಕ್ಯಾಮೆರಾ ಹಾಗೂ ಪ್ರಯಾಣದ ಸಂದರ್ಭದಲ್ಲಿ ಸ್ಪೀಕರ್ ಖಾದರ್ ಮುಖಕ್ಕೆ ಬೆಳಕು ನೀಡುವ ವಿಶೇಷ ಎಲ್ ಇ ಡಿ ಲೈಟ್ ಸೌಲಭ್ಯ ಹೊಂದಿದೆ. ಕಪ್ಪು ಬಣ್ಣದ ಫಾರ್ಚೂನರ್( ಇ ) ಕಾರಿನ ದರ 33.43 ಲಕ್ಷ ( ಪೆಟ್ರೋಲ್) ಹಾಗೂ ಡೀಸೆಲ್ ಕಾರಿನ ದರ 35.93 ರಿಂದ 51.44 ಲಕ್ಷ ರೂ. ಆಗುತ್ತದೆ. ಆದರೆ, ಈ ಫಾರ್ಚೂನರ್ ಗೆ ವಿಶೇಷ ವಿನ್ಯಾಸ ಮಾಡಿರುವುದರಿಂದ ಒಟ್ಟು 41 ಲಕ್ಷ ರೂ. ವೆಚ್ಚವಾಗಿದೆ ಎಂದು ತಿಳಿದುಬಂದಿದೆ.

ಕಾರಿಗೆ ಜಿಆರ್ ಕಿಟ್ ಅಳವಡಿಸುವ ಮೂಲಕ ವಿಶೇಷ ವಿನ್ಯಾಸ ಮಾಡಲಾಗಿದೆ. ಇನ್ನು ಕಾರಿನ ಮುಂಭಾಗ ಹಾಗೂ ಹಿಂಭಾಗದಲ್ಲಿ ಗಂಡಭೇರುಂಡ ಲಾಂಛನ ಹೊಂದಿದೆ. ರಾಜ್ಯಪಾಲರಿಗೆ ಹೊರತಾಗಿ ಸ್ಪೀಕರ್ ಗೆ ಮಾತ್ರ ಇದನ್ನು ಹಾಕಲು ಅವಕಾಶ ಇದೆ. ಕೆಲ ವಾರಗಳ ಹಿಂದಷ್ಟೇ ರಾಜ್ಯ ಸರ್ಕಾರದ ಸಚಿವರ ಪ್ರಯಾಣಕ್ಕಾಗಿ 33 ಹೊಸ ಇನ್ನೋವಾ ಕ್ರಸ್ಟಾ ಹೈ ಬೀಡ್ ಕಾರನ್ನು ಖರೀದಿಸಲಾಗಿತ್ತು. ಸುಮಾರು 9.9 ಕೋಟಿ ರೂ. ವೆಚ್ಚದಲ್ಲಿ 33 ಸಚಿವರಿಗೆ ಹೊಸ ಕಾರು ಖರೀದಿ ಮಾಡಿ ನೀಡಲಾಗಿತ್ತು. ಪ್ರತಿಯೊಂದು ಇನ್ನೋವಾ ಹೈಬ್ರಿಡ್ ಎಸ್ ಯುವಿ ಕಾರಿಗೆ ತಲಾ ಸುಮಾರು 30 ಲಕ್ಷ ರೂ. ವೆಚ್ಚವಾಗಿತ್ತು ಎಂದು ತಿಳಿದುಬಂದಿದೆ.

## ಅಕ್ರಮ ಆಸ್ತಿಗಳಿಕೆ ಪ್ರಕರಣ: ಡಿ.ಕೆ.ಶಿ ವಿರುದ್ಧ ಎಫ್ಐಆರ್ ದಾಖಲು



ಬೆಂಗಳೂರು: ಅಕ್ರಮ ಆಸ್ತಿಗಳಿಕೆ ಪ್ರಕರಣವನ್ನು ರಾಜ್ಯ ಸರ್ಕಾರದಿಂದ ಸಿಬಿಐ ತನಿಖೆಗೆ ವಹಿಸಿದ್ದನ್ನು ಹಿಂಪಡೆಯಲಾಗಿತ್ತು.ಇದೀಗ ಸಿಬಿಐಯಲ್ಲಿ ಇದ್ದಂತ ಪ್ರಕರಣವನ್ನು ಲೋಕಾಯುಕ್ತದಿಂದ ಮರು ತನಿಖೆ ಶುರು ಮಾಡಲಾಗಿದೆ.

ಸಿಬಿಐಯಲ್ಲಿದ್ದ ಪ್ರಕರಣವನ್ನು ಮರು ತನಿಖೆಗೆ ಲೋಕಾಯುಕ್ತ ಎಫ್ಐಆರ್ ದಾಖಲಿಸಿಕೊಂಡಿದ್ದು, ಪ್ರಕರಣಕ್ಕೆ ಸಂಬಂಧಿಸಿದ ದಾಖಲೆಗಳನ್ನು ಒದಗಿಸುವಂತೆ ಸಿಬಿಐಗೆ ಪತ್ರ ಬರೆದಿದೆ.

2017ರ ಆಗಸ್ಟ್‌ನಲ್ಲಿ ಆದಾಯ ತೆರಿಗೆ ಅಧಿಕಾರಿಗಳು ಡಿಕೆ ಶಿವಕುಮಾರ್ ಅವರ ಕನಕಪುರ ಮನೆ, ಬೆಂಗಳೂರಿನ ನಿವಾಸ, ಕಚೇರಿ ಹಾಗೂ ಆಪ್ತರ ಮನೆಗಳು ಸೇರಿದಂತೆ 39 ಕಡೆ ದಾಳಿ ನಡೆಸಿದ್ದರು. ಕಾಂಗ್ರೆಸ್ ಎಂಎಲ್ಸಿ ಗೋವಿಂದರಾಜು ಅವರ ಡೈರಿಯಲ್ಲಿ ಹೆಸರು ಪತ್ತೆಯಾದ ನಂತರ ಶಿವಕುಮಾರ್ ಅವರನ್ನು ವಿಚಾರಣೆ ನಡೆಸಿದ್ದರು. ಡಿಕೆಶಿ ವಿರುದ್ಧದ ಸಿಬಿಐ ತನಿಖೆಯ ಆದೇಶವನ್ನು ಸರ್ಕಾರ ವಾಪಸ್ ಪಡೆದುಕೊಂಡಿರುವುದನ್ನು ಪ್ರಶ್ನಿಸಿ ಬಿಜೆಪಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಕೋರ್ಟ್ ಮೊರೆ ಹೋಗಿದ್ದು, ಹೈಕೋರ್ಟ್ ಫೆಬ್ರವರಿ 29ಕ್ಕೆ ವಿಚಾರಣೆ ಮುಂದೂಡಿದೆ.

## ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ ತಿದ್ದುಪಡಿ ವಿಧೇಯಕ ಮಂಡನೆ



ಬೆಂಗಳೂರು: ವಾಣಿಜ್ಯ ಹಾಗೂ ಇತರೆ ನಾಮಫಲಕಗಳಲ್ಲಿ ಶೇ.60ರಷ್ಟು ಕನ್ನಡ ಪ್ರದರ್ಶನಕ್ಕೆ ಅವಕಾಶ ಕಲ್ಪಿಸುವ ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ ತಿದ್ದುಪಡಿ ವಿಧೇಯಕವನ್ನು ವಿಧಾನಸಭೆಯಲ್ಲಿಂದು ಮಂಡಿಸಲಾಯಿತು.

ಕನ್ನಡ ಮತ್ತು ಸಂಸ್ಕೃತಿ ಸಚಿವ ಶಿವರಾಜ ತಂಗಡಗಿ ಅವರ ಪರವಾಗಿ ಗೃಹ ಸಚಿವ ಡಾ.ಜಿ. ಪರಮೇಶ್ವರ್ ವಿಧೇಯಕ ಮಂಡಿಸಿದರು. ಈ ಮೂಲಕ ರಾಜ್ಯಪಾಲರಿಂದ ಸುಗ್ರೀವಾಜ್ಞೆಗೆ ಕಾನೂನಿನ ರೂಪ ನೀಡಲು ರಾಜ್ಯ ಸರ್ಕಾರ ಮುಂದಾಗಿದೆ.

ಕನ್ನಡ ನಾಮಫಲಕಗಳ ಕುರಿತು ಕರವೇ ರಾಜ್ಯಾಧ್ಯಕ್ಷ ನಾರಾಯಣಗೌಡರ ಸಂಘಟನೆ ಉಗ್ರ ಸ್ವರೂಪದ ಹೋರಾಟ ನಡೆಸಿತ್ತು. ಪರಿಸ್ಥಿತಿಯ ಗಂಭೀರತೆ ಅರಿತ ಸರ್ಕಾರ ಸುಗ್ರೀವಾಜ್ಞೆ ಮೂಲಕ ನಾಮಫಲಕಗಳಲ್ಲಿ ಕನ್ನಡಕ್ಕೆ ಆದ್ಯತೆ ಸಿಗುವಂತೆ ಮಾಡಲು ಮುಂದಾಗಿತ್ತು. ಆದರೆ ರಾಜ್ಯಪಾಲರು ಸುಗ್ರೀವಾಜ್ಞೆಯನ್ನು ವಾಪಸ್ ಕಳುಹಿಸಿ ವಿಧಾನಮಂಡಲದಲ್ಲಿ ವಿಧೇಯಕ ಮಂಡಿಸಿ ಅಂಗೀಕಾರ ಪಡೆದುಕೊಳ್ಳುವಂತೆ ಸೂಚಿಸಿದ್ದರು. ಅದರಂತೆ ಮಸೂದೆ ರೂಪಿಸಲಾಗಿದೆ.

ವಾಣಿಜ್ಯ, ಕೈಗಾರಿಕೆ ಮತ್ತು ವ್ಯವಹಾರ ಉದ್ಯಮಗಳು, ಟ್ರಸ್ಟ್‌ಗಳು, ಸಮಾಲೋಚನಾ ಕೇಂದ್ರಗಳು, ಆಸ್ಪತ್ರೆಗಳು, ಪ್ರಯೋಗಾಲಯಗಳು, ಮನೋರಂಜನಾ ಕೇಂದ್ರಗಳು, ಹೋಟೆಲ್ಗಳು ಮತ್ತು ಮುಂದಾದೆಡೆಗಳಲ್ಲಿ ನಾಮಫಲಕಗಳಲ್ಲಿ ಕನ್ನಡ ಭಾಷೆಯನ್ನು ಶೇ.60ರಷ್ಟು ಪ್ರಮಾಣದಲ್ಲಿ, ನಾಮಫಲಕದ ಮೇಲ್ಭಾಗದಲ್ಲಿ ಪ್ರದರ್ಶಿಸುವುದನ್ನು ವಿಧೇಯಕದಲ್ಲಿ ಕಡ್ಡಾಯಗೊಳಿಸಲಾಗಿದೆ.

ಅಧಿನಿಯಮದ ಸೆಕ್ಷನ್ 13ಕ್ಕೆ ತಿದ್ದುಪಡಿ ತರಲಾಗಿದ್ದು, ಭಾಷಾ ಅನುಷ್ಠಾನ ರಾಜ್ಯ ಸಮಿತಿಗೆ ಕನ್ನಡ ಮತ್ತು ಸಂಸ್ಕೃತಿ ನಿರ್ದೇಶನಾಲಯ ನಿರ್ದೇಶಕರನ್ನು ಸದಸ್ಯರನ್ನಾಗಿ, ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿಯವರನ್ನು ಸಂಚಾಲಕರನ್ನಾಗಿ ನೇಮಿಸಲು ನಿರ್ಧರಿಸಲಾಗಿದೆ.

## ಮಂಡ್ಯದಿಂದ ಕಣಕ್ಕೆ ಇಳಿಯಲು ನಿಖಿಲ್ ಕುಮಾರಸ್ವಾಮಿ ನಕಾರ



ಬೆಂಗಳೂರು: ಲೋಕಸಭಾ ಚುನಾವಣೆಗೆ ಕರ್ನಾಟಕದಲ್ಲಿ ಅತ್ಯಂತ ಪ್ರಮುಖವಾಗಿರುವ ಅಂತಹ ಕ್ಷೇತ್ರ ಎಂದರೆ ಮಂಡ್ಯ ಲೋಕಸಭಾ ಕ್ಷೇತ್ರ. ಏಕೆಂದರೆ ಈ ಬಾರಿ ಬಿಜೆಪಿ ಹಾಗೂ ಜೆಡಿಎಸ್ ಮೈತ್ರಿ ಮಾಡಿಕೊಂಡಿರುವ ಹಿನ್ನೆಲೆಯಲ್ಲಿ ಬಿಜೆಪಿ ಅಭ್ಯರ್ಥಿಗೆ ಟಿಕೆಟ್ ಕೊಡಬೇಕಾ ಅಥವಾ ಜೆಡಿಎಸ್ ಅಭ್ಯರ್ಥಿಗೆ ಟಿಕೆಟ್ ಕೊಡಬೇಕ ಎಂಬ ಗೊಂದಲ ಇದೀಗ ಬಿಜೆಪಿ ನಾಯಕರಿಗೆ ತಲೆ ಬಿಸಿ ಮಾಡಿದೆ.

ಈ ಹಿನ್ನೆಲೆಯಲ್ಲಿ ನಿಖಿಲ್ ಕುಮಾರಸ್ವಾಮಿಯು ಕೂಡ ಮಂಡ್ಯ ಕ್ಷೇತ್ರದಲ್ಲಿ ಲೋಕಸಭೆ ಚುನಾವಣೆಗೆ ಸ್ಪರ್ಧಿಸಲು ನಿರಾಕರಿಸಿದ್ದಾರೆ.

ಇದರಿಂದ ಇಂದು ಬೆಂಗಳೂರಿನ ಪದ್ಮನಾಭನಗರದಲ್ಲಿ ಮಾಜಿ ಪ್ರಧಾನಿ ಎಚ್ ಡಿ ದೇವೇಗೌಡ ಅವರ ನಿವಾಸದಲ್ಲಿ ಮಹತ್ವದ ಸಭೆ ನಡೆಯಲಿದೆ ಎಂದು ಹೇಳಲಾಗುತ್ತಿದೆ.

ಈ ಒಂದು ಸಭೆಯಲ್ಲಿ ಮಂಡ್ಯ ಜಿಲ್ಲೆಯ ಜೆಡಿಎಸ್ ನಾಯಕರು ಭಾಗಿ ಯಾಗಲಿದ್ದು, ನಿಖಿಲ್ ಅಥವಾ ಎಚ್ ಡಿ ಕುಮಾರಸ್ವಾಮಿ ಸ್ಪರ್ಧೆಗೆ ಒತ್ತಡ ಹೇರಲು ದೇವೇಗೌಡರಿಗೆ ಮನವಿ ಮಾಡಿಕೊಳ್ಳಲಾಗುತ್ತದೆ ಎಂದು ತಿಳಿದು ಬಂದಿದೆ.

ಮಂಡ್ಯ ಕ್ಷೇತ್ರದಿಂದ ಸ್ಪರ್ಧಿಸಲು ಈಗಾಗಲೇ ನಿಖಿಲ್ ಕುಮಾರಸ್ವಾಮಿ ನಿರಾಕರಿಸಿರುವ ಹಿನ್ನೆಲೆಯಲ್ಲಿ ನಿಖಿಲ್ ಸ್ಪರ್ಧಿಸಲು ಮನವೊಲಿಸುವಂತೆ ಜೆಡಿಎಸ್ ನಾಯಕರು ಹೆಚ್ ಡಿ ದೇವೇಗೌಡ ಅವರಿಗೆ ಮನವಿ ಮಾಡಿದ್ದಾರೆ.

## ಡೆತ್ ನೋಟ್ ಬರೆದಿಟ್ಟು ಆತ್ಮಹತ್ಯೆಗೆ ಶರಣಾದ ಕಾಂಗ್ರೆಸ್ ಮುಖಂಡ



ಗದಗ: ಮರಳು ದಂಧೆಗೆ ಕಾಂಗ್ರೆಸ್ ಮುಖಂಡ ಡಾ. ಶಶಿಧರ್ ಹಟ್ಟಿ ಡೆತ್ ನೋಟ್ ಬರೆದಿಟ್ಟು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಗದಗ ಜಿಲ್ಲೆಯಲ್ಲಿ ನಡೆದಿದೆ. ಗದಗ ಜಿಲ್ಲೆ ರೋಣ ತಾಲೂಕಿನ ಹಿರೇಹಾಳ ಗ್ರಾಮದಲ್ಲಿ ಈ ಘಟನೆ ನಡೆದಿದ್ದು, ಡಾ. ಶಶಿಧರ್ ಹಟ್ಟಿ ಡೆತ್ನೋಟ್ ಬರೆದಿಟ್ಟು, ಸೋಮವಾರ ರಾತ್ರಿ ನೇಣು ಬಿಗಿದುಕೊಂಡು ಆತ್ಮಹತ್ಯೆಗೆ ಶರಣಾಗಿದ್ದಾರೆ. ಮರಳು ದಂಧೆಕೋರ ಶರಣಗೌಡ ಪಾಟೀಲ್ ಹೆಸರನ್ನು ಡೆತ್ನೋಟ್ನಲ್ಲಿ ಉಲ್ಲೇಖಿಸಿದ್ದಾರೆ. ಎಲ್ಲಾ ಲೆಕ್ಕ ಕೊಟ್ಟರೂ ಶರಣಗೌಡ ಪದೇ ಪದೇ ಕಿರುಕುಳ ನೀಡುತ್ತಿದ್ದಾರೆ. ಹೀಗಾಗಿ ಮನನೊಂದು ಆತ್ಮಹತ್ಯೆ ಮಾಡಿಕೊಳ್ಳುತ್ತಿದ್ದೇನೆ. ಉಸ್ತುವಾರಿ ಸಚಿವ ಹೆಚ್.ಕೆ. ಪಾಟೀಲರಿಗೆ ಹೇಳಿ ಶರಣಗೌಡಗೆ ಕಠಿಣ ಶಿಕ್ಷೆ ಕೊಡಿಸಿ ಎಂದು ಪತ್ರದಲ್ಲಿ ಉಲ್ಲೇಖಿಸಲಾಗಿದೆ. ಸ್ಥಳಕ್ಕೆ ರೋಣ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

## ಬಾಲಾಪರಾಧಿ ಜೈಲಿನಿಂದ 22 ಅಪ್ರಾಪ್ತ ಬಾಲಕರು ಎಸ್ಕೇಪ್

ಜೈಪುರ: ಜೈಪುರದ ಬಾಲಾಪರಾಧಿ ಜೈಲಿನಿಂದ 22 ಅಪ್ರಾಪ್ತ ಬಾಲಕರು ಕಿಟಕಿ ಒಡೆದು ಪರಾರಿಯಾಗಿರುವ ಘಟನೆ ಜೈಪುರದ ಸೇಥಿ ಕಾಲೋನಿಯಲ್ಲಿರುವ ಬಾಲಾಪರಾಧಿ ಗೃಹದಲ್ಲಿ ನಡೆದಿದೆ.

ತಪ್ಪಿಸಿಕೊಂಡ ಬಾಲಕರ ಪೈಕಿ ಎಂಟು ಮಂದಿ ವಿರುದ್ಧ ಅತ್ಯಾಚಾರ ಪ್ರಕರಣ ದಾಖಲಾಗಿದ್ದು, 13 ಮಂದಿ ಬಾಲಕರ ವಿರುದ್ಧ ಕೊಲೆ ಯತ್ನದ ತನಿಖೆ ನಡೆಯುತ್ತಿದೆ. ಮತ್ತೊರ್ವ ಅಪ್ರಾಪ್ತನ ವಿರುದ್ಧ ಕೊಲೆ ಪ್ರಕರಣ ದಾಖಲಾಗಿದೆ. ತಪ್ಪಿಸಿಕೊಂಡ ಪ್ರತಿಯೊಬ್ಬರ ವಯಸ್ಸು 12 ರಿಂದ 16 ವರ್ಷಗಳು ಎಂದು ತಿಳಿದುಬಂದಿದೆ.

ಸಿಬ್ಬಂದಿಯಿಂದ ಮಾಹಿತಿ ಸಿಕ್ಕಿದ ತಕ್ಷಣ ಸ್ಥಳಕ್ಕೆ ಪೊಲೀಸರು ಧಾವಿಸಿ ಬಂದಿದ್ದು ಅಪ್ರಾಪ್ತರಿಗಾಗಿ ಹುಡುಕಾಟ ನಡೆಸಿದ್ದಾರೆ. ಬೆಳಗ್ಗೆ 4 ರಿಂದ 5 ರ ನಡುವೆ ಹುಡುಗರು ಕಿಟಕಿಯ ಬಲೆ ಕತ್ತರಿಸಿ ಪರಾರಿಯಾಗಿದ್ದಾರೆ. ಮಾಹಿತಿ ಸಿಕ್ಕಿದ ತಕ್ಷಣ ಪೊಲೀಸರು ಸ್ಥಳಕ್ಕೆ ಧಾವಿಸಿ ಬಾಲಾಪರಾಧಿ ಗೃಹದಿಂದ ಅಪ್ರಾಪ್ತ ಮಕ್ಕಳ ದಾಖಲೆಗಳನ್ನು ಪಡೆದುಕೊಂಡಿದ್ದಾರೆ ಎಂದು ಅಧಿಕಾರಿಯೊಬ್ಬರು ಮಾಹಿತಿ ನೀಡಿದ್ದಾರೆ.

ಪೊಲೀಸರ ಪ್ರಕಾರ, ಇಷ್ಟು ದೊಡ್ಡ ಸಂಖ್ಯೆಯಲ್ಲಿ ಅಪ್ರಾಪ್ತರು ಬಾಲಾಪರಾಧಿಗೃಹದಿಂದ ಒಟ್ಟಿಗೆ ಪರಾರಿಯಾಗಿರುವುದು ಇದೇ ಮೊದಲಾಗಿದೆ. ಕೆಲವು ಹೊರಗಿನವರು ಅಪ್ರಾಪ್ತರನ್ನು



ಬಿಡು ಗಡೆ ಮಾಡಲು ಯೋಜನೆ ಹಾಕಿ ಕೊಂಡಿದ್ದರು ಎಂದು ಪೊಲೀಸರು ತಿಳಿಸಿದ್ದಾರೆ. ಓಡಿಹೋದ ಮಕ್ಕಳು ಸುಮಾರು ಎರಡು ವರ್ಷಗಳಿಂದ ಬಾಲಾಪರಾಧಿಗೃಹದಲ್ಲಿ ವಾಸಿಸುತ್ತಿದ್ದರು ಎಂದು ತಿಳಿದುಬಂದಿದೆ.

ಮೊದಲು ಅಪ್ರಾಪ್ತರು ಕಿಟಕಿಂರು ಬಲೆಯನ್ನು ಗ್ಯಾಸ್ ಕಟರ್ನಿಂದ ಕತ್ತರಿಸಿ ಬಳಿಕ ಒಡೆದು ಓಡಿ ಹೋಗಿದ್ದಾರೆ. ಹಿರಿಯ ಅಧಿಕಾರಿಗಳು ಪೊಲೀಸ್ ತಂಡ ರಚಿಸಿ ಅಪ್ರಾಪ್ತರ ಮನೆಗಳಿಗೆ, ಕೆಲ ಅಡಗುತಾಣಗಳಿಗೆ ಕಳುಹಿಸಿದ್ದು, ಕುಟುಂಬ ಸದಸ್ಯರಿಗೆ ಮಾಹಿತಿ ನೀಡಿದ್ದಾರೆ. ಇವೆಲ್ಲದ ಮಧ್ಯೆ ಕರ್ತವ್ಯದಲ್ಲಿದ್ದ ಬಾಲಾಪರಾಧಿ ಗೃಹದ ಸಿಬ್ಬಂದಿಯನ್ನು ವಿಚಾರಣೆಗಾಗಿ ಪೊಲೀಸರು ವಶಕ್ಕೆ ಪಡೆದಿದ್ದಾರೆ. ಯಾಕೆಂದರೆ ಗ್ಯಾಸ್ ಕಟರ್ನಿಂದ ಕಿಟಕಿಯ ಸರಳು ಕಟ್ ಮಾಡಿದ್ದು, ಕಾಂದ ಕೈಯ ಕೈವಾಡ ಇದೆ ಎಂದು ಪೊಲೀಸರು ಶಂಕಿಸಿದ್ದಾರೆ.

## ಬಳ್ಳಾರಿ ಮಹಾನಗರ ಪಾಲಿಕೆ: ಪ್ಲಾಸ್ಟಿಕ್ ವಸ್ತು ವಿಲೇವಾರಿ ಮಾಡಲು ಅರ್ಹ ಏಜೆನ್ಸಿಗಳಿಂದ ಅರ್ಜಿ ಆಹ್ವಾನ

ಬಳ್ಳಾರಿ: ನಗರದಲ್ಲಿ ವಿವಿಧೆಡೆ ಮಹಾನಗರ ಪಾಲಿಕೆಯಿಂದ ಜಪ್ತಿ ಮಾಡಲಾದ ನಿಷೇಧಿತ ಏಕ ಬಳಕೆಯ ಪ್ಲಾಸ್ಟಿಕ್ ವಸ್ತುಗಳನ್ನು ವಿಲೇವಾರಿ ಮಾಡಲು ಅರ್ಹ ಏಜೆನ್ಸಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ಮಹಾನಗರ ಪಾಲಿಕೆಯ ಆಯುಕ್ತ ಖಲೀಲ್ ಸಾಬ್ ಅವರು ತಿಳಿಸಿದ್ದಾರೆ.

ಇತ್ತೀಚಿಗೆ ನಗರದ ಕೆಲವೆಡೆ ನಿಷೇಧಿತ ಏಕ ಬಳಕೆ ಪ್ಲಾಸ್ಟಿಕ್ ವಸ್ತುಗಳ ಮೇಲೆ ದಾಳಿ ನಡೆಸಿ ಜಪ್ತಿ ಮಾಡಲಾಗಿದ್ದು, ಜಪ್ತಿ ಮಾಡಲಾದ ಪ್ಲಾಸ್ಟಿಕ್ ವಸ್ತುಗಳನ್ನು 'ಎಂಡ್ ಆಫ್ ಲೈಫ್' ಮಾಡಲು ಕೆಎಸ್ಪಿಸಿಬಿ ಇಂದ ಅಧಿಕೃತ ಪರವಾನಿಗೆ ಪಡೆದ ಹಾಗೂ ಪ್ಲಾಸ್ಟಿಕ್ ರಿ-ಸೈಕ್ಲರ್ಸ್ ಅಥವಾ ಅಧಿಕೃತ ಸಿಮೆಂಟ್ ಇಂಡಸ್ಟ್ರೀಸ್/ವೇಸ್ಟ್-ಟು ಎನರ್ಜಿ ಪ್ಲಾಂಟ್ ಜೊತೆ ಒಪ್ಪಂದ ಮಾಡಿಕೊಂಡಿರುವ ಏಜೆನ್ಸಿಗಳು ಅರ್ಜಿ ಸಲ್ಲಿಸಬಹುದಾಗಿದೆ.

ಪ್ಲಾಸ್ಟಿಕ್ನ್ನು ಪಾಲಿಕೆಯಿಂದ ಸಂಗ್ರಹಿಸಿ ಕೆಎಸ್ಪಿಸಿಬಿ ನಿಯಮಾನುಸಾರ ಸಿಮೆಂಟ್/ವೇಸ್ಟ್-ಟು ಎನರ್ಜಿ ಪ್ಲ್ಯಾಂಟ್ಗಳಿಗೆ ಸಾಗಿಸಿದ ಪರಿಮಾಣಕ್ಕೆ ಇಪಿಆರ್ ಪಾಯಿಂಟ್ಸ್ಗಳನ್ನು ಪಾಲಿಕೆಯ ಖಾತೆಗೆ ವರ್ಗಾಯಿಸಬೇಕು ಹಾಗೂ ಸಂಬಂಧಪಟ್ಟ ಬಳಕೆದಾರ-ರಿಂದ ಸೂಕ್ತ ಪ್ರಮಾಣ ಪತ್ರ ನೀಡಬೇಕು ಎಂದು ಅವರು ತಿಳಿಸಿದ್ದಾರೆ.

ಅರ್ಜಿ ಸಲ್ಲಿಸಲು ಫೆ.16 ಕೊನೆಯ ದಿನವಾಗಿರುತ್ತದೆ.

ಹೆಚ್ಚಿನ ಮಾಹಿತಿಗಾಗಿ ಬಳ್ಳಾರಿ ಮಹಾನಗರ ಪಾಲಿಕೆ ಕಚೇರಿ ಅಥವಾ ದೂ.08392-273479 ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಫೆ.15 ರಂದು ಬಳ್ಳಾರಿ ಗ್ರಾಮೀಣ ವ್ಯಾಪ್ತಿಯಲ್ಲಿ ವಿದ್ಯುತ್ ವ್ಯತ್ಯಯ

ಬಳ್ಳಾರಿ: ಗ್ರಾಮೀಣ ಜೆಸ್ಕಾಂ ವ್ಯಾಪ್ತಿಯ 110ಕೆ.ವಿ ಅಲ್ಲಿಪುರ-ಬಳ್ಳಾರಿ ಉತ್ತರ ಮಾರ್ಗದ ಲಿಲೋ ನಿರ್ಮಾಣ ಕಾರ್ಯವನ್ನು ತುರ್ತಾಗಿ ಕೈಗೆತ್ತಿಕೊಳ್ಳುತ್ತಿರುವುದರಿಂದ 110/11ಕೆ.ವಿ ಸೋಮಸಮುದ್ರ ವಿದ್ಯುತ್ ಉಪ-ಕೇಂದ್ರ ಮತ್ತು 33/11ಕೆ.ವಿ ಗುಡದೂರು ವಿದ್ಯುತ್ ಉಪಕೇಂದ್ರದಿಂದ ವಿದ್ಯುತ್ ಸರಬರಾಜು ಆಗುವ ಎಲ್ಲಾ 11ಕೆ.ವಿ ಮಾರ್ಗಗಳಲ್ಲಿ ಫೆ.15 ರಂದು ಬೆಳಿಗ್ಗೆ 08 ಗಂಟೆಯಿಂದ ಸಂಜೆ 06 ಗಂಟೆಯವರೆಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ ಎಂದು ಬಳ್ಳಾರಿ ಗ್ರಾಮೀಣ ಜೆಸ್ಕಾಂನ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ಮೋಹನಬಾಬು ಅವರು ತಿಳಿಸಿದ್ದಾರೆ.

**ವಿದ್ಯುತ್ ವ್ಯತ್ಯಯವಾಗುವ ಪ್ರದೇಶಗಳು:**

ಎಫ್-1 ಎನ್.ಜೆ.ವೈ ಬಾಲಾಜಿ ನಗರ್ ಕ್ಯಾಂಪ್ ಮಾರ್ಗದ ಕೊರ್ಲಗುಂದಿ, ವಿಜಯನಗರ ಕ್ಯಾಂಪ್, ಜಾಲಿಬೆಂಜಿ, ಬಾಲಾಜಿನಗರ ಕ್ಯಾಂಪ್, ಜ್ಯಾಲಿಬೆಂಜಿ. ಎಫ್-2 ಐ.ಪಿ ಸೆಟ್ ಫೀಡರ್ ಸೋಮಸಮುದ್ರ ಮಾರ್ಗದ ಸೋಮಸಮುದ್ರ, ವಕ್ರಾಣಿ ಕ್ಯಾಂಪ್, ಲಕ್ಷ್ಮಿನಗರ ಕ್ಯಾಂಪ್, ವೀರಾಂಜಿನೇಯ ಕ್ಯಾಂಪ್, ಕೋಳೂರು, ಮದಿರೆ, ಕೊಳಗಲ್ಲು, ಭಾಗ್ಯನಗರ ಕ್ಯಾಂಪ್, ಮಲ್ಲಾರೆಡ್ಡಿ ಕ್ಯಾಂಪ್ ಹಾಗೂ ಮುಂತಾದ ಗ್ರಾಮಗಳು. ಎಫ್-3 ಶ್ರೀಧರಗಡ್ಡೆ ಎನ್.ಜೆ.ವೈ ಫೀಡರ್ ಮಾರ್ಗದ ಸೋಮಸಮುದ್ರ, ವಕ್ರಾಣಿ ಕ್ಯಾಂಪ್, ಲಕ್ಷ್ಮಿನಗರ ಕ್ಯಾಂಪ್, ವೀರಾಂಜಿನೇಯ ಕ್ಯಾಂಪ್, ಕೋಳೂರು, ಮದಿರೆ, ಭಾಗ್ಯನಗರ ಕ್ಯಾಂಪ್, ಮಲ್ಲಾರೆಡ್ಡಿ ಕ್ಯಾಂಪ್ ಗ್ರಾಮ, ಕೋಳೂರು ಕ್ರಾಸ್, ದಮ್ಮೂರು, ಡಿ.ಕಗ್ಗಲ್, ವಿ.ಟಿ.ಕ್ಯಾಂಪ್ ಪ್ರದೇಶಗಳು.

ಎಫ್-4 ಐ.ಪಿ ಸೆಟ್ ಕೊರ್ಲಗುಂದಿ ಫೀಡರ್ ಮಾರ್ಗದ ಕೊರ್ಲಗುಂದಿ, ಬಾಲಾಜಿನಗರ್ ಕ್ಯಾಂಪ್, ಜ್ಯಾಲಿಬೆಂಜಿ, ಶ್ರೀಧರಗಡ್ಡ, ವಿಜಯನಗರ ಕ್ಯಾಂಪ್. ಎಫ್-5 ಡಾಕ್ಟರ್ ಕ್ಯಾಂಪ್ ಮಾರ್ಗದ ಶ್ರೀಧರಗಡ್ಡೆ, ಗುಡಾರ್ ನಗರ. ಎಫ್-01 ಡಿ.ಕಗ್ಗಲ್ ಐಪಿ ಮಾರ್ಗದ ಡಿ.ಕಗ್ಗಲ್ ಗ್ರಾಮ. ಎಫ್-02 ಗುಡುದೂರು ಐಪಿ ಮಾರ್ಗದ ಗುಡುದೂರು, ಹಂದಿಹಾಳ್ ಗ್ರಾಮಗಳು. ಎಫ್-03 ಹಂದಿಹಾಳ್ ಐಪಿ ಮಾರ್ಗದ ಹಂದಿಹಾಳ್ ಚಾನಾಳ್ ಗ್ರಾಮಗಳು. ಎಫ್-04 ಗುಡುದೂರು ಎನ್.ಜೆ.ವೈ ಮಾರ್ಗದ ಹಂದಿಹಾಳ್, ಚಾನಾಳ್, ಗುಡುದೂರು ಗ್ರಾಮಗಳು. ಎಫ್-05 ಚಾನಾಳ್ ಐಪಿ ಮಾರ್ಗದ ಚಾನಾಳ್ ಗ್ರಾಮ ಸೇರಿದಂತೆ ವಿವಿಧೆಡೆ ವಿದ್ಯುತ್ ವ್ಯತ್ಯಯವಾಗಲಿದ್ದು, ಸಾರ್ವಜನಿಕರು ಮತ್ತು ವಿದ್ಯುತ್ ಗ್ರಾಹಕರು ಸಹಕರಿಸಬೇಕು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಫೆ.20 ರಂದು ಸಂತಕವಿ ಸರ್ವಜ್ಞ ಜಯಂತಿ

ಬಳ್ಳಾರಿ: ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಮಹಾನಗರ ಪಾಲಿಕೆ ಇವರ ಸಂಂ-ಯುಕ್ತಾಶ್ರಯದಲ್ಲಿ ಸಂತಕವಿ ಸರ್ವಜ್ಞ ಜಯಂತಿ ಕಾರ್ಯಕ್ರಮವನ್ನು ಫೆ.20 ರಂದು ಬೆಳಗ್ಗೆ 11.30 ಗಂಟೆಗೆ ನಗರದ ಡಾ.ರಾಜ-ಕುಮಾರ್ ರಸ್ತೆಯ ಬಿ.ಡಿ.ಎ.ಎ ಫುಟ್ಬಾಲ್ ಮೈದಾನದ ಸಭಾಂಗಣದಲ್ಲಿ ಏರ್ಪಡಿಸಲಾಗಿದೆ.

ಯುವ ಸಬಲೀಕರಣ, ಕ್ರೀಡೆ, ಪರಿಶಿಷ್ಟ ವರ್ಗಗಳ ಕಲ್ಯಾಣ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಬಿ.ನಾಗೇಂದ್ರ ಅವರು ಉದ್ಘಾಟನೆ ಮಾಡುವರು.

ಬಳ್ಳಾರಿ ನಗರ ಶಾಸಕ ನಾರಾ ಭರತ್ ರೆಡ್ಡಿ ಅವರು ಅಧ್ಯಕ್ಷತೆ ವಹಿಸುವರು.

ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮದ ಅಧ್ಯಕ್ಷರು ಹಾಗು ಶಾಸಕ ಜೆ.ಎನ್ ಗಣೇಶ್, ಸಂಸದರಾದ ವೈ.ದೇವೇಂದ್ರಪ್ಪ, ಕರಡಿ ಸಂಗಣ್ಣ, ಡಾ.ಸೈಯದ್ ನಾಸೀರ್ ಹುಸೇನ್, ಶಾಸಕರಾದ ಈ.ತುಕಾರಾಂ, ಬಿ.ಎಂ ನಾಗರಾಜ್, ವಿಧಾನಪ-ರಿಷತ್ ಶಾಸಕರಾದ ಡಾ.ಚಂದ್ರಶೇಖರ ಬಿ.ಪಾಟೀಲ, ಶಶೀಲ್ ಜಿ.ನಮೋಶಿ, ವೈ.ಎಂ.ಸತೀಶ್, ಮಹಾನಗರ ಪಾಲಿಕೆಯ ಮಹಾ ಪೌರರಾದ ಬಿ.ಶ್ವೇತ, ಜಿಲ್ಲಾ ಶಾಲಿವಾಹನ ಕಂಬಾರರ ಸಂಘದ ಅಧ್ಯಕ್ಷ ಪಿ.ವಿ ನರಸಯ್ಯ ಸೇರಿದಂತೆ ಇತರರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು.

ಜಯಂತಿ ಕುರಿತು ಬೆಂಗಳೂರಿನ ಚಿಕ್ಕ ವೀರಯ್ಯ ಟಿ.ಎನ್ ಅವರು ವಿಶೇಷ ಉಪನ್ಯಾಸ ನೀಡುವರು. ಕೆ.ದೊಡ್ಡಬಸವ ಗವಾಯಿ ಅವರಿಂದ ವಚನ ಗಾಯನ ಇರಲಿದೆ.

ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ರಾಹುಲ್ ಶರಣಪ್ಪ ಸಂಕನೂರ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಂಜಿತ್ ಕುಮಾರ್ ಬಂಡಾರು, ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್. ಎನ್, ಮಹಾನಗರ ಪಾಲಿಕೆ ಆಯುಕ್ತ ಜಿ.ಖಲೀಲ್ ಸಾಬ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಿ.ನಾಗರಾಜ್ ಸೇರಿದಂತೆ ಇತರರು ಉಪಸ್ಥಿತರಿರುವರು.

**ಮೆರವಣಿಗೆ:**

ಜಯಂತಿಯ ಅಂಗವಾಗಿ ಮೆರವಣಿಗೆಯು ಹೆಚ್.ಆರ್ ಗವಿಯಪ್ಪ ವೃತ್ತದಿಂದ ಆರಂಭವಾಗಿ ಜಿಲ್ಲಾಧಿಕಾರಿ ಕಚೇರಿ, ಹಳೆ ತಾಲ್ಲೂಕು ಕಚೇರಿ, ಗಡಿಗಿ ಚೆನ್ನಪ್ಪ ವೃತ್ತದ ಮೂಲಕ ಬಿಡಿಎಎ ಫುಟ್ಬಾಲ್ ಮೈದಾನದವರೆಗೆ ನಡೆಯಲಿದೆ ಎಂದು ಪ್ರಕಟಣೆ ತಿಳಿಸಿದೆ.

### ಕೃಷ್ಣ ಅಧ್ಯಯನ' ಅಭಿನಂದನಾ ಗ್ರಂಥದ ಲೋಕಾರ್ಪಣೆ

# ಕೃಷ್ಣ ಕೊಲ್ಹಾರ ಕುಲಕರ್ಣಿ ಅನುಪಮ ಸಾಧಕ: ಎಂ.ಬಿ.ಪಾಟೀಲ ಬಣ್ಣನೆ

ಬೆಂಗಳೂರು: ಹಿರಿಯ ಸಂಶೋಧಕ, ಇತಿಹಾಸಕಾರ, ದಾಸಸಾಹಿತ್ಯ ವಿದ್ವಾಂಸರಾಗಿರುವ ಡಾ.ಕೃಷ್ಣ ಕೊಲ್ಹಾರ ಕುಲಕರ್ಣಿ ಅವರು ಬಹುಶ್ರುತರಾಗಿದ್ದು, ಅಪ್ರತಿಮ ಸಾಧಕರಾಗಿದ್ದಾರೆ ಎಂದು ಭಾರೀ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ ಬಿ ಪಾಟೀಲ ಬಣ್ಣಿಸಿದ್ದಾರೆ.




ಇಲ್ಲಿನ ಗಾಂಧಿ ಭವನದಲ್ಲಿ ಮಂಗಳವಾರ ಆಯೋಜಿಸಿದ್ದ ಕೃಷ್ಣ ಕೊಲ್ಹಾರ ಕುಲಕರ್ಣಿ ಅವರ 'ಕೃಷ್ಣ ಅಧ್ಯಯನ' ಅಭಿನಂದನಾ ಗ್ರಂಥ-'ದ ಲೋಕಾರ್ಪಣೆ ಸಮಾರಂಭದಲ್ಲಿ ಅವರು ಮಾತನಾಡಿದರು.

ಕುಲಕರ್ಣಿಯವರು ನಮ್ಮ ಊರಾದ ವಿಜಯಪುರದವರು ಎನ್ನುವುದು ಅಭಿಮಾನದ ಸಂಗತಿಯಾಗಿದೆ. ಜತೆಗೆ ಅವರು ನಮ್ಮ ಹಿರಿಯರು ಕಟ್ಟಿರುವ ಬಿಎಲ್ ಡಿ ಇ ಶಿಕ್ಷಣ ಸಂಸ್ಥೆಯ ಅವಿಭಾಜ್ಯ ಅಂಗವಾಗಿದ್ದಾರೆ. ಅವರ ಜತೆಗಿನ ಸಂಬಂಧ ಗಾಢವಾದುದು. ನೀರಾವರಿ, ಗಮಕ, ಆದಿಲಶಾಹಿ ಇತಿಹಾಸ, ಗ್ರಂಥ ಸಂಪಾದನೆ ಹೀಗೆ ಹಲವು ಕ್ಷೇತ್ರಗಳಲ್ಲಿ ಈಗಲೂ ದುಡಿಯುತ್ತಿರುವ ಅವರನ್ನು ಕಿರಿಯರು ಆದರ್ಶವಾಗಿ ಸ್ವೀಕರಿಸಬೇಕು ಎಂದು ಅವರು ನುಡಿದರು.

ಕುಲಕರ್ಣಿ ಅವರು ಮೂಲತಃ ಶಿಕ್ಷಣ ಕ್ಷೇತ್ರದವರೇನಲ್ಲ. ಆದರೆ, ಫ ಗು ಹಳಕಟ್ಟಿ ಸಂಶೋಧನಾ ಕೇಂದ್ರದ ಚುಕ್ಕಾಣಿ ಹಿಡಿದು ಅವರು ಕನ್ನಡ ಮತ್ತು ಸಂಸ್ಕೃತ ಇಲಾಖೆ ಹಾಗೂ ಒಂದು ವಿಶ್ವವಿದ್ಯಾಲಯ ಮಾಡುವಂತಹ ಮೌಲಿಕ ಕೆಲಸಗಳನ್ನು ಮಾಡಿದ್ದಾರೆ. ಇದು ಸಾರಸ್ವತ ಲೋಕದ ಶ್ರೀಮಂತಿ-ಕೆಯನ್ನು ಹೆಚ್ಚಿಸಿದೆ ಎಂದು ಅವರು ಮೆಚ್ಚುಗೆ ಸೂಸಿದರು.

ಕಾರ್ಯಕ್ರಮದಲ್ಲಿ ಸಚಿವ ಎಚ್ ಕೆ ಪಾಟೀಲ ಮಾತನಾಡಿ, ಕುಲಕರ್ಣಿ ಅವ-ರಿಂದ ಕೃಷ್ಣಾ ನದಿಯ ಇತಿಹಾಸವನ್ನು ದಾಖಲಿಸುವ ಕೆಲಸ ಆಗಬೇಕು. ಹಾಗೆಯೇ ಕುಲಕರ್ಣಿ ಅವರ ಸಮಗ್ರ ಸಾಹಿತ್ಯ ಕೂಡ ಹೊರತರಬೇಕು ಎಂದರು.

ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಮಾತನಾಡಿದರು.

ವಿದ್ವಾಂಸ ಸತ್ಯಧ್ಯಾನಾಚಾರ್ಯ ಮಾತನಾಡಿದರು.

ಡಾ.ಬಸವರಾಜ ಡೋಣೂರು ಗ್ರಂಥ ಪರಿಚಯ ಮಾಡಿದರು. ಸಚಿವ ಎಂ.ಬಿ.ಪಾಟೀಲ ಅವರ ಪತ್ನಿ ಆಶಾ ಪಾಟೀಲ, ಕೊಲ್ಹಾರ ಕುಲಕರ್ಣಿ ಮತ್ತು ಅವರ ಪತ್ನಿ ವಿಜಯ ಹಾಜರಿದ್ದರು.

ಹಿರಿಯ ವಿದ್ವಾಂಸ ಕೃಷ್ಣ ಕೊಲ್ಹಾರ ಕುಲಕರ್ಣಿ ಅವರಿಗೆ ಮಂಗಳವಾರ ಬೆಂಗಳೂರಿನಲ್ಲಿ 'ಕೃಷ್ಣ ಅಧ್ಯಯನ' ಅಭಿನಂದನಾ ಗ್ರಂಥವನ್ನು ಸಮರ್ಪಿಸಲಾಯಿತು. ಈ ಸಂದರ್ಭದಲ್ಲಿ ಸಚಿವರಾದ ಎಂ ಬಿ ಪಾಟೀಲ, ಎಚ್ ಕೆ ಪಾಟೀಲ, ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ, ಆಶಾ ಪಾಟೀಲ ಇದ್ದರು.

## ಬೆಳಗಾವಿ: ಬಸ್ ಸೌಲಭ್ಯ ಕಲ್ಪಿಸುವಂತೆ ಒತ್ತಾಯ

ಬೆಳಗಾವಿ: ಸಮರ್ಪಕ ಬಸ್ ಸೌಲಭ್ಯ ಕಲ್ಪಿಸುವಂತೆ ಒತ್ತಾಯಿಸಿ ಖಾನಾಪುರ ತಾಲೂಕಿನ ವಿವಿಧ ಗ್ರಾಮದ ರೈತರು ಬೆಳಗಾವಿ ವಿಭಾಗೀಯ ನಿಯಂತ್ರಣಾಧಿಕಾ-ರಿಗೆ ಸೋಮವಾರ ಮನವಿ ಸಲ್ಲಿಸಿದರು.




ಈ ವೇಳೆ ಮಾತನಾಡಿದ ರೈತರು, ಖಾನಾಪುರ ತಾಲೂಕಿನ ಚಾಂಪಗಾವ, ಲಾವಡಿ, ವಡ್ಡಬಯಲು,ಕರಲಗಾ, ಅಲಿವಾಡ, ಕೊಡಚವಾಡ, ಚಿಕ್ಕಂದನಕೊಪ್ಪ ಸೇರಿದಂತೆ ಇತರ ಭಾಗಗಳ ಸುಮಾರು ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ನಿತ್ಯ ಖಾನಾಪುರಕ್ಕೆ ಬರಲು ತೊಂದರೆ ಅನುಭವಿಸುವಂತಾಗಿದೆ ಎಂದು ರೈತರು ಆರೋಪಿಸಿದರು. ದೂರದ ಊರುಗಳಿಂದ ಬರುವ ವಿದ್ಯಾರ್ಥಿಗಳಿಗೆ ಖಾನಾಪುರಕ್ಕೆ ಹೋಗಲು ಸಮರ್ಪಕ ಬಸ್ ಸೌಲಭ್ಯ ಇಲ್ಲ. ಖಾನಪುರಕ್ಕೆ ಹೋಗಲು ದೂರದ ಊರುಗಳ ವಿದ್ಯಾರ್ಥಿಗಳು ಬೆಳಗ್ಗೆ 7 ಗಂಟೆಗೆ ಮನೆ ಬಿಡಬೇಕು. ಪುನಃ ಮರಳಿ ಮನೆಗೆ ಬರಬೇಕಾದರೆ ಸಂಜೆ 7 ಗಂಟೆಯಾಗುತ್ತಿದೆ. ಇದರಿಂದ ದಿನದ ನಾಲ್ಕೈದು ಗಂಟೆ ಸಮಯವನ್ನು ಸಂಚಾರದಲ್ಲಿಯೇ ಕಳೆಯಬೇಕಾಗಿದೆ ಎಂದು ರೈತರು ಆರೋಪಿಸಿದರು. ಇಲ್ಲಿರುವ ಸಮಸ್ಯೆ ಕುರಿತು ಅನೇಕ ಬಾರಿ ಮಾಹಿತಿ ತಿಳಿಸಿದರೂ ಪ್ರಯೋಜನವಾಗಿಲ್ಲ. ಒಂದು ವಾರದಲ್ಲಿ ಈ ವ್ಯವಸ್ಥೆ ಕಲ್ಪಿಸದೆ ಹೋದಲ್ಲಿ ಉಗ್ರ ಹೋರಾಟ ಮಾಡಲಾಗುವುದು ಎಂದು ರೈತರು ಎಚ್ಚ-ರಿಕೆ ನೀಡಿದರು. ಈ ವೇಳೆ ಕರೆಪ್ಪ ಎಸ್. ಕೊಲಕಾರ, ಮಾರುತಿ ಕೊಡೊಳ್ಳಿ, ರುದ್ರಪ್ಪ ಕೊಡೊಳ್ಳಿ, ರುದ್ರಪ್ಪಾ ಶಿದ್ದನ್ನವರ್, ಕಲ್ಲಪ್ಪಾ ಕಿಪಾಟಿ, ಅನುದಾ ಕಮತೆ, ಚಂದನಾ ಕಮತೆ, ಗೀತಾ ಪಾಟೀಲ್, ರೇಖಾ ಗೊರೆ, ಸುಮನಾ ಪರಳಿ, ರುಕ್ಮಿಣಿ ಗಣಾಚಾರಿ ಸೇರಿದಂತೆ ಅಪಾರ ಸಂಖ್ಯೆಯ ರೈತ ಮಹಿಳೆಯರು ಇದ್ದರು.

## ತಂದೆಯೊಂದಿಗೆ ಐಸ್ಕ್ರೀಂ ಸವಿದ ಮಗಳು



ಬೆಂಗಳೂರು: ಬ್ರಿಟನ್ ಪ್ರಧಾನಿ ರಿಶಿ ಸುನಕ್ ಅವರ ಪತ್ನಿ ಅಕ್ಷತಾ ಮೂರ್ತಿ, ತಮ್ಮ ತಂದೆ ನಾರಾಯಣಮೂರ್ತಿ ಜೊತೆ ಬೆಂಗಳೂರಲ್ಲಿ ಐಸ್ಕ್ರೀಂ ಸವಿದಿದ್ದಾರೆ. ಅಕ್ಷತಾ ಮೂರ್ತಿ ಬ್ರಿಟನ್ ಪ್ರಥಮ ಮಹಿಳೆ ಮತ್ತು ನಾರಾಯಣಮೂರ್ತಿ ಅವರ ಮುದ್ದಿನ ಮಗಳಾಗಿದ್ದಾರೆ.

ತಂದೆ-ಮಗಳು ಬೆಂಗಳೂರಿನ ಜನಪ್ರಿಯ ಐಸ್ ಕ್ರೀಮ್ ಜಾಯಿಂಟ್‌ನಲ್ಲಿ ಕಾಣಿಸಿಕೊಂಡಿದೆ. ಜಯನಗರದಲ್ಲಿರುವ ಐಕಾನಿಕ್ ಕಾರ್ನರ್ ಹೌಸ್‌ನಲ್ಲಿ ಇಬ್ಬರು ಐಸ್ಕ್ರೀಂ ಸವಿದಿದ್ದಾರೆ. ಕುಟುಂಬದ ಸಮಯವನ್ನು ಆನಂದಿಸುತ್ತಿರೋದನ್ನು ಫೋಟೋದಲ್ಲಿ ನೋಡಬಹುದಾಗಿದೆ. ಕ್ಯಾಶುವಲ್ ಡ್ರೆಸ್ನಲ್ಲಿದ್ದ ತಂದೆ-ಮಗಳು ಐಸ್ ಕ್ರೀಂ ಕಪ್ ಹಿಡಿದು ಕ್ಯಾಮರಾಗೆ ಪೋಸ್ ನೀಡಿದ್ದಾರೆ.

## ಪ್ರೀತಿಯ ಬಲೆಯಲ್ಲಿ ಬಿದ್ದ ಮಹಿಳಾ ಐಪಿಎಸ್ ಅಧಿಕಾರಿಗೆ ಮದ್ವೆ ನಂತ್ರ ಬಿಗ್ ಶಾಕ್

ಲಖನೌ: ಖತರ್ನಾಕ್ ವ್ಯಕ್ತಿಯೊಬ್ಬ ಐಆರ್‌ಎಸ್ ಅಧಿಕಾರಿಯ ಸೋಗಿನಲ್ಲಿ ವ್ಯಾಟ್ರಿಮೋನಿಯಲ್ ವೆಬ್ಸೈಟ್ ಮೂಲಕ ಮಹಿಳಾ ಉಪ ಪೊಲೀಸ್ ವ-ರಿಷ್ಠಾಧಿಕಾರಿ (ಡಿಎಸ್ಪಿ) ಯನ್ನು ಪರಿಚಯಿಸಿಕೊಂಡು, ಪ್ರೀತಿಯ ಬಲೆಯಲ್ಲಿ ಬೀಳಿಸಿ, ಮದುವೆಯಾಗುವ ಮೂಲಕ ಲಕ್ಷಾಂತರ ರೂಪಾಯಿ ಪೀಕಿರುವ ಆಘಾತಕಾರಿ ಘಟನೆ ಉತ್ತರ ಪ್ರದೇಶದಲ್ಲಿ ನಡೆದಿದೆ.

ಶ್ರೇಷ್ಠಾ ಠಾಕೂರ್ ಮೋಸ ಹೋದ ಮಹಿಳಾ ಅಧಿಕಾರಿ. 2012ನೇ ಬ್ಯಾಚ್ನ ಐಪಿಎಸ್ ಅಧಿಕಾರಿಯಾಗಿರುವ ಶ್ರೇಷ್ಠಾ, ಮ್ಯಾಟ್ರಿಮೋನಿಯಲ್ ವೆಬ್ಸೈಟ್ನಲ್ಲಿ ಪರಿಚಯವಾದ ರೋಹಿತ್ ರಾಜ್ ಎಂಬುವರನ್ನು 2018ರಲ್ಲಿ ಮದುವೆಯಾದರು. ತಮ್ಮ ಪೊಲೀಸಿಂಗ್ ಕೌಶಲಗಳ ಮೂಲಕವೇ ಲೇಡಿ ಸಿಂಗಂ ಎಂದು ಶ್ರೇಷ್ಠಾ ಖ್ಯಾತಿಯಾಗಿದ್ದಾರೆ.

2008ನೇ ಬ್ಯಾಚ್ನ ಐಆರ್‌ಎಸ್ ಅಧಿಕಾರಿ ಮತ್ತು ರಾಂಚಿಂ-ಯಲ್ಲಿ ಡೆಪ್ಯುಟಿ ಕಮಿಷನರ್ ಆಗಿ ಕೆಲಸ ಮಾಡುತ್ತಿದ್ದೇನೆ ಎಂದು ರೋಹಿತ್ ರಾಜ್ ನಂಬಿಸಿದ್ದ. ಆತನ ಮಾತುಗಳನ್ನು ನಂಬಿ ಶ್ರೇಷ್ಠಾ ಮದುವೆಯಾಗಿದ್ದರು. ಆದರೆ, ರೋಹಿತ್ ಅಸಲಿ ಕತೆ ಮದುವೆ ಬಳಿಕ ಗೊತ್ತಾಯಿತು.

ಮದುವೆಗೂ ಮುನ್ನ ಶ್ರೇಷ್ಠಾ ಕುಟುಂಬದಿಂದ ತನಿಖೆ ನಡೆಸಿದಾಗ ರೋಹಿತ್ ರಾಜ್ ನಿಜವಾಗಿಯೂ ಖಖಖ ಅಧಿಕಾರಿ ಎಂದು ತಿಳಿದುಬಂದಿದೆ. ಆದ-ರ್ಗ್ಯೂ, ಮದುವೆಯಾದ ಕೆಲವು ತಿಂಗಳುಗಳ ಬಳಿಕ ತನ್ನ



ಪತಿ ಐಆರ್‌ಎಸ್ ಅಧಿಕಾ-ರಿಯಲ್ಲ ಎಂಬುದನ್ನು ಶ್ರೇಷ್ಠಾ ತಿಳಿದುಕೊಂಡರು. ವಿಷಯದ ಗಂಭೀರತೆಯನ್ನು ಅರ್ಥ-ಮಾಡಿಕೊಂಡ ಶ್ರೇಷ್ಠಾ, ತನ್ನ ದಾಂಪತ್ಯವನ್ನು ಉಳಿಸಿಕೊಳ್ಳುವ ಸಲುವಾಗಿ ಎಲ್ಲವನ್ನು ಮರೆತು ರೋಹಿತ್‌ನನ್ನು ಗಂಡನಾಗಿ ಸ್ವೀಕ-ರಿಸಲು ನಿರ್ಧರಿಸಿದರು. ಆದ-ರ್ಗ್ಯೂ, ಆಕೆಯ 'ಗಂಡ' ತನ್ನ ಹೆಸರಿನಲ್ಲಿ ಇತರ ಜನರನ್ನು ವಂಚಿಸಲು ಪ್ರಾರಂಭಿಸಿದ್ದಾನೆ ಎಂದು ಗೊತ್ತಾದ ಬಳಿಕ ಸಂಬಂಧ ಕಡಿದುಕೊಳ್ಳಲು ನಿರ್ಧರಿಸಿದರು.

ಗಂಡನ ವರ್ತನೆಯಿಂದ ಬೇಸತ್ತ ಶ್ರೇಷ್ಠಾ, ಮದುವೆಯಾದ ಎರಡು ವರ್ಷಗಳ ನಂತರ ರೋಹಿತ್ ರಾಜ್ಗೆ ವಿಚ್ಛೇದನ ನೀಡಿದರು. ಆದರೂ ಅವಳ ಸಮಸ್ಯೆಗಳು ಮಾತ್ರ ಇನ್ನೂ ಮುಗಿದಿಲ್ಲ. ನಕಲಿ ರೋಹಿತ್ ರಾಜ್ ಜನರನ್ನು ವಂಚಿಸುವುದನ್ನು ಮುಂದುವರೆಸಿದ್ದು, ಶ್ರೇಷ್ಠಾ ಅವರು ಮಾಜಿ ಗಂಡನ ವಿರುದ್ಧ ಗಾಜಿಯಾಬಾದ್‌ನಲ್ಲಿ ಪ್ರಕರಣ ದಾಖಲಿಸಿದ್ದಾರೆ. ಪ್ರಕರಣ ದಾಖಲಿಸಿಕೊಂಡ ಪೊಲೀಸರು ಆರೋಪಿಯನ್ನು ಬಂಧಿಸಿದ್ದು, ಹೆಚ್ಚಿನ ಮಾಹಿತಿಗಾಗಿ ತನಿಖೆ ಮುಂದುವರಿಸಿದ್ದಾರೆ.

## ಲೋಕಸಭಾ ಚುನಾವಣೆ 2024: ಮತದಾರ ಪಟ್ಟಿ ಪರಿಷ್ಕರಣೆಯಲ್ಲಿ ಬೂತ್ಮಟ್ಟದ ಏಜಂಟ್ರು ಪಾಲ್ಗೊಳ್ಳಲಿ; ರಾಜಕೀಯ ಪಕ್ಷಗಳ ಸಹಕಾರದಿಂದ ಚುನಾವಣೆ ಕಾರ್ಯ ಸರಳ: ಜಿಲ್ಲಾಧಿಕಾರಿ ದಿವ್ಯ ಪ್ರಭು




ಧಾರವಾಡ: ಮತದಾರ ಪಟ್ಟಿಯ ವಿಶೇಷ ಪರಿಷ್ಕರಣೆ ನಂತರ ಜನವರಿ 22, 2024 ರಂದು ಅಂತಿಮ ಮತದಾರ ಪಟ್ಟಿ ಪ್ರಕಟವಾಗಿದೆ. ಪ್ರತಿ ವಾರ್ಡಗಳಲ್ಲಿ ಬಿಎಲ್‌ಓಗಳು ಮತ್ತೊಮ್ಮೆ ಪ್ರಕಟಿ-ತ ಮತದಾರರ ಪಟ್ಟಿಯ ಅನುಸಾರ ಪರಿಶೀಲನೆ ಕೈಗೊಂಡಿದ್ದು, ರಾಜ-ಕೀಯ ಪಕ್ಷಗಳು ಬಿಎಲ್‌ಎ (ಬೂತ್ಮಟ್ಟದ ಏಜಂಟ್)ರನ್ನು ನೇಮಿಸಿ, ಅವರು ಈ ಕಾರ್ಯದಲ್ಲಿ ಪಾಲ್ಗೊಳ್ಳುವಂತೆ ಮಾಡಿದರೇ ಹೆಚ್ಚು ಅನುಕೂಲವಾಗುತ್ತದೆ ಎಂದು ಜಿಲ್ಲಾ ಚುನಾವಣಾಧಿಕಾರಿಗಳು ಆಗಿರುವ ಜಿಲ್ಲಾಧಿಕಾರಿ ದಿವ್ಯ ಪ್ರಭು ಹೇಳಿದರು.

ಅವರು ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ವಿವಿಧ ರಾಜಕೀಯ ಪಕ್ಷಗಳ ಜಿಲ್ಲಾ ಪ್ರತಿನೀಧಿಗಳ ಸಭೆ ಜರುಗಿಸಿ ಮಾತನಾಡಿದರು.

ಇದು ಚುನಾವಣಾ ವರ್ಷವಾಗಿದೆ. ಲೋಕಸಭೆಗೆ ಸಾರ್ವತ್ರಿಕ ಚುನಾವಣೆ ಜರುಗುತ್ತಿರುವದರಿಂದ ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ಜಿಲ್ಲಾಡಳಿತದಿಂದ ಅಗತ್ಯ ಸಿದ್ದತೆಗಳನ್ನು ಮಾಡಿಕೊಳ್ಳಲಾಗುತ್ತಿದೆ.

ಕಳೆದ ಜನವರಿ 22 ರಂದು ಮತದಾರ ಪಟ್ಟಿಯ ವಿಶೇಷ ಪರಿಷ್ಕರಣೆ ನಂತರ ಅಂತಿಮ ಮತದಾರ ಪಟ್ಟಿ ಪ್ರಕಟವಾಗಿದೆ. ಪ್ರತಿ ಮತಗಟ್ಟೆ ಮಟ್ಟದ ಅಧಿಕಾರಿ ಮತದಾರ ಪಟ್ಟಿಯ ಅನುಸಾರ ತಮ್ಮ ವಾರ್ಡಗಳಲ್ಲಿ ಪರಿಶೀಲನೆ ಮಾಡುತ್ತಿದ್ದಾರೆ. ಅರ್ಹ ಮತದಾರರ ಹೆಸರು ಸೇರ್ಪಡೆಗೆ ಅವಕಾಶವಿದೆ. ಈ ಕಾರ್ಯದಲ್ಲಿ ಮತಗಟ್ಟೆ ಮಟ್ಟದ ಏಜಂಟರು ತೊಡಗಿಕೊಳ್ಳಬಹುದು ಈಗಲೇ ಎಲ್ಲ ರಾಜಕೀಯ ಪಕ್ಷಗಳಿಗೆ ಪ್ರಕಟಿತ ಮತದಾರ ಪಟ್ಟಿಯ ಪ್ರತಿಯನ್ನು ಪೂರೈಸಲಾಗಿದೆ ಎಂದು ಅವರು ಹೇಳಿದರು

ಅರ್ಹ ಯಾವ ಒಬ್ಬ ಮತದಾರರು ಮತದಾನದಿಂದ ವಂಚಿತರಾಗದಂತೆ ನೋಡಿಕೊಳ್ಳುವುದು ನಮ್ಮೆಲ್ಲರ ಜವಾಬ್ದರಿ ಆಗಿದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಸಭೆಯಲ್ಲಿ ವಿವಿಧ ರಾಜಕೀಯ ಪಕ್ಷಗಳ ಪ್ರತಿನಿಧಿಗಳು ಭಾಗವಹಿಸಿದ್ದರು.

## ಆಚಾಪುರದಲ್ಲಿ ಸಂವಿಧಾನ ಜಾಗೃತಿ ಜಾಥಾ ಯಶಸ್ವಿ

ಶಿವಮೊಗ್ಗ: ಭಾರತೀಯರೆಲ್ಲರೂ ಸಂವಿಧಾನದ ಪ್ರಮುಖ ಅಂಶಗಳನ್ನು ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಹಾಗು ಎಲ್ಲರೂ ಸಂವಿಧಾನವನ್ನು ಉಳಿಸಿಕೊಳ್ಳಲು ಹೋರಾಡಬೇಕು ಎಂದು ಆಚಾಪುರ ಗ್ರಾ.ಪಂ ಅಧ್ಯಕ್ಷ ಕಲೀಮುಲ್ಲಾ ಖಾನ್ ತಿಳಿಸಿದರು.

ತಾಲೂಕಿನ ಆನಂದಪುರ ಸಮೀಪದ ಆಚಾಪುರ ಗ್ರಾಮ ಪಂಚಾಯಿತಿಯಲ್ಲಿ ಸಂವಿಧಾನ ಜಾಗೃತಿ ಜಾಥಾವನ್ನು ಬರ ಮಾಡಿಕೊಳ್ಳುವ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.



ಸಂವಿಧಾನದ ಆಶಯಗಳನ್ನು ಸಾಕಾರಗೊಳಿಸಲು ವಿದ್ಯಾರ್ಥಿ ದೆಸೆಯಿಂದಲೇ ಇದರ ಅರಿವು ಮೂಡಿಸುವ ಕಾರ್ಯಕ್ರಮವನ್ನು ಮಾಡಲಾಗುತ್ತಿದ್ದು ಏಕತೆಗಾಗಿ ನಾವೆಲ್ಲರೂ ಶ್ರಮಿಸೋಣ ಎಂದು ತಿಳಿಸಿದರು.

ಸಂವಿಧಾನ ಜಾಗೃತಿ ಜಾಥ-ವನ್ನು ಶಾಲೆಯ ವಿದ್ಯಾರ್ಥಿಗಳು ಗ್ರಾಮ ಪಂಚಾಯತ್ ನ ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರು, ಹಾಗೂ ಸಿಬ್ಬಂದಿಗಳು ಹಾಗೂ ಗ್ರಾಮದ ಸಾರ್ವಜನಿಕರು ಕುಂಭದೊಂದಿಗೆ ಸ್ವಾಗತಿಸಿದರು. ಜಾಥಾ ಪ್ರಮುಖ ರಸ್ತೆಗಳಲ್ಲಿ ಅರಿವು ಮೂಡಿಸುವುದರ ಮೂಲಕ ಸಂಚ-ರಿಸಿದರು.

ಕಾರ್ಯಕ್ರಮದಲ್ಲಿ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ಕೃಷಿ ನಿರ್ದೇಶಕರು, ಗ್ರಾಮ ಪಂಚಾಯಿತಿ ಪಿಡಿಓ, ಶಾಲೆಯ ಉಪನ್ಯಾಸಕರು ಸ್ಥಳೀಯರು, ಸಾರ್ವಜನಿಕರು ಹಾಗೂ ಗ್ರಾಮ ಪಂಚಾಯತ್ ಆಡಳಿತ ಮಂಡಳಿ ಉಪಸ್ಥಿತರಿದ್ದರು.

## ರಾಜ್ಯದ ಅತಿಥಿ ಉಪನ್ಯಾಸಕರಿಗೆ ಬಿಗ್ ಶಾಕ್ ಕೊಟ್ಟ ಸರ್ಕಾರ

ಬೆಂಗಳೂರು: ಅತಿಥಿ ಉಪನ್ಯಾಸಕರಿಗೆ ಬಿಗ್ ಶಾಕ್ ಎದುರಾಗಿದ್ದು, 16 ಸಾವಿರ ನೌಕರರ ಖಾಯಂ ಇಲ್ಲವೆಂದು ಸರ್ಕಾರ ಹೇಳಿದೆ.

ಹೌದು, ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ 16 ಸಾವಿರ ಅತಿಥಿ ಉಪನ್ಯಾಸಕರನ್ನು ಕಾಯಂ ಮಾಡುವಂತೆ ಪ್ರಸ್ತಾಪ ಇಟ್ಟಿದ್ದಕ್ಕೆ ರಾಜ್ಯ ಸರ್ಕಾರ ನಿರಾಕರಣೆ ಮಾಡಿದ್ದು, ಅತಿಥಿ ಉಪನ್ಯಾಸಕರ ಕಾಯಂ ಇಲ್ಲ ಎಂದು ಹೇಳಿದೆ.

ರಾಜ್ಯದಲ್ಲಿರುವ ಕಾಲೇಜು ಶಿಕ್ಷಣ ಇಲಾಖೆಯಲ್ಲಿ ಬರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ 16 ಸಾವಿರ ಅತಿಥಿ ಉಪನ್ಯಾಸಕರನ್ನು ಕಾಯಂ ಮಾಡುವಂತೆ ಪ್ರಸ್ತಾಪ ಮಾಡಿದರು. ಖಾಲಿ ಹುದ್ದೆಗೆ ಕಾಯಂ ಮಾಡಲು ನಿಯಮಗಳಲ್ಲಿ ಅವಕಾಶ ಇಲ್ಲ ಎಂಬುದಾಗಿ ಸದನಕ್ಕೆ ಉನ್ನತ ಶಿಕ್ಷಣ ಸಚಿವ ಸುಧಾಕರ್ ಉತ್ತರ ನೀಡಿದರು.

ಅತಿಥಿ ಉಪನ್ಯಾಸಕರ ಬೇಡಿಕೆ ಈಡೇರಿಕೆ ಬಗ್ಗೆ ಉನ್ನತ ಅಧಿಕಾ-ರಿಗಳ ಸಮಿತಿ ರಚನೆ ಮಾಡಲಾಗಿದೆ. ಸಮಿತಿಯ ವರದಿಯ ಪ್ರಕಾರ ಪರಿಶೀಲನೆ ಮಾಡಲಾಗಿದೆ.

32 ಸಾವಿರದಿಂದ 26 ಸಾವಿರದವರೆಗೂ ವೇತನ ನೀಡಲಾಗುತ್ತಿದೆ, ವಿವಿಧ ಮಾನದಂಡದ ಆಧಾರದ ಮೇಲೆ ವೇತನ ನಿಗದಿ ಮಾಡಲಾಗಿದೆ ಎಂದರು.

## ಫೆ.27 ರಂದು ನಿಧಿ ಆಪ್ಕೆ ನಿಕಟ್ ಕಾರ್ಯಕ್ರಮ

ಬಳ್ಳಾರಿ: ಕಾರ್ಮಿಕರ ಭವಿಷ್ಯ ನಿಧಿ ಸಂಸ್ಥೆಯ ಬಳ್ಳಾರಿ ಪ್ರಾದೇಶಿಕ ಕಚೇರಿಯ ವತಿಯಿಂದ ಭವಿಷ್ಯ ನಿಧಿ ನಿಮ್ಮ ಹತ್ತಿರಕ್ಕೆ ಎಂಬ ಆಶಯದಡಿ ನಿಧಿ ಆಪ್ಕೆ ನಿಕಟ್ ಕಾರ್ಯಕ್ರಮವನ್ನು ಫೆ.27 ರಂದು ಬೆಳಿಗ್ಗೆ 09 ಗಂಟೆಯಿಂದ ಸಂಜೆ 06 ಗಂಟೆಯವರೆಗೆ ಸಂಡೂರು ತಾಲ್ಲೂಕಿನ ದೋಣಿಮಲೈನ ಎನ್‌ಎಂಡಿಸಿಯ ತರಬೇತಿ ಕಲಿಕೆ ಕೇಂದ್ರದಲ್ಲಿ ಹಮ್ಮಿಕೊಳ್ಳಲಾಗಿದೆ.

ನಿಧಿ ಆಪ್ಕೆ ನಿಕಟ್ ಕಾರ್ಯಕ್ರಮದಲ್ಲಿ ಕಾರ್ಮಿಕರ, ಪಿಂಚಣಿದಾರರ ಮತ್ತು ಉದ್ಯೋಗದಾತರ ಕುಂದುಕೊರತೆ ಪರಿಹಾರ ಮತ್ತು ಮಾಹಿತಿ ವಿನಿಮಕ್ಕೆ ವಿಶಾಲ ವೇದಿಕೆಯಾಗಿದ್ದು, ಅರಿವು ಮೂಡಿಸುವ ಮತ್ತು ಪ್ರಭಾವ ಬೀರುವ ಕಾರ್ಯಕ್ರಮವಾಗಿದೆ.

ಕಾರ್ಮಿಕರ, ಪ್ರಧಾನ ಉದ್ಯೋಗದಾತರ ಮತ್ತು ಗುತ್ತಿಗೆದಾರರಿಗೆ ಲಭ್ಯವಿರುವ ಆನ್ಲೈನ್ ಸೇವೆಗಳ, ಹೊಸ ಉಪಕ್ರಮ, ಸುಧಾರಣೆಗಳ ಮಾಹಿತಿ ಒದಗಿಸಲಾಗುತ್ತದೆ. ಉದ್ಯೋಗದಾರರ ಕರ್ತವ್ಯ, ಜವಾಬ್ದಾರಿಗಳ ಅರಿವು ಮೂಡಿಸುವ ಕೆಲಸವಾಗುತ್ತದೆ.

ಎಲ್ಲಾ ಕಾರ್ಮಿಕರು, ಪಿಂಚಣಿದಾರರು, ಉದ್ಯೋಗದಾತರು ಫೆ.27 ರಂದು ನಡೆಯುವ ನಿಧಿ ಆಪ್ಕೆ ನಿಕಟ್ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಇದರ ಸದುಪಯೋಗಪಡೆದುಕೊಳ್ಳಬೇಕು ಎಂದು ಪ್ರಾದೇಶಿಕ ಭವಿಷ್ಯ ನಿಧಿ ಆಯುಕ್ತರಾದ ಕೆ.ವೆಂಕಟ ಸುಬ್ಬಯ್ಯ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬೆಳಗಾವಿ: ಕಾರ್ಯಾಲಯ ಸಹಾಯಕ ಹುದ್ದೆಗೆ ಅರ್ಜಿ ಅಹ್ವಾನ

ಬೆಳಗಾವಿ: ಕೆನರಾ ಬ್ಯಾಂಕ್ ಗ್ರಾಮೀಣ ಸ್ವ-ಉದ್ಯೋಗ ತರಬೇತಿ ಸಂಸ್ಥೆ ಗುತ್ತಿಗೆ ಆಧಾರದ ಮೇಲೆ ಕಾರ್ಯಾಲಯ ಸಹಾಯಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಕಂಪ್ಯೂಟರ್ ಎಮ್ ಎಸ್ ಆಫೀಸ್, ಇಂಟರ್ನೆಟ್ ಜ್ಞಾನ ಹೊಂದಿರಬೇಕು. ಮತ್ತು ಕನ್ನಡ ಮತ್ತು ಇಂಗ್ಲಿಷ್ ಟೈಪಿಂಗ್ ಕಡ್ಡಾಯ. ಅಕೌಂಟಿಂಗ್ ಜ್ಞಾನ ಹೊಂದಿರಬೇಕು. ಉತ್ತಮ ಸಂವಹನ ಕಲೆ ಹೊಂದಿರಬೇಕು ಕನ್ನಡ ಮತ್ತು ಇಂಗ್ಲಿಷ್ ಭಾಷೆಯನ್ನು ಓದಲು ಮತ್ತು ಬರೆಯಲು ಬರಬೇಕು. ಹಿಂದಿ ಭಾಷೆ ಹೆಚ್ಚಿನ ಜ್ಞಾನ ಹೊಂದಿರುವುದು. ಮತ್ತು ಆರ್‌ಸೆಟಿ/ರುಡಸೆಟಿಗಳಂಥ ಸಂಸ್ಥೆಗಳಲ್ಲಿ ಕೆಲಸ ಮಾಡಿದ ಅನುಭವವಿದ್ದಲ್ಲಿ ವಿಶೇಷ ಮನ್ನಣೆ ನೀಡಲಾಗುವುದು.

ಆಸಕ್ತ ಅಭ್ಯರ್ಥಿಗಳು ಸೂಕ್ತ ದಾಖಲೆಗಳ ಜೊತೆಗೆ ಒಂದು ಇತ್ತೀಚಿನ ಭಾವಚಿತ್ರದೊಂದಿಗೆ ತಮ್ಮ ಅರ್ಜಿಯನ್ನು ಸ್ವ ಅಕ್ಷರದಲ್ಲಿ ಬರೆದಿರಬೇಕು ಅಥವಾ ಟೈಪ್ ಮಾಡಿರಬೇಕು. ಅರ್ಜಿಯಲ್ಲಿ ಅನುಭವ ಮತ್ತು ಈಗ ಮಾಡುತ್ತಿರುವ ಉದ್ಯೋಗದ ವಿವರದೊಂದಿಗೆ ಅರ್ಜಿಯನ್ನು ತಮ್ಮ ಸ್ವ-ವಿಳಾಸ ಅಂಚೆ ಚೀಟಿ ಲಗತ್ತಿಸಿದ ಲಕೋಟೆಯೊಂದಿಗೆ ಫೆ.28 ರ ಒಳಗಾಗಿ ಅರ್ಜಿಯನ್ನು ಸಲ್ಲಿಸಬೇಕು. ಆಸಕ್ತರು ಹೆಚ್ಚಿನ ಮಾಹಿತಿಗಾಗಿ ಕೆನರಾ ಬ್ಯಾಂಕ್ ಗ್ರಾಮೀಣ ಸ್ವ-ಉದ್ಯೋಗ ತರಬೇತಿ ಸಂಸ್ಥೆ, ಪ್ಲಾಟ ನಂ ಸಿ ಎ-03 ಆಪ್ ಕಣಬರ್ಗಿ ಇಂಡಸ್ಟ್ರೀಯಲ್ ಏರಿಯಾ ಆಟೋ ನಗರ ಇಲ್ಲಿಗೆ ಅಥವಾ ದೂರವಾಣಿ 0831-2440644 ಸಂಖ್ಯೆಗೆ ಸಂಪರ್ಕಿಸಬಹುದು ಎಂದು ಕೆನರಾ ಬ್ಯಾಂಕ್ ಗ್ರಾಮೀಣ ಸ್ವ-ಉದ್ಯೋಗ ತರಬೇತಿ ಸಂಸ್ಥೆ ಪ್ರಕಟಣೆಯಲ್ಲಿ ತಿಳಿಸಿದೆ.

# ಸಂವಿಧಾನ ಜಾಗೃತಿ ಜಾಥಾ : ಬೆಳಗಾವಿ ರಾಜ್ಯಕ್ಕೆ ತೃತೀಯ

### ಭ್ರಾತೃತ್ವ, ಸರ್ವಧರ್ಮ ಸಮಭಾವ, ರಾಷ್ಟ್ರದ ಏಕತೆ ತಿಳಿಸುವ ಮೂಲ ಧ್ಯೇಯ

ಹುಕ್ಕೇರಿ : ಸಂವಿಧಾನದ ಮೌಲ್ಯ ಮತ್ತು ಆಶಯಗಳ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವ ಉದ್ದೇಶದಿಂದ ವಿವಿಧ ಇಲಾಖೆಗಳ ಸಹಯೋಗದಲ್ಲಿ ಸಮಾಜ ಕಲ್ಯಾಣ ಇಲಾಖೆಯಿಂದ ನಡೆಯುತ್ತಿರುವ ಸಂವಿಧಾನ ಜಾಗೃತಿ ಜಾಥಾಗೆ ಬೆಳಗಾವಿ ಜಿಲ್ಲೆಯಲ್ಲಿ ಅಭೂತಪೂರ್ವ ಬೆಂಬಲ, ಯಶಸ್ಸು ಕಂಡಿದೆ. ರಾಜ್ಯದ 31 ಜಿಲ್ಲೆಗಳಲ್ಲಿ ಸಂವಿಧಾನ ಜಾಗೃತಿ ಜಾಥಾ ಮಾಡುವಲ್ಲಿ ಬೆಳಗಾವಿ ಜಿಲ್ಲೆ ತೃತೀಯ ಸ್ಥಾನದಲ್ಲಿದೆ.

ಜ. 26 ರಂದು ಜಿಲ್ಲಾ ಕ್ರೀಡಾಂಗಣದಲ್ಲಿ ಜಿಲ್ಲೆಯಾದ್ಯಂತ ಸಂಚರಿಸಲು ಎರಡು ಮಾರ್ಗಗಳಲ್ಲಿ ಸ್ತಬ್ಧ ಚಿತ್ರಗಳನ್ನೊಳಗೊಂಡ ಎರಡು ವಿಶೇಷ ರಥವುಳ್ಳ ವಾಹನಗಳಿಗೆ ಏಕಕಾಲಕ್ಕೆ ಚಾಲನೆ ನೀಡಲಾಗಿದೆ. ಪ್ರಸ್ತುತ ಫೆ. 10 ರವರೆಗೆ ಜಿಲ್ಲೆಯ 289 ಗ್ರಾಮ ಪಂಚಾಯಿತಿಗಳು ಹಾಗೂ 22 ನಗರ ಸ್ಥಳೀಯ ಸಂಸ್ಥೆಗಳಲ್ಲಿ ಈ ಜಾಥಾ ಯಶಸ್ವಿಯಾಗಿ ಸಾಗಿದೆ. ತನ್ಮೂಲಕ ಇಡೀ ರಾಜ್ಯದಲ್ಲಿಯೇ ಬೆಳಗಾವಿ ಮೂರನೇ ಸ್ಥಾನ ಪಡೆದುಕೊಂಡಿದೆ.

ಸಾಮಾನ್ಯ ಜನರಿಗೆ ಈ ಜಾಥಾ ಯಾವ ರೀತಿ ಪರಿಣಾಮಕಾರಿಯಾಗಿ ಸಂವಿಧಾನವನ್ನು ತಿಳಿದುಕೊಳ್ಳಲು ಸಹಕಾರಿಯಾಗಿದೆ? ಸಂವಿಧಾನ ಜಾಗೃತಿ ಜಾಥಾ ಯಶಸ್ವಿಗೊಳ್ಳಲು ಸಮಿತಿ ರಚನೆ, ಅವರ ಕ್ರಿಯಾಶೀಲತೆ ಹೇಗಿದೆ? ಸೈಕಲ್, ಬೈಕ್, ಸೇರಿದಂತೆ ಹಲವು ರೀತಿಯ ರ್ಯಾಲಿಗಳನ್ನು ಹೇಗೆ




ಮಾಡಲಾಗಿದೆ? ಪತ್ರಿಕೆ ಹಾಗೂ ಸಾಮಾಜಿಕ ಮಾಧ್ಯಮಗಳಲ್ಲಿ ಜಾಗೃತಿ ಯಾವ ರೀತಿಯ ಪ್ರಭಾವ ಬೀರಿದೆ ಸೇರಿ ಹಲವು ಅಂಶಗಳ ಆಧಾರದ ಮೇಲೆ ಜಿಲ್ಲೆಗಳಿಗೆ ಸ್ಥಾನಮಾನ ನೀಡಲಾಗಿದೆ. ಧಾರವಾಡ ಮತ್ತು ಕೋಲಾರ ಕ್ರಮವಾಗಿ ಪ್ರಥಮ, ದ್ವಿತೀಯ ಸ್ಥಾನದಲ್ಲಿದ್ದರೆ, ಬೆಳಗಾವಿ ಮೂರನೇ ಸ್ಥಾನದ ಪಟ್ಟಕ್ಕೇರಿದೆ.

ವಿಶೇಷ ರಥಗಳಲ್ಲಿ ಸಂವಿಧಾನ ಶಿಲ್ಪಿ ಅಂಬೇಡ್ಕರ ಮೂರ್ತಿಯೊಂದಿಗೆ ಎಲ್‌ಇಡಿ ಪರದೆ ಅಳವಡಿಸಿ ಈಗಾಗಲೇ ನಗರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ಸಂವಿಧಾನದ ಜಾಗೃತಿ ಮೂಡಿಸಲಾಗುತ್ತಿದೆ. ವಿವಿಧ ಕಲಾ ತಂಡಗಳ ವೈಭವ, ಮಹಿಳೆಯರ ಕುಂಭಮೇಳ, ಆರತಿ, ಪಂಜಿನ ಮೆರವಣಿಗೆ, ಕ್ಯಾಂಡಲ್ ಮಾರ್ಚ, ಸಂವಿಧಾನ ಅರಿತ ತಜ್ಞರಿಂದ ಜನರನ್ನು ಒಗ್ಗೂಡಿಸಿ ಉಪನ್ಯಾಸ ನೀಡಲಾಗಿದೆ. ಗಾಮೀಣದಲ್ಲಿ ಎತ್ತಿನ ಗಾಡಿ, ರ್ಯಾಲಿ ಮಾಡಿ ಜನರ ಗಮನ ಸೆಳೆಯಲಾಗಿದೆ.

ಅಲ್ಲದೇ ಶಾಲಾ-ಕಾಲೇಜುಗಳಲ್ಲಿ ಮಕ್ಕಳಿಗೆ ವಿವಿಧ ಸ್ಪರ್ಧೆಗಳನ್ನು ಏರ್ಪಡಿಸಿ ಸಂವಿಧಾನದ ಶ್ರೇಷ್ಠತೆ, ಮಹತ್ವ ತಿಳಿಸಲಾಗುತ್ತಿದೆ. ಸಂವಿಧಾನ ಪೀಠಿಕೆ, ನ್ಯಾಯ, ಸಾಮಾಜಿಕ, ಆರ್ಥಿಕ ಹಾಗೂ ರಾಜಕೀಯ, ಡಾ.ಬಿ.ಆರ್.ಅಂಬೇಡ್ಕರ ಅವರ ಪರಿಕಲ್ಪನೆ, ಬಸವಣ್ಣನವರ ವಚನಗಳು, ಜಿಲ್ಲೆಯ ಸಾಧಕರು, ಐತಿಹಾಸಿಕ ಸ್ಥಳಗಳು, ಸಾಹಿತ್ಯ ದಿಗ್ಗಜರು, ಕಲಾವಿದರು, ಸಂಸ್ಕತಿ ಬಗ್ಗೆಯೂ ಜನರಲ್ಲಿ ಅರಿವು ಮೂಡಿಸಲಾಗಿದೆ. ಸಂವಿಧಾನ ಪೀಠಿಕೆ ಮುದ್ರಿಸಿ ವಿತರಣೆ ಮಾಡಲಾಗುತ್ತಿದೆ. ಈ ಮೂಲಕ ಪ್ರತಿ ಪ್ರಜೆ ತನ್ನ ಹಕ್ಕು ಮತ್ತು ಕರ್ತವ್ಯಗಳ ಬಗ್ಗೆ ಅರಿವು ಮೂಡಿಸಲಾಗುತ್ತಿದೆ. ಪ್ರತಿ ಮನ-ಮನೆಗಳಿಗೂ ಸಂವಿಧಾನ ಬಗ್ಗೆ ಅರಿವು ಮೂಡಿಸುವುದು ಈ ಜಾಥಾದ ಮೂಲ ಧ್ಯೇಯವಾಗಿದೆ ಎಂದು ಜಾಥಾ ಜವಾಬ್ದಾರಿ ವಹಿಸಿಕೊಂಡ ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ಲಕ್ಷ್ಮಣ ಬಬಲಿ ಮಾಹಿತಿ ನೀಡಿದ್ದಾರೆ.

ಭಾರತೀಯ ಪ್ರಜೆಗಳಿಗೆ ಭಾರತದ ಸಂವಿಧಾನವೇ ಮೂಲ. ಆದರೆ, ಬಹಳಷ್ಟು ಜನರಿಗೆ ಸಂವಿಧಾನದ ಬಗ್ಗೆ ಅರಿವಿಲ್ಲ. ಆದ್ದರಿಂದ ಭಾರತದ ಸಂವಿಧಾನ ಅಂಗೀಕಾರವಾಗಿ 75 ವರ್ಷಗಳಾಗಿರುವ ಹಿನ್ನಲೆಯಲ್ಲಿ ಜಾಗೃತಿ ನಡೆಯುತ್ತಿದೆ.

# "ಸ್ಪರ್ಶ" ಕುಷ್ಠರೋಗ ಜಾಗೃತಿ ಅಭಿಯಾನ ಮುಕ್ತಾಯ

ಬೆಳಗಾವಿ: ಜಿಲ್ಲೆಯಲ್ಲಿ ಜ.30 ರಿಂದ ಫೆ.13 ರವರೆಗೆ "ಸ್ಪರ್ಶ" ಕುಷ್ಠರೋಗ ಜಾಗೃತಿ ಅಭಿಯಾನವನ್ನು ಯಶಸ್ವಿಗೊಳಿಸಲಾಯಿತು. ಗ್ರಾಮ ಪಂಚಾಯತಗಳಲ್ಲಿ, ಶಾಲಾ ಕಾಲೇಜುಗಳಲ್ಲಿ, ಸಮುದಾಯ ಗುಂಪುಗಳಲ್ಲಿ, ಸ್ವ ಸಹಾಯ ಸಂಘಗಳಲ್ಲಿ, ವಸತಿ ಶಾಲೆಗಳಲ್ಲಿ ಹಾಗೂ ಹಿಂದೂಳಿದ ಜನರಿಗೆ ಕುಷ್ಠರೋಗ ಬಗ್ಗೆ ಅರಿವು ಮೂಡಿಸಲಾಗಿದೆ ಎಂದು ಜಿಲ್ಲಾ ಕುಷ್ಠರೋಗ ನಿಯಂತ್ರಣಾಧಿಕಾರಿಗಳಾದ ಗೀತಾ ಕಾಂಬಳೆ ತಿಳಿಸಿದ್ದರು.

ರಾಷ್ಟ್ರೀಯ ಕುಷ್ಠರೋಗ ನಿರ್ಮೂಲನಾ ಕಾರ್ಯಕ್ರಮದಡಿಯಲ್ಲಿ ಜಿಲ್ಲಾ




ಕುಷ್ಠರೋಗ ನಿಯಂತ್ರಣ ಅಧಿಕಾರಿಗಳ ಕಛೇರಿ ಮತ್ತು ಹಿಂಡಲಗಾ ಕುಷ್ಠರೋಗ ಆಸ್ಪತ್ರೆ ಇವರ ಸಂಯುಕ್ತ ಆಶ್ರಯದಲ್ಲಿ (ಫೆ.13) "ಸ್ಪರ್ಶ" ಕುಷ್ಠರೋಗ ಜಾಗೃತಿ ಅಭಿಯಾನ ಮುಕ್ತಾಯ ಆಚರಣೆಯಲ್ಲಿ ಅವರು ಮಾತನಾಡಿದ್ದರು.

ಕುಷ್ಠರೋಗವು ಒಂದು ಸಾಂಕ್ರಮಿಕ ರೋಗವಾಗಿದ್ದು ಇದು ಮುಖ್ಯವಾಗಿ ಚರ್ಮ ಹಾಗೂ ನರಕ್ಕೆ ಸಂಬಂಧಪಟ್ಟಿದ್ದು ದೇಹದ ಮೇಲೆ ಸ್ಪರ್ಶ ಜ್ಞಾನವಿಲ್ಲದ ಯಾವುದೆ ತರಹದ ಮಚ್ಚೆಗಳು ಇದ್ದಲ್ಲಿ ತಮ್ಮ ಸಮೀಪದ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಿ ರೋಗ ಕಂಡು ಬಂದಲ್ಲಿ ಇದನ್ನು ಬಹುಔಷಧ ಚಿಕಿತ್ಸೆಯಿಂದ ಗುಣ ಪಡಿಸಬಹುದು. ಕುಷ್ಠರೋಗಿಗಳನ್ನು ತನ್ನ ಮನೆಯ ಮಕ್ಕಳಂತೆ ನೋಡಿಕೊಂಡು ಉಪಚರಿಸುತ್ತಿರುವ ಹಿಂಡಲಗಾ ಕುಷ್ಠರೋಗ ಆಸ್ಪತ್ರೆ ಕೆಲಸವು ಶ್ಲಾಘನೀಯವಾಗಿದೆ ಎಂದು ಹೇಳಿದರು.

ಕಾರ್ಯಕ್ರಮ ಸಂಯೋಜಕರು ಹರ್ಷ ಗುಡಿಸಲಮನಿ ಇವರು ಪ್ರಸ್ತಾವಿಕವಾಗಿ ಕುಷ್ಠರೋಗಿಗಳ ಬಗ್ಗೆ ಭೇದಭಾವವಿಲ್ಲದೆ ಯಾರಿಗಾದರು ಬರಬಹುದು ರೋಗವನ್ನು ಪ್ರಾರಂಭದ ಲಕ್ಷಣಗಳಿದ್ದಾಗ ಕಂಡು ಹಿಡಿದ್ದು ಚಿಕಿತ್ಸೆಗೊಳಪಡಿಸಿದರೆ ಅಂಗವಿಕಲತೆ ಆಗುವುದಿಲ್ಲ, ಅಂಗವಿಕಲ ಕುಷ್ಠರೋಗಿಗಳನ್ನು ಆರ್.ಸಿ.ಎಸ್ ಶಸ್ತ್ರಚಿಕಿತ್ಸೆಯಿಂದ ಸರಿಪಡಿಸಲಾಗುವುದು ಎಂದು ಹೇಳಿದರು.

ಈ ಸಂದರ್ಭದಲ್ಲಿ ಎ.ಡಿ.ಎಲ್.ಓ ಭರತ ಹೆಚ್ ಬಿ, ಡಾ॥ ಸುರೇಸ ವರ್ಗಿಸ್, ಸ್ನೇಹಾ, ಪಾಟೀಲ ಶಿಕ್ಷಕರು, ಹಿಂಡಲಗಾ ಆಸ್ಪತ್ರೆಯ ಸಿಬ್ಬಂದಿಗಳು ಮತ್ತು ಜಿಲ್ಲಾ ಕುಷ್ಠರೋಗ ನಿಯಂತ್ರಣ ಅಧಿಕಾರಿಗಳ ಸಿಬ್ಬಂದಿಗಳು ಹಾಜರಾಗಿದ್ದರು.

## ಟ್ರಾಫಿಕ್ ಪೊಲೀಸ್ ಸಿಬ್ಬಂದಿಯ ಕೈ ಬೆರಳನ್ನೇ ಕಚ್ಚಿದ ಭೂಪ



ಬೆಂಗಳೂರು: ವ್ಯಕ್ತಿಯೊಬ್ಬ ಟ್ರಾಫಿಕ್ ಪೊಲೀಸ್ ಸಿಬ್ಬಂದಿಯ ಕೈ ಬೆರಳನ್ನೇ ಕಚ್ಚಿದ ಪ್ರಸಂಗವೊಂದು ಸಿಲಿಕಾನ್ ಸಿಟಿ ಬೆಂಗಳೂರಿನಲ್ಲಿ ನಡೆದಿದೆ.

ಈ ಘಟನೆ ವಿಲ್ಸನ್ ಗಾರ್ಡನ್ 10ನೇ ಕ್ರಾಸ್ ಬಳಿ ಜರುಗಿದೆ. ಸದ್ಯ ಇದರ ವೀಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ಸಖತ್ ವೈರಲ್ ಆಗುತ್ತಿದೆ. ಜೊತೆಗೆ ವ್ಯಕ್ತಿಯ ವಿರುದ್ಧ ಭಾರೀ ಆಕ್ರೋಶ ಕೇಳಿಬಂದಿದೆ.

ನಡೆದಿದ್ದೇನು..?: 28 ವರ್ಷದ ಸಯ್ಯದ್ ಸಫಿ ಎಂಬಾತ ಹೆಲ್ಮೆಟ್ ಇಲ್ಲದೇ ಸ್ಕೂಟಿ ಚಲಾಯಿಸುತ್ತಿದ್ದ. ಇದನ್ನು ಗಮನಿಸಿದ ಟ್ರಾಫಿಕ್ ಪೊಲೀಸ್ ಆತನನ್ನು ತಡೆದಿದ್ದಾರೆ. ಬಳಿಕ ಪೇದೆ ಆತನ ಬಳಿಯಿಂದ ಕೀ ಕಿತ್ತುಕೊಂಡಿದ್ದಾರೆ. ಹೆಡ್ ಕಾನ್‌ಸ್ಟೆಬಲ್ ಸಿದ್ದರಾಮೇಶ್ವರ ಕೌಜಲಗಿ ಅವರು ಟ್ರಾಫಿಕ್ ಉಲ್ಲಂಘಿಸಿದ ಪ್ರಕರಣ ದಾಖಲಿಸಿಕೊಳ್ಳಲು ವೀಡಿಯೋ ಮಾಡಿದ್ದಾರೆ.


ಕೀ ಕಿತ್ತುಕೊಂಡಿದ್ದಕ್ಕೆ ಸಿಟ್ಟಿಗೆದ್ದ ಯುವಕ, ಟ್ರಾಫಿಕ್ ಪೊಲೀಸ್ ಕೈ ಬೆರಳನ್ನೇ ಕಚ್ಚಿದ್ದಾನೆ. ಇತ್ತ ಹೆಡ್ ಕಾನ್‌ಸ್ಟೆಬಲ್‌ನ ಫೋನ್ ಕಿತ್ತುಕೊಂಡ ಸಯ್ಯದ್ ಸಫಿ, ತನ್ನ ವೀಡಿಯೋ ಯಾಕೆ ರೆಕಾರ್ಡ್ ಮಾಡುತ್ತಿದ್ದೀರಿ ಎಂದು ಪ್ರಶ್ನಿಸಿ ಅಲ್ಲಿಂದ ಎಸ್ಕೇಪ್ ಆಗಲು ಪ್ರಯತ್ನಿಸಿದ್ದಾನೆ. ಕೂಡಲೇ ಆತನನ್ನು ಹಿಡಿದು ಬಂಧಿಸಲಾಯಿತು ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಆರೋಪಿ ವಿಲ್ಸನ್ ಗಾರ್ಡನ್ 10ನೇ ಕ್ರಾಸ್‌ನಲ್ಲಿ ಟ್ರಾಫಿಕ್ ಪೇದೆಯನ್ನು ನಿಂದಿಸಿ, ಬೆರಳನ್ನು ಕಚ್ಚಿ ಗಾಯಗೊಳಿಸಿದ್ದಾನೆ ಎಂದು ಪೊಲೀಸರು ತಿಳಿಸಿದ್ದಾರೆ. ಘಟನೆ ಸಂಬಂಧ ಕರ್ತವ್ಯ ನಿರತ ಪೊಲೀಸ್ ಸಿಬ್ಬಂದಿಯನ್ನು ನಿಂದಿಸಿದ ಮತ್ತು ದೈಹಿಕವಾಗಿ ನೋವುಂಟು ಮಾಡಿದ ಆರೋಪದ ಮೇಲೆ ಶಫಿ ವಿರುದ್ಧ (ಕ್ರಿಮಿನಲ್ ಬೆದರಿಕೆ ಮತ್ತು ಶಾಂತಿ ಭಂಗ) ಪ್ರಕರಣ ದಾಖಲಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ.

## ತಾಯಿ-ಮಗಳು ಆತ್ಮಹತ್ಯೆ

ಕಲಬುರಗಿ: ತಾಯಿ ಮತ್ತು ಮಗಳು ಜಿಲ್ಲೆಯ ಶಹಾಬಾದ್ ಬಳಿಯ ಕಾಗಿಣಾ ನದಿಗೆ ಹಾರಿ ಆತ್ಮಹತ್ಯೆ ಮಾಡಿಕೊಂಡ ಘಟನೆ ಕಲಬುರಗಿ ಜಿಲ್ಲೆಯಲ್ಲಿ ನಡೆದಿದೆ.

ತಾಯಿ ಸುಮಲತಾ (45), ಹಾಗೂ ಮಗಳು ವರ್ಷಾ (22) ಆತ್ಮಹತ್ಯೆ ಮಾಡಿಕೊಂಡ ದುರ್ದೈವಿಗಳು. ಆತ್ಮಹತ್ಯೆ ಮಾಡಿಕೊಂಡ ತಾಯಿ ಮಗಳು ಕಲಬುರಗಿಯ ಎಂ.ಬಿ.




ನಗರ ಬಡಾವಣೆಯ ನಿವಾಸಿಗಳಾಗಿದ್ದಾರೆ.

ಇವರಿಬ್ಬರು ಸೋಮವಾರ ಸಂಜೆ ಯಿಂದ ನಾಪತ್ತೆಯಾಗಿದ್ದು, ರಾತ್ರಿ ಕಾಗಿಣಾ ನದಿಗೆ ಹಾರಿ ಇಬ್ಬರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಜೀವನದಲ್ಲಿ ಜಿಗುಪ್ಸೆಗೊಂಡು ತಾಯಿ-ಮಗಳು ಈ ನಿರ್ಧಾರ ತೆಗೆದುಕೊಂಡಿದ್ದಾರೆ ಎಂದು ಹೇಳಲಾಗುತ್ತಿದೆ. ಈ ಕುರಿತು ಶಹಾಬಾದ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಸಾಧಕ ಎನ್‌ಸಿಸಿ ಕೆಡೆಟ್‌ಗಳಿಗೆ ಡಾ.ಪ್ರಭಾಕರ ಕೋರೆಯವರಿಂದ ಅಭಿನಂದನೆ

ಬೆಳಗಾವಿ: ಇತ್ತೀಚಿಗೆ ನವದೆಹಲಿಯಲ್ಲಿ ಜರುಗಿದ ಗಣರಾಜ್ಯೋತ್ಸವ ಪರೇಡ್‌ದಲ್ಲಿ ಪಾಲ್ಗೊಂಡಿದ್ದ ಕೆ-ಎಲ್‌ಇ ರಾಜಾ ಲಖಮಗೌಡ ವಿಜ್ಞಾನ ಸಂಸ್ಥೆಯ ಎನ್‌ಸಿಸಿ ಆರ್ಮಿವಿಂಗ್ ಕೆಡೆಟ್ ಶಶಿ ಬಿ. ಕೆಂಚವ್ವಗೋಳ, ಏರ್‌ವಿಂಗ್ ಕೆಡೆಟ್ ಸೃಷ್ಟಿ ಕಮತೆ, ಕೆಡೆಟ್ ಗೌತಮ್ ಕೋಳೇಕರ್, ಡೆಹರಾಡೂನ್ ಐಎಂಎ ಕ್ಯಾಂಪ್‌ದಲ್ಲಿ ಪಾಲ್ಗೊಂಡಿದ್ದ ಲಿಂಗರಾಜ ಕಾಲೇಜಿನ ಸಿನಿಯರ್‌ಕೆಡೆಟ್ ಸಮೇದ ಕರೆಣ್ಣವರ



ಹಾಗೂ ಪ್ರಸ್ತಕ ಸಾಲಿನ ಕರ್ನಾಟಕ ಮತ್ತು ಗೋವಾ ನಿರ್ದೇಶನಾಲಯದ ಅತ್ಯುತ್ತಮ ಎನ್‌ಸಿಸಿ ಘಟಕ ಪ್ರಶಸ್ತಿ ಪಡೆದುಕೊಂಡ ಲಿಂಗರಾಜ ಕಾಲೇಜಿನ ಎನ್‌ಸಿಸಿ ಕೆಡೆಟ್‌ಗಳಿಗೆ ಕೆಎಲ್‌ಇ ಸಂಸ್ಥೆಯ ಕಾರ್ಯಾಧ್ಯಕ್ಷರಾದ ಡಾ.ಪ್ರಭಾಕರಕೋರೆಯವರು ಸತ್ಕರಿಸಿ ಅಭಿನಂದನೆಯನ್ನು ಸಲ್ಲಿಸಿದರು.

# ಕುರುಗೋಡು ಪಟ್ಟಣದಲ್ಲಿ ಸಂವಿಧಾನ ಜಾಗೃತಿ ಜಾಥಾಗೆ ಅದ್ದೂರಿ ಸ್ವಾಗತ; ಹಬ್ಬದ ವಾತಾವರಣ

ಬಳ್ಳಾರಿ: ಸಂವಿಧಾನ ಅಂಗೀಕಾರಗೊಂಡು 75 ವರ್ಷ ಪೂರೈಸಿದ ಹಿನ್ನಲೆಯಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಜಿಲ್ಲಾ ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಸಂವಿಧಾನದ ಆಶಯ ಮತ್ತು ಮೌಲ್ಯಗಳನ್ನು ಸಾರ್ವಜನಿಕರಿಗೆ ಅರಿವು ಮೂಡಿಸಲು ಹಮ್ಮಿಕೊಂಡಿರುವ "ಸಂವಿಧಾನ ಜಾಗೃತಿ ಜಾಥಾ"ವು ಜಿಲ್ಲೆಯಾದ್ಯಂತ ಯಶಸ್ವಿಯಾಗಿ ಸಂಚರಿಸುತ್ತಿದೆ.

ಸೋಮವಾರದಂದು ಕುರುಗೋಡು ಪಟ್ಟಣಕ್ಕೆ ಆಗಮಿಸಿದ್ದ ಸಂವಿಧಾನ ಜಾಗೃತಿ ಜಾಥಾವನ್ನು ತಾಲ್ಲೂಕು ಆಡಳಿತ ಮತ್ತು ಪುರಸಭೆ ಅಧಿಕಾರಿ ವರ್ಗದವರು, ನೇತಾರರ ವೇಷ ಭೂಷಣಗಳನ್ನು ಧರಿಸಿದ ವಿದ್ಯಾರ್ಥಿಗಳು, ಹಲಗೆ ಮತ್ತು ಡೊಳ್ಳು ಕಲಾವಿದರು, ಹಗಲು ವೇಷಗಾರರು, ಸುಡುಗಾಡು ಸಿದ್ಧರ



ವೇಷ ಧರಿಸಿದ ಸುಡುಗಾಡು ಸಿದ್ಧರು, ಶಾಲಾ ಶಿಕ್ಷಕರು ಮತ್ತು ವಿದ್ಯಾರ್ಥಿಗಳು, ಗ್ರಾಮದ ಜನಪ್ರತಿನಿಧಿಗಳು, ಊರಿನ ಮುಖಂಡರು ಹಾಗೂ ಸಾರ್ವಜನಿಕರು ಎಲ್ಲಾ ಸೇರಿ ಅತ್ಯಂತ ಸಂಭ್ರಮ, ಸಡಗರದಿಂದ ಸ್ವಾಗತಿಸಿದರು.

ಜಾಥಾವು ಕುರುಗೋಡು ಪಟ್ಟಣದ ವಿವಿಧ ವಾರ್ಡ್ಗಳಲ್ಲಿ ಮೆರವಣಿಗೆ ಮೂಲಕ ಸಾಗಿತು. ಜಾಥಾದೊಂದಿಗೆ ಶಾಲಾ ಮಕ್ಕಳ ಸೈಕಲ್ ಜಾಥಾ, ಹೂವಿನ ಸೂಸುಗ ಧರಿಸಿ ಕಳಶ ಹಿಡಿದು ಹೆಂಗಳೆಯರು, ಹಗಲು ವೇಷಧಾರಿಗಳು, ಸುಡುಗಾಡು ಸಿದ್ಧರು, ಡೊಳ್ಳು ಕಲಾವಿದರು ಭಾಗವಹಿಸಿದ್ದು, ಪಟ್ಟಣದಲ್ಲಿ ಹಬ್ಬದ ವಾತಾವರಣ ಮನೆ ಮಾಡಿತ್ತು.

ಹಗಲು ವೇಷಧಾರಿಗಳು ರಾಮಾಯಣದ ವಿವಿಧ ಪಾತ್ರಗಳ ಹಗಲು ವೇಷ ಧರಿಸಿ ರಾಮಾಯಣ ಮಹಾಕಾವ್ಯದ ಪ್ರಸಂಗವನ್ನು ಮೆರವಣಿಗೆಯುದ್ದಕ್ಕೂ ನಡೆಸಿಕೊಟ್ಟರು. ಸುಡುಗಾಡು ಸಿದ್ಧರು ಕುರ್ರಮಾಮ ವೇಷ ಧರಿಸಿ ಮಹಾಭಾರತದ ಪಾಂಡವರ ಕಥೆ ಹೇಳುತ್ತಾ ಮೆರವಣಿಗೆಗೆ ಮೆರಗು ತಂದರು. ಡೊಳ್ಳು ಕಲಾವಿದರು ಡೊಳ್ಳು ಕುಣಿತದ ಮೂಲಕ ಮನರಂಜಿಸಿದ್ದು ವಿಶೇಷವಾಗಿತ್ತು.

ಪಟ್ಟಣದ ಡಾ.ಬಿ.ಆರ್.ಅಂಬೇಡ್ಕರ್ ಪುತ್ಥಳಿಗೆ ಪೂಜೆ ಸಲ್ಲಿಸಲಾಯಿತು. ಕುರುಗೋಡು ಶ್ರೀ ದೊಡ್ಡ ಬಸವೇಶ್ವರ ದೇವಸ್ಥಾನದ ಹತ್ತಿರದ ಮುಖ್ಯ ವೃತ್ತದಲ್ಲಿ ನೀಲಿ ಬಾವುಟಗಳ ಮೂಲಕ ಸಿಂಗರಿಸಲಾಗಿತ್ತು.

ಜಾಥಾದಲ್ಲಿ ಸಂವಿಧಾನದ ಆಶಯ ಮತ್ತು ಮೌಲ್ಯಗಳನ್ನು ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲಾಯಿತು. ಸಂವಿಧಾನ ರಚನಾ ಸಭೆ ಹಾಗೂ ಸಂವಿಧಾನದ ಕುರಿತ ವೀಡಿಯೋ ತುಣುಕುಗಳನ್ನು ಸಾರ್ವಜನಿಕರಿಗೆ ಪ್ರದರ್ಶಿಸಲಾಯಿತು. ಇದೇ ಸಂದರ್ಭದಲ್ಲಿ ಸಂವಿಧಾನ ಪ್ರಸ್ತಾವನೆಯ ಪ್ರತಿಜ್ಞಾ ವಿಧಿಯನ್ನು ಸ್ವೀಕರಿಸಿ ಜಾಥಾದ ಉದ್ದಕ್ಕೂ ಸಂವಿಧಾನ ಪ್ರಸ್ತಾವನೆಯ ಪ್ರತಿಗಳನ್ನು ಹಂಚಿಕೆ ಮಾಡಲಾಯಿತು.

ಜಾಥಾ ಕಾರ್ಯಕ್ರಮದಲ್ಲಿ ತಹಶೀಲ್ದಾರ ರೇಣುಕಾ, ಪುರಸಭೆ ಮುಖ್ಯಾಧಿಕಾರಿ ಕೆ.ದುರುಗಣ್ಣ, ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿಗಳು, ಪುರಸಭೆಯ ಸದಸ್ಯರು, ವಿವಿಧ ಇಲಾಖೆಗಳ ಅಧಿಕಾರಿಗಳು, ಸಿಬ್ಬಂದಿ ವರ್ಗದವರು, ಶಾಲಾ ವಿದ್ಯಾರ್ಥಿಗಳು, ಶಿಕ್ಷಕರು, ವಿವಿಧ ಸಂಘ ಸಂಸ್ಥೆಗಳ ಪದಾಧಿಕಾರಿಗಳು ಹಾಗೂ ಸಾರ್ವಜನಿಕರು ಪಾಲ್ಗೊಂಡಿದ್ದರು.

## ಕಣಬರ್ಗಿ ವಸತಿ ಯೋಜನೆ: ಶೀಘ್ರ ಆರಂಭ

ಬೆಳಗಾವಿ: ಬೆಳಗಾವಿ ನಗರಾಭಿವೃದ್ಧಿ ಪ್ರಾಧಿಕಾರದ ವತಿಯಿಂದ ಕಣಬರ್ಗಿ ಗ್ರಾಮದ ಸರ್ವೆ ನಂಬರಗಳಲ್ಲಿ ಒಟ್ಟು 159 ಎಕರೆ- 23 ಗುಂಟೆ-8 ಆಣೆ ಕ್ಷೇತ್ರದಲ್ಲಿ ಪ್ರಾಧಿಕಾರ ಹಾಗೂ ರೈತರ ಸಹಭಾಗಿತ್ವದಲ್ಲಿ ಶೇಕಡಾ 50;50 ಅನುಪಾತದಲ್ಲಿ ವಸತಿ ಯೋಜನೆಯನ್ನು ಅನುಷ್ಠಾನಗೊಳಿಸಲು ಯೋಜನೆಯನ್ನು ಕೈಗೆತ್ತಿಕೊಳ್ಳಲಾಗಿದೆ.

ಸದರಿ ಯೋಜನೆಯಲ್ಲಿ ಒಳಗೊಂಡ ಜಮೀನುಗಳ ಪೈಕಿ ಒಟ್ಟು 29ಎಕರೆ-16ಗುಂಟೆ-06ಆಣೆ ಕ್ಷೇತ್ರದ ಜಮೀನುಗಳಿಗೆ ರಿಟ್ ಅರ್ಜಿ ಸಂಖ್ಯೆ: 106336-106346/2014 ರನ್ವಯ ಮಾನ್ಯ ಉಚ್ಚ ನ್ಯಾಯಾಲಯದ ತಡೆಯಾಜ್ಞೆ ಇದ್ದು, ಸದರಿ ಜಮೀನನ್ನು ಹೊರತು ಪಡಿಸಿ ಉಳಿದ ಕ್ಷೇತ್ರವನ್ನು ಅಭಿವೃದ್ಧಿ ಪಡಿಸಲು ಸರ್ಕಾರದಿಂದ ಅನುವೋದನೆ ಪಡೆದು ಟೆಂಡರ್ ಕರೆಯಲಾಗಿದೆ.

ಸದರಿ ಯೋಜನೆಯ ಪ್ರಾಥಮಿಕ ಕಾಮಗಾರಿಯನ್ನು 10 ದಿನಗಳಲ್ಲಿ ಪ್ರಾರಂಭಿಸಲು ನಿಯಮಾನುಸಾರ ಕ್ರಮ ವಹಿಸಲಾಗುವುದು ಎಂದು ಬೆಳಗಾವಿ ನಗರಾಭಿವೃದ್ಧಿ ಪ್ರಾಧಿಕಾರ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಆಯುಗಣ್ಮಾನ್ ಭವ' ಮೇಳಗಳಲ್ಲಿಯೇ 8875 ಆಭಾ ಕಾರ್ಡ್ ಸೃಜನೆ


## ಸಾರ್ವಜನಿಕರು ತಮ್ಮ ಮೊಬೈಲ್ ಮೂಲಕವೂ ಸಹ ಕಾರ್ಡ್ ಪಡೆಯಲು ಅವಕಾಶ: ಡಿಹೆಚ್‌ಓ ಡಾ.ವೈ.ರಮೇಶ್ಬಾಬು

ಬಳ್ಳಾರಿ: ಕಡು ಬಡವರು ಸಹಿತ ಉನ್ನತ ಮಟ್ಟದ ಆಸ್ಪತ್ರೆಗಳಲ್ಲಿ ಗುಣಮಟ್ಟದ ಆರೋಗ್ಯ ಸೇವೆಗಳನ್ನು ಪಡೆಯಲು ಸರ್ಕಾರ ರೂಪಿಸಿರುವ "ಆಯುಷ್ಮಾನ್ ಭಾರತ್ – ಪ್ರಧಾನಮಂತ್ರಿ ಜನ ಆರೋಗ್ಯ ಯೋಜನಾ – ಮುಖ್ಯಮಂತ್ರಿ ಆರೋಗ್ಯ ಕರ್ನಾಟಕ" ಕಾರ್ಡ್ಗಳನ್ನು ಜಿಲ್ಲೆಯ ಎಲ್ಲಾ ಆರೋಗ್ಯ ಕೇಂದ್ರಗಳಲ್ಲಿ ಪ್ರತಿ ಮಂಗಳವಾರದಂದು ಹಮ್ಮಿಕೊಳ್ಳುವ ಆಯುಷ್ಮಾನ್ ಭವ ಮೇಳಗಳಲ್ಲಿಯೇ ಸೃಜನೆ ಮಾಡಿ ವಿತರಿಸಲಾಗುತ್ತಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ವೈ. ರಮೇಶ್ ಬಾಬು ಅವರು ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ಹೊರಡಿಸಿರುವ ಅವರು, ಜಿಲ್ಲೆಯಲ್ಲಿ ಈವರೆಗೆ 8875 ಕಾರ್ಡ್ಗಳನ್ನು ಆಯುಷ್ಮಾನ್ ಭವಃ ಮೇಳಗಳಲ್ಲಿಯೇ ಸೃಜನೆ ಮಾಡಿಕೊಡಲಾಗಿದ್ದು, ಸಾರ್ವಜನಿಕರು ಇದರ ಸದುಪಯೋಗಕ್ಕಾಗಿ ಹತ್ತಿರದ ಆರೋಗ್ಯ ಕೇಂದ್ರಗಳಿಗೆ ತೆರಳಿ ಕಾರ್ಡ್ ಮಾಡಿಸಿಕೊಳ್ಳುವ ಮೂಲಕ ಈ ಯೋಜನೆಯ ಸದುಪಯೋಗ ಪಡೆದುಕೊಳ್ಳಬೇಕು ಎಂದು ಅವರು ವಿನಂತಿಸಿದ್ದಾರೆ.

ಗಂಭಿರ ಆರೋಗ್ಯ ಸಮಸ್ಯೆಗಳ ಚಿಕಿತ್ಸಾ ಸಂದರ್ಭದಲ್ಲಿ ಬಿಪಿಎಲ್ ಕುಟುಂಬಗಳಿಗೆ ವಾರ್ಷಿಕ ರೂ.5 ಲಕ್ಷ ಹಾಗೂ ಎಪಿ-ಎಲ್ ಕುಟುಂಬಗಳಿಗೆ 1.5 ಲಕ್ಷದವರೆಗೆ ಉಚಿತ ಚಿಕಿತ್ಸಾ ವೆಚ್ಚದ ಸೌಲಭ್ಯವನ್ನು ಈ ಕಾರ್ಡ್ಗಳಿಂದ ಪಡೆದುಕೊಳ್ಳಬಹುದಾಗಿದೆ ಎಂದೂ ಅವರು ತಿಳಿಸಿದ್ದಾರೆ.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಬೆಂಬಲದೊಂದಿಗೆ ಜಿಲ್ಲೆಯಾದ್ಯಂತ ವಿಮ್ಸ್ ಹಾಗೂ ಜಿಲ್ಲಾ ಆಸ್ಪತ್ರೆ ಮತ್ತು ಸ್ಥಳೀಯ ತಜ್ಞ ವೈದ್ಯರುಗಳಿಂದ ಸಮುದಾಯ ಆರೋಗ್ಯ ಕೇಂದ್ರಗಳಲ್ಲಿ ವೈದ್ಯಾಧಿಕಾರಿಗಳಿಂದ ಪ್ರಾಥಮಿಕ ಆರೋಗ್ಯ ಕೇಂದ್ರಗಳು, ನಗರ ಪ್ರಾಥಮಿಕ ಆರೋಗ್ಯ ಕೇಂದ್ರಗಳು, ನಮ್ಮ ಕ್ಲಿನಿಕ್ಗಳಲ್ಲಿ ಹಾಗೂ ಸಮುದಾಯ ಆರೋಗ್ಯ ಅಧಿಕಾರಿ, ಪ್ರಾಥಮಿಕ ಆರೋಗ್ಯ ಸುರಕ್ಷತಾಧಿಕಾರಿ, ಆರೋಗ್ಯ ನಿರೀಕ್ಷಣಾಧಿಕಾರಿಗಳ ಮೂಲಕ ಉಪಕೇಂದ್ರ – ಆರೋಗ್ಯ ಮತ್ತು ಕ್ಷೇಮ ಕೇಂದ್ರಗಳಲ್ಲಿ ಜರುಗಿರುವ ಮೇಳಗಳಲ್ಲಿ ಇಲ್ಲಿಯವರೆಗೆ ಒಟ್ಟು 111536 ಜನ ಭಾಗವಹಿಸಿ ವಿವಿಧ ರೋಗಗಳಿಗೆ ತಪಾಸಣೆ ಮಾಡಿಸಿಕೊಂಡಿದ್ದಾರೆ ಎಂದು ಅವರು




ತಿಳಿಸಿದ್ದಾರೆ.

ಜಿಲ್ಲೆಯಲ್ಲಿ ಆಯುಷ್ಮಾನ್ ಭವಃ ದಡಿಯಲ್ಲಿ ಇಲ್ಲಿಯವರೆಗೆ ಒಟ್ಟು 2475 ಆರೋಗ್ಯ ಮೇಳಗಳನ್ನು ಆಯೋಜಿಸಲಾಗಿದೆ. ಮೇಳಗಳಲ್ಲಿ 10534 ಗರ್ಭಿಣಿಯರು, ತಪಾಸಣೆ ಮಾಡಿಸಿಕೊಂಡಿದ್ದು, 83436 ಜನಕ್ಕೆ ರಕ್ತದೊತ್ತಡ ಮತ್ತು 79990 ಜನರಿಗೆ ಮಧುಮೇಹ ಪರೀಕ್ಷೆ ಕೈಗೊಳ್ಳಲಾಗಿದೆ.

ಅಲ್ಲದೇ 44216 ಜನರಿಗೆ ಬಾಯಿ ಕ್ಯಾನ್ಸರ್, 13804 ಜನರಿಗೆ ಸ್ತನ ಕ್ಯಾನ್ಸರ್, 7040 ಜನರಿಗೆ ಗರ್ಭಕಂಠದ ಕ್ಯಾನ್ಸರ್ ಪರೀಕ್ಷೆ ಮಾಡಲಾಗಿದೆ. 10514 ಜನರಿಗೆ ನೇತ್ರ ಪರೀಕ್ಷೆ ಮಾಡಲಾಗಿದ್ದು, 11551 ಜನರಿಗೆ ಕ್ಷಯರೋಗದ ಪರೀಕ್ಷೆ ಮಾಡಲಾಗಿದೆ. 7649 ಜನರಿಗೆ ಕುಷ್ಠರೋಗ ಪರೀಕ್ಷೆ ಕೈಗೊಳ್ಳಾಗಿದೆ. 4495 ಜನರಿಗೆ ಕುಟುಂಬ ಕಲ್ಯಾಣದ ವಿಧಾನಗಳ ಸೇವೆಗಳನ್ನು ಒದಗಿಸಲಾಗಿದೆ. ಶಿಬಿರಗಳಲ್ಲಿ ಇ-ಸಂಜೀವಿನಿ ಆಪ್ ಮೂಲಕ ತಜ್ಞ ವೈದ್ಯರನ್ನು ಯಾವುದೇ ಹಣದ ವೆಚ್ಚವಿಲ್ಲದೆ 13955 ಜನ ಸಂಪರ್ಕಿಸಿದ್ದಾರೆ. ಶಿಬಿರದಲ್ಲಿ 8018 ಜನರಿಗೆ ಆಯುಷ್ ಪದ್ದತಿ ಸೇವೆ ನೀಡಲಾಗಿದೆ. ಮೇಳಗಳಲ್ಲಿ 1686 ಆಹಾರ ಪರೀಕ್ಷೆಗಳನ್ನು ಕೈಗೊಳ್ಳಲಾಗಿದೆ.

**ಭ್ರೂಣಲಿಂಗ ಪತ್ತೆ ನಿಷೇಧ ಕಾಯ್ದೆ ಜಾಗೃತಿ:** ಮೇಳಗಳಢಲ್ಲಿ ಹೆಣ್ಣುಭ್ರೂಣ ಹತ್ಯೆ ತಡೆಗಟ್ಟುವಿಕೆಗಾಗಿ ಪ್ರತಿಯೊಬ್ಬರಿಗೂ ಭ್ರೂಣಲಿಂಗ ಪತ್ತೆ ನಿಷೇಧ ಕಾಯ್ದೆ 1994ರ ಕುರಿತು ಜಾಗೃತಿಯನ್ನು ನೀಡಲಾಗುತ್ತಿದ್ದು, ಭ್ರೂಣಲಿಂಗ ಪತ್ತೆಗೆ ಸಂಬಂಧಿಸಿದ ಯಾವುದೇ ಜಾಹೀರಾತುಗಳಿಗೆ 3 ವರ್ಷ ಜೈಲು ಶಿಕ್ಷೆ, ರೂ.10 ಸಾವಿರ ದಂಡ ಇದೆ. ವೈದ್ಯರು ಭ್ರೂಣಲಿಂಗ ಪತ್ತೆ ಮಾಡಿದಲ್ಲಿ ಮೊದಲ ಅಪರಾಧಕ್ಕೆ 3 ವರ್ಷ ಜೈಲು ಶಿಕ್ಷೆ ರೂ.10 ಸಾವಿರ ದಂಡ ಮತ್ತು 2ನೇ ಬಾರಿ ಅಪರಾಧಕ್ಕೆ 5 ವರ್ಷ ಜೈಲು ಶಿಕ್ಷೆ ರೂ.50 ಸಾವಿರ ದಂಡವಿದೆ.

ಅಲ್ಲದೇ ಗರ್ಭಿಣಿ ಮಹಿಳೆಗೆ ಕುಟುಂಬದ ಸದಸ್ಯರು ಭ್ರೂಣಲಿಂಗ ಪತ್ತೆಗೆ ಒತ್ತಾಯಿಸಿದರೆ. ಮೊದಲ ಅಪರಾಧಕ್ಕೆ 3 ವರ್ಷ ಜೈಲು ಶಿಕ್ಷೆ ಹಾಗೂ 50 ಸಾವಿರ ರೂ.ದಂಡ, ಪುನಃ 2ನೇ ಬಾರಿ ಭ್ರೂಣಲಿಂಗ ಪತ್ತೆ ಮಾಡಿಸಿದಲ್ಲಿ 5 ವರ್ಷ ಜೈಲು ಶಿಕ್ಷೆ ರೂ.1 ಲಕ್ಷ ದಂಡವಿದೆ ಎಂದಿದ್ದಾರೆ.

ಆಯುಷ್ಮಾನ್ ಭಾರತ ಹೆಲ್ತ್ ಅಕೌಂಟ್ ಮಾಡಿಸುವ ಮೂಲಕ ದೇಶದ ಯಾವುದೆ ಭಾಗದಲ್ಲಿ ಚಿಕಿತ್ಸೆಗೆ ತೆರಳಿದರೂ ಸಹ ಸಕಾಲದಲ್ಲಿ ಚಿಕಿತ್ಸೆಯನ್ನು ನೀಡಲು ಸಹಕಾರಿಯಾಗಿದ್ದು, ಪ್ರತಿಯೊಬ್ಬರೂ ತಪ್ಪದೇ ನೋಂದಣಿ ಮಾಡಿಸಬೇಕು ಎಂದು ಅವರು ತಿಳಿಸಿದ್ದಾರೆ.

ಜಿಲ್ಲೆಯಲ್ಲಿ ಆರೋಗ್ಯ ಮೇಳಗಳ ಯಶಸ್ವಿಗಾಗಿ ಜಿಲ್ಲಾ ಸರ್ವೇಕ್ಷಣಾಧಿಕಾರಿಗಳು ಮತ್ತು ತಂಡ ಜಿಲ್ಲಾ ಕಾರ್ಯಕ್ರಮ ಅನುಷ್ಠಾನ ಅಧಿಕಾರಿಗಳು ಹಾಗೂ ತಾಲ್ಲೂಕ ಆರೋಗ್ಯ ಅಧಿಕಾರಿಗಳು ಸೂಕ್ತ ಮೇಲ್ವಿಚಾರಣೆ ಕೈಗೊಳ್ಳಲಾಗುತ್ತಿದ್ದು, ಆಶಾ ಕಾರ್ಯಕರ್ತೆಯರು ಮನೆ ಮನೆಗೆ ತೆರಳಿ ಮಾಹಿತಿ ನೀಡುತ್ತಿದ್ದು, ಆರೋಗ್ಯ ಶಿಕ್ಷಣಾಧಿಕಾರಿಗಳು ಆರೋಗ್ಯ ಜಾಗೃತಿ ಕಾರ್ಯ ಕೈಗೊಳ್ಳುತ್ತಿದ್ದಾರೆ. ಸಾರ್ವಜನಿಕರು ಮೇಳಗಳಲ್ಲಿ ಭಾಗವಹಿಸಿ ಆರೋಗ್ಯಯುತ ಬಳ್ಳಾರಿ ಜಿಲ್ಲೆಯನ್ನಾಗಿಸಲು ಸಹಕರಿಸಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ವೈ.ರಮೇಶ್ ಬಾಬು ಅವರು ಕೋರಿದ್ದಾರೆ.

## ಕೈಗಾರಿಕಾ ತರಬೇತಿ ಸಂಸ್ಥೆ ಪ್ರಕಟಣೆ

ಧಾರವಾಡ: ಕೈಗಾರಿಕಾ ತರಬೇತಿ ಸಂಸ್ಥೆಗಳಲ್ಲಿ 2017–19 ರ ಸಾಲಿನಲ್ಲಿ 2 ವರ್ಷದ ಅವಧಿಯ ವೃತ್ತಿಗಳಿಗೆ ಪ್ರವೇಶ ಪಡೆದು ಪರೀಕ್ಷೆಯಲ್ಲಿ ಅನುತ್ತೀರ್ಣರಾಗಿರುವ ಸೆಮಿಸ್ಟರ್ ಪದ್ಧತಿಯ ಅಭ್ಯರ್ಥಿಗಳಿಗೆ ಪರೀಕ್ಷೆಗೆ ಹಾಜರಾಗಲು ಕೊನೆಯ ಅವಕಾಶ ಕಲ್ಪಿಸಲಾಗಿದೆ.

ಪರೀಕ್ಷಾ ಶುಲ್ಕ ಪಾವತಿಸಲು ಫೆ.15,2024 ರವರೆಗೆ ಕಾಲಾವಕಾಶವಿದ್ದು ಅನುತ್ತೀರ್ಣ ಅಭ್ಯರ್ಥಿಗಳು ಹತ್ತಿರದ ಸರಕಾರಿ ಕೈಗಾರಿಕಾ ತರಬೇತಿ ಸಂಸ್ಥೆಗಳಿಗೆ ಭೇಟಿ ನೀಡಿ ಅಗತ್ಯ ಮಾಹಿತಿ ಪಡೆದು ಅರ್ಜಿ ಸಲ್ಲಿಸಬಹುದಾಗಿದೆ ಎಂದು ಧಾರವಾಡ ಸರಕಾರಿ ಕೈಗಾರಿಕಾ ತರಬೇತಿ ಸಂಸ್ಥೆ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜಿಲ್ಲಾ ಪೊಲೀಸ್ ಇಲಾಖೆ; ಫೆ.25 ರಂದು ಪೊಲೀಸ್ ಕಾನ್ಸ್ಟೇಬಲ್ ಹುದ್ದೆಗಳ ಭರ್ತಿಗಾಗಿ ಲಿಖಿತ ಪರೀಕ್ಷೆ

ಧಾರವಾಡ: ಕರ್ನಾಟಕ ರಾಜ್ಯ ಪೊಲೀಸ್ ಇಲಾಖೆಯಲ್ಲಿ ಖಾಲಿ ಇರುವ ಪೊಲೀಸ್ ಕಾನ್ಸ್ಟೇಬಲ್ (ಸಿವಿಲ್)(ಪುರುಷ ಮತ್ತು ಮಹಿಳಾ) & (ತೃತೀಯ ಲಿಂಗ ಪುರಷ ಮತ್ತು ಮಹಿಳಾ) ಹಾಗೂ ಸೇವಾನಿರತ & ಬ್ಯಾಕ್ಲಾಗ್–1137 ಹುದ್ದೆಗಳಿಗೆ ಲಿಖಿತ ಪರೀಕ್ಷಯನ್ನು ಫೆಬ್ರವರಿ 25, 2024 ರಂದು ಬೆಳಿಗ್ಗೆ 11 ರಿಂದ 12:30 ಗಂಟೆಯವರೆಗೆ ರಾಜ್ಯಾದ್ಯಂತ ನಡೆಸಲಾಗುವುದು.

ಆದ್ದರಿಂದ, ಸದರಿ ಲಿಖಿತ ಪರೀಕ್ಷೆಗೆ ಅರ್ಹರಿರುವ ಅಭ್ಯರ್ಥಿಗಳಿಗೆ ಕರೆ ಪತ್ರದ ಬಗ್ಗೆ ಮುಂಬರುವ ದಿನಗಳಲ್ಲಿ ಎಸ್.ಎಂ.ಎಸ್ ಮೂಲಕ ಮಾಹಿತಿಯನ್ನು ನೀಡಲಾಗುವುದು ಹಾಗೂ ಕರೆಪತ್ರದ ಲಿಂಕ್‌ಅನ್ನು ಸಹ ಕಳುಹಿಸಲಾಗುವುದು. ಅಭ್ಯರ್ಥಿಗಳು ಕರೆಪತ್ರವನ್ನು ಡೌನ್ಲೋಡ್ ಮಾಡಿಕೊಂಡು ನಿಗದಿಪಡಿಸಿದ ದಿನಾಂಕದಂದು ಲಿಖಿತ ಪರೀಕ್ಷೆಗೆ ಹಾಜರಾಗಲು ಸೂಚಿಸಿದೆ ಹಾಗೂ ಸದರಿ ಲಿಖಿತ ಪರೀಕ್ಷೆಗೆ ಹಾಜರಾಗುವ ಅಭ್ಯರ್ಥಿಗಳು ಕಡ್ಡಾಯವಾಗಿ ಈ ಕೆಳಕಂಡ ವಸ್ತ್ರ ಸಂಹಿತೆಯನ್ನು ಪಾಲಿಸತಕ್ಕದ್ದು ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಗೋಪಾಲ ಬ್ಯಾಕೋಡ ಅವರು ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಪುರುಷ ಮತ್ತು ತೃತೀಯಲಿಂಗ ಪುರುಷ ಅಭ್ಯರ್ಥಿಗಳು ಅರ್ಧ ತೋಳಿನ ಶರ್ಟ್‌ಗಳನ್ನು ಕಡ್ಡಾಯವಾಗಿ ಧರಿಸುವುದು ಹಾಗೂ ಸಾಧ್ಯವಾದಷ್ಟು ಕಾಲರ್ ರಹಿತ ಶರ್ಟ್‌ಗಳನ್ನು ಧರಿಸುವುದು, ಜಿಪ್ ಪ್ಯಾಕೆಟ್ಗಳು ದೊಡ್ಡ ಬಟನ್ಗಳು ಇರುವ ಶರ್ಟ್‌ಗಳನ್ನು ಧರಿಸತಕ್ಕದ್ದಲ್ಲ. ಜೀನ್ಸ್ ಪ್ಯಾಂಟ್ ಮತ್ತು ಹೆಚ್ಚಿನ ಜೇಬುಗಳಿರುವ ಪ್ಯಾಂಟ್ಗಳನ್ನು ಧರಿಸತಕ್ಕದ್ದಲ್ಲ. ಪರೀಕ್ಷಾ ಕೇಂದ್ರದೊಳಗೆ ಷೂಗಳನ್ನು ನಿಷೇಧಿಸಲಾಗಿದ್ದು, ಅಭ್ಯರ್ಥಿಗಳು ತೆಳುವಾದ ಅಡಿಭಾಗವಿರುವ ಪಾದರಕ್ಷೆಗಳನ್ನು (ಚಪ್ಪಲಿ) ಧರಿಸಿರಬೇಕು. ಕುತ್ತಿಗೆ ಸುತ್ತಾ ಯಾವುದೇ ಲೋಹದ ಆಭರಣಗಳು ಅಥವಾ ಉಂಗುರ ಮತ್ತು ಕಡಗಗಳನ್ನು ಧರಿಸುವುದು ನಿಷೇದಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ.

ಮಹಿಳಾ ಮತ್ತು ತೃತೀಯಲಿಂಗ ಮಹಿಳಾ ಅಭ್ಯರ್ಥಿಗಳು ವಿಸ್ತಾರವಾದ ಕಸೂತಿ, ಹೂಗಳು, ಬ್ರೂಚಗಳು ಅಥವಾ ಬಟನ್ಗಳು ಹೊಂದಿರುವ ಬಟ್ಟೆಗಳನ್ನು ಧರಿಸುವುದು ನಿಷೇಧಿಸಲಾಗಿದೆ. ಪರೀಕ್ಷೆಯ ದಿನದಂದು ಪೂರ್ಣ ತೋಳಿನ ಬಟ್ಟೆಗಳನ್ನು, ಜೀನ್ಸ್ ಪ್ಯಾಂಟ್ ಧರಿಸಬಾರದು, ಅದರ ಬದಲಾಗಿ ಅರ್ಧ ತೋಳಿನ ಬಟ್ಟೆಗಳನ್ನು ಅವರಿಗೆ ಮುಜುಗರವಾಗದಂತೆ ಅಭ್ಯರ್ಥಿಗಳು ಧರಿಸುವಂತೆ ನಿರ್ದೇಶಿಸಲಾಗಿದೆ.

ಎತ್ತರವಾದ ಹಿಮ್ಮಡಿಯ ಶೂಗಳನ್ನು, ಚಪ್ಪಲಿಗಳನ್ನು ಮತ್ತು ದಪ್ಪವಾದ ಅಡಿ ಭಾಗ ಹೊಂದಿರುವ ಶೂಗಳನ್ನಾಗಲಿ, ಚಪ್ಪಲಿಗಳನ್ನಾಗಲಿ ಧರಿಸಬಾರದು, ತೆಳುವಾದ ಅಡಿಭಾಗ ಹೊಂದಿರುವ ಚಪ್ಪಲಿಗಳು ಧರಿಸುವುದು ಕಡ್ಡಾಯವಾಗಿದೆ.

ಮಹಿಳಾ ಮತ್ತು ತೃತೀಯಲಿಂಗ ಮಹಿಳಾ ಅಭ್ಯರ್ಥಿಗಳು ಮಂಗಳಸೂತ್ರ ಮತ್ತು ಕಾಲುಂಗುರ ಹೊರತುಪಡಿಸಿ, ಯಾವುದೇ ರೀತಿಯ ಲೋಹದ ಆಭರಣಗಳನ್ನು ಧರಿಸುವುದು ನಿಷೇಧಿಸಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಂತ ಶ್ರೀ ಸೇವಾಲಾಲ್ ಜಯಂತಿ

ಶಿವಮೊಗ್ಗ: ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಾನಗರ ಪಾಲಿಕೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಜಿಲ್ಲಾ ಬಂಜಾರ ಸಂಘ ಶಿವಮೊಗ್ಗ ಇವರ ಸಂಯಕ್ತಾಶ್ರಯದಲ್ಲಿ ಫೆ.15 ರ ಬೆಳಗ್ಗೆ 11 ಗಂಟೆಗೆ ನಗರದ ಕುವೆಂಪು ರಂಗಮಂದಿರದಲ್ಲಿ ಸಂತ ಶ್ರೀ ಸೇವಾಲಾಲ್ ಜಯಂತಿಯನ್ನು ಏರ್ಪಡಿಸಲಾಗಿದೆ.

ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖಾ ಹಾಗೂ ಶಿವಮೊಗ್ಗ ಜಿಲ್ಲಾ ಉಸ್ತುವಾರಿ ಸಚಿವ ಎಸ್. ಮಧುಬಂಗಾರಪ್ಪ ಇವರು ಕಾರ್ಯಕ್ರಮದ ಉದ್ಘಾಟನೆ ನೆರವೇರಿಸುವರು. ಶಾಸಕರಾದ ಎಸ್. ಎನ್. ಚನ್ನಬಸಪ್ಪರವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವ ತಂಗಡಗಿ ಶಿವರಾಜ್ ಸಂಗಪ್ಪ ಮತ್ತು ಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಸಚಿವ ಹಾಗೂ ಮಲೆನಾಡು ಪ್ರದೇಶ ಅಭಿವೃದ್ಧಿ ಮಂಡಳಿ ಅಧ್ಯಕ್ಷ ಡಿ. ಸುಧಾಕರ್ ಇವರುಗಳು ವಿಶೇಷ ಆಹ್ವಾನಿತರಾಗಿ ಉಪಸ್ಥಿತರಿರಲಿದ್ದಾರೆ.

ಕಾರ್ಯಕ್ರಮದಲ್ಲಿ ಸಂಸದರು, ವಿಧಾನಸಭಾ ಮತ್ತು ವಿಧಾನ ಪರಿಷತ್ ಶಾಸಕರು, ಪಾಲಿಕೆ ಮಹಾಪೌರರು, ಜನಪ್ರತಿನಿಧಿಗಳು, ವಿವಿಧ ನಿಗಮ, ಮಂಡಳಿ, ಪ್ರಾಧಿಕಾರಗಳ ಅಧ್ಯಕ್ಷರು, ಜಿಲ್ಲಾ ಬಂಜಾರ ಸಂಘದ ಉಪಾಧ್ಯಕ್ಷರು, ಪದಾಧಿಕಾರಿಗಳು, ಜಿಲ್ಲಾಧಿಕಾರಿಗಳು, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು, ಜಿ.ಪಂ ಸಿಇಓ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಹಾಗೂ ಮಹಾನಗರ ಪಾಲಿಕೆ ಆಯುಕ್ತರು ಮತ್ತು ಇನ್ನಿತರ ಗಣ್ಯರು, ಅಧಿಕಾರಿಗಳು ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳುವರು.

ಯುವ ಲೇಖಕ ಹಾಗೂ ಬಂಜಾರ ಸಂಸ್ಕೃತಿ ಚಿಂತಕ ರುದ್ರು ಪುನೀತ್ರವರಿಂದ ವಿಶೇಷ ಉಪನ್ಯಾಸ ಆಯೋಜಿಸಲಾಗಿದೆ.

## ಬೆಳಗಾವಿ: ಪತ್ರಕರ್ತರಿಗೆ ಸಹಾಯಧನಕ್ಕಾಗಿ ಅರ್ಜಿ ಆಹ್ವಾನ

ಬೆಳಗಾವಿ: ಪರಿಶಿಷ್ಟ ಜಾತಿಯ ಪತ್ರಕರ್ತರಿಗೆ ಎಲೆಕ್ಟ್ರಾನಿಕ್ ಹಾಗೂ ಡಿಜಿಟಲ್ ಮಾಧ್ಯಮದಲ್ಲಿ ಉದ್ದಿಮೆಯನ್ನು ಸ್ಥಾಪಿಸಲು ಸಹಾಯಧನಕ್ಕೆ ಅರ್ಜಿಯನ್ನು ಆಹ್ವಾನಿಸಲಾಗಿದ್ದು, ಫೆ.26 ರ ಸಂಜೆ 5.30 ಗಂಟೆ ಒಳಗಾಗಿ ಸಲ್ಲಿಸಬಹುದು ಎಂದು ಸಮಾಜ ಕಲ್ಯಾಣ ಜಂಟಿ ನಿರ್ದೇಶಕರು ತಿಳಿಸಿದ್ದಾರೆ.

ಕನಿಷ್ಠ 30 ವರ್ಷ ಗರಿಷ್ಠ 50 ವರ್ಷ ವಯೋಮಿತಿ ಇರಬೇಕು. ವಾರ್ಷಿಕ ಆದಾಯ 10 ಲಕ್ಷ ಒಳಗಿರಬೇಕು. ಕನಿಷ್ಟ 10 ವರ್ಷಗಳ ಕಾಲ ಸೇವಾನುಭವ ಹೊಂದಿರಬೇಕು. ಬೆಳಗಾವಿ ನಗರ ವ್ಯಾಪ್ತಿಯಲ್ಲಿ ಅಭ್ಯರ್ಥಿಗಳು ವೆಬ್‌ಸೈಟ್‌ನಲ್ಲಿ ಅರ್ಜಿಯನ್ನು ಡೌನ್‌ಲೋಡ್ ಮಾಡಿ, ಭರ್ತಿ ಮಾಡಿದ ಅರ್ಜಿಗಳನ್ನು ನೆಹರು ನಗರ ಸಮಾಜ ಕಲ್ಯಾಣ ಇಲಾಖೆ ಕಚೇರಿಗೆ ಸಲ್ಲಿಸಬೇಕು ಎಂದು ಸಮಾಜ ಕಲ್ಯಾಣಯ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಂಚಾರ ನಿಯಮ ಪಾಲಿಸಿ; ಹೆಲ್ಮೇಟ್, ಸಿಟ್ ಬೆಲ್ಟ್ ಧರಿಸಿ: ಜಿಲ್ಲಾಧಿಕಾರಿ ದಿವ್ಯ ಪ್ರಭು

ಧಾರವಾಡ: ವಾಹನ ಸವಾರರು ಸಂಚಾರ ನಿಯಮಗಳನ್ನು ಪಾಲಿಸುವ ಮೂಲಕ ತಮ್ಮ ಜೀವದೊಂದಿಗೆ ಇತರರ ಜೀವವನ್ನು ಕಾಪಾಡಬೇಕು. ಪ್ರತಿಯೋಬ್ಬರು ಸ್ವಯಂ ಪ್ರೇರಣೆಯಿಂದ ನಿಯಮಗಳನ್ನು ಪಾಲಿಸುವುದರಿಂದ ಸುರಕ್ಷಿತ ಸಂಚಾರ ಸಾದ್ಯವಾಗುತ್ತದೆ ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಹೇಳಿದರು.

ಅವರು ನಗರದ ಕೆಸಿಡಿ ಆವರಣದಲ್ಲಿ ಜಿಲ್ಲಾಡಳಿತ, ಸಾರಿಗೆ ಇಲಾಖೆ, ಪೊಲೀಸ್ ಇಲಾಖೆ, ಕೆಸಿಡಿ ಕಾಲೇಜು, ಎನ್‌ಎಸ್–ಎಸ್ ಘಟಕ ಹಾಗೂ ಇತರ ವಿಭಾಗಗಳ ಸಹಯೋಗದಲ್ಲಿ ಹಮ್ಮಿಕೊಳ್ಳಲಾಗಿದ್ದ ರಾಷ್ಟ್ರೀಯ ರಸ್ತೆ ಸುರಕ್ಷತಾ ಮಾಸದ ಅಂಗವಾಗಿ ಕಾಲ್ನಡಿಗೆ ಜಾಥಾ ಕಾರ್ಯಕ್ರಮವನ್ನು ಹಸಿರು ನಿಶಾನೆ ತೋರಿಸುವ ಮೂಲಕ ಉದ್ಘಾಟಿಸಿ, ಮಾತನಾಡಿದರು.

ಜಿಲ್ಲೆಯಲ್ಲಿ ರಾಷ್ಟ್ರೀಯ ಹಾಗೂ ರಾಜ್ಯ ಹೆದ್ದಾರಿಗಳು ಇದ್ದು, ವಾಹನಗಳ ದಟ್ಟಣೆ ಅಧಿಕವಾಗಿದೆ ಮತ್ತು ವಾಹನಗಳ ಸಂಖ್ಯೆಯು ಹೆಚ್ಚಾಗಿದೆ. ವಾಹನ ಸವಾರರು ಜಾಗರೂಕತೆಯಿಂದ ಮತ್ತು ಸಂಚಾರಿ ನಿಯಮಗಳನ್ನು ಪಾಲಿಸುವ ಅಗತ್ಯವಿದೆ. ಅನೇಕರು ವಿಶೇಷವಾಗಿ ಯುವಕರು ವಾಹನವನ್ನು ಸುರಕ್ಷತಾ ಕ್ರಮಗಳನ್ನು ಅನುಸರಿಸದೆ ವಾಹನ ಚಲಾಯಿಸುತ್ತಾರೆ. ರಸ್ತೆಯ ಸಂಚಾರದ ವೇಗದ ಮಿತಿಗೆ ಅನುಸಾರವಾಗಿ ವಾಹನ ಓಡಿಸದೆ, ವೇಗವಾಗಿ ವಾಹನ ಚಲಾಯಿಸುವುದರಿಂದ ಅಪಘಾತಗಳು ಉಂಟಾಗುತ್ತವೆ ಎಂದು ಹೇಳಿದರು.

ಪ್ರತಿಯೊಬ್ಬ ನಾಗರಿಕರು ವಾಹನ ಚಲಾಯಿಸುವಾಗ ಹೆಲ್ಮೇಟ್ ಧರಿಸಬೇಕು ಮತ್ತು ಸಿಟ್ಬೆಲ್ಟ್ ಧರಿಸಬೇಕು ಈ ಕುರಿತು ನಾಗರಿಕರಲ್ಲಿ ಜಾಗೃತಿ ಮೂಡಿಸುವ ಅಗತ್ಯವಿದೆ ಎಂದು ಅವರು ಹೇಳಿದರು.



ಜಿಲ್ಲಾ ಪೇಲಿಸ್ ವರಿಗಣ್ಟಧಿಕಾರಿ ಡಾ.ಗೋಪಾಲ್ ಎಂ. ಬ್ಯಾಕೋಡ ಅವರು ಮಾತನಾಡಿ, 25 ರಿಂದ 40ರ ವಯೋಮಾನದ ಜನರು ಜಿಲ್ಲೆಯಲ್ಲಿ ಪ್ರತಿ ವರ್ಷ ಸರಿಸುಮಾರು 450 ಜನ ರಸ್ತೆ ಅಪಘಾತದಲ್ಲಿ ಮರಣ ಹೊಂದುತ್ತಿದ್ದಾರೆ. ಅವರನ್ನೇ ಅವಲಂಭಿಸಿದ ಹೆಂಡತಿ ಮಕ್ಕಳು ಮತ್ತು ತಂದೆ ತಾಯಿಗಳಿಗೆ ಸಾಕಷ್ಟು ತೊಂದರೆ ಉಂಟಾಗುತ್ತದೆ ಎಂದು ಅವರು ತಿಳಿಸಿದರು

ವಾಹನಗಳ ಬ್ರೆಕ್ ಫೇಲ್, ನಿಯಂತ್ರಣ ತಪ್ಪಿ ಆಗುವ ಅಪಘಾತಕ್ಕಿಂತ ಹೆಚ್ಚಾಗಿ ವಾಹನಗಳನ್ನು ಅತ್ತೀ ವೇಗವಾಗಿ ಚಲಾಯಿಸುವುದು, ಹೆಲ್ಮೆಟ್, ಸೀಟ್ ಬೆಲ್ಟ್ ದರಿಸದೆ ವಾಹನವನ್ನು ಚಲಾಯಿಸುವುದರಿಂದ ವ್ಯಕ್ತಿಯ ಸಾವಿಗೆ ಕಾರಣ ವಾಗಬಹುದು. ರಸ್ತೆ ನಿಯಮಗಳನ್ನು ಪಾಲನೆ ಮಾಡುವುದರಿಂದ ಅಪಘಾತಗಳನ್ನು ತಡೆಯಬಹುದು. ಸಾರ್ವಜನಿಕರು ಹಾಗೂ ಪ್ರತಿಯೊಬ್ಬ ನಾಗರಿಕರು ಪೊಲೀಸ್ ಇಲಾಖೆಗೆ ಸಹಕರಿಸಬೇಕು ಎಂದು ಅವರು ಹೇಳಿದರು.

ಕಾರ್ಯಕ್ರಮದಲ್ಲಿ ಕವಿವಿ ಕುಲಸಚಿವ ಡಾ. ಎ.ಚನ್ನಪ್ಪ, ಬೆಳಗಾವಿ ವಿಭಾಗದ ಜಂಟಿ ಸಾರಿಗೆ ಆಯುಕ್ತೆ ಓಂಕಾರೇಶ್ವರಿ ಎಂ.ಪಿ., ಕೆಸಿಡಿ ಪ್ರಾಚಾರ್ಯ ಡಾ.ಡಿ.ಬಿ.ಕರಡೋಣಿ, ಕವಿವಿ ಎನ್ ಎಸ್‌ಎಸ್ ಸಂಯೋಜಕ ಡಾ.ಎಂ.ಬಿ.ದಳಪತಿ ಸೇರಿದಂತೆ ಇತರರು ಇದ್ದರು.

ಧಾರವಾಡ ಪೂರ್ವ ವಿಭಾಗದ ಪ್ರಾದೇಶಿಕ ಸಾರಿಗೆ ಅಧಿಕಾರಿ ಕೆ.ದಾಮೋದರ ಸ್ವಾಗತಿಸಿದರು. ಧಾರವಾಡ ಪಶ್ಚಿಮ ವಿಭಾಗದ ಹಿರಿಯ ಪ್ರಾದೇಶಿಕ ಸಾರಿಗೆ ಅಧಿಕಾರಿ ಭೀಮನಗೌಡ ಪಾಟೀಲ ವಂದಿಸಿದರು. ಜಿ.ವಿ.ದಿನಮನಿ ಅವರು ಕಾರ್ಯಕ್ರಮ ನಿರೂಪಿಸಿದರು.

ಕಾಲ್ನಡಿಗೆ ಜಾಥಾದಲ್ಲಿ ಸಾರಿಗೆ ಇಲಾಖೆಯ ಅಧಿಕಾರಿ, ಸಿಬ್ಬಂದಿಗಳು, ಕೆಸಿಡಿ ಎನ್–ಎಸ್‌ಎಸ್ ಸ್ವಯಂ ಸೇವಕರು, ರಾಯಾಪೂರದ ಕೆ–ಎಸ್‌ಆರ್ಪಿ ಬಟಾಲಿಯನ್, ಹುಬ್ಬಳ್ಳಿ–ಧಾರವಾಡ ಮೋಟಾರ ಡ್ರೈವಿಂಗ್ ಸ್ಕೂಲ್ ಅಸೋಸಿಯಷನ್, ಕವಿವಿ ಶಿಕ್ಷಣ ಮಹಾವಿದ್ಯಾಲಯದ ವಿದ್ಯಾರ್ಥಿಗಳು ಭಾಗವಹಿಸಿದ್ದರು.

ಕಾಲ್ನಡಿಗೆ ಜಾಥಾ ಕಾರ್ಯಕ್ರಮವು ಕೆಸಿಡಿಯಿಂದ ಆರಂಭಗೊಂಡು ಎಲ್‌ಐಸಿ ಮೂಲಕ ಆಲೂರು ವೆಂಕಟ–ರಾವ್ ವೃತ್ತ, ಕೋರ್ಟ್ ಸರ್ಕಲ್ ಮೂಲಕ ಆಲೂರು ವೆಂಕಟರಾವ್ ಭವನದಲ್ಲಿ ಮುಕ್ತಾಯಗೊಂಡಿತ್ತು.

## ಸಂವಿಧಾನ ಜಾಗೃತಿ ಜಾಥಾ



ಶಿವಮೊಗ್ಗ: ಸಂವಿಧಾನ ಐಕ್ಯತೆ ಜಾಗೃತಿ ಜಾಥಾ ರಥ–'ವು ಹೊಸನಗರ ತಾಲೂಕು ಪ್ರವೇಶ ಮಾಡಿದ್ದು, ಜಾಥಾವನ್ನು ಪೂರ್ಣ ಕುಂಭ ಮೆರವಣಿಗೆ ಮತ್ತು ಬೈಕ್ ರ್ಯಾಲಿ ಮಾಡುವ ಮುಖಾಂತರ ತ್ರಿಣಿವೆ ಗ್ರಾಮ ಪಂಚಾಯಿತಿಯಲ್ಲಿ ಅದ್ದೂರಿಯಾಗಿ ಸ್ವಾಗತಿಸಲಾಯಿತು.

ಗ್ರಾಮ ಪಂಚಾಯಿತಿ ಅಧ್ಯಕ್ಷೆ ಶ್ರೀಮತಿ ಲೀಲಾವತಿ, ಹೊಸನಗರ ಸಮಾಜ ಕಲ್ಯಾಣ ಇಲಾಖೆ ಅಧಿಕಾರಿ ಗೀತಾ, ಸಾಹಿತಿ ಗಣೇಶ್ ಮೂರ್ತಿ, ನೋಡಲ್ ಅಧಿಕಾರಿ ಕರಿಬಸವ, ಅಂಗನವಾಡಿ ಕಾರ್ಯಕರ್ತೆಯರು, ಶಾಲಾ ಶಿಕ್ಷಕರು ಮತ್ತು ವಿದ್ಯಾರ್ಥಿಗಳು ಹಾಗೂ ಊರಿನ ಗ್ರಾಮಸ್ಥರು ಉಪಸ್ಥಿತರಿದ್ದರು.

ನಂತರ ಜಾಥಾವು ನಬಟೂರು, ಬಾಳೂರು ಮತ್ತು ಕೆಂಚನಾಳ ಗ್ರಾಮ ಪಂಚಾಯಿತಿ ಮಾರ್ಗವಾಗಿ ರಿಪ್ಪನ್ ಪೇಟೆಗೆ ಮುಂದುವರೆಯಿತು.

## ಕೂಸಿನ ಮನೆ ಆರೈಕೆದಾರರ ತರಬೇತಿಗೆ ಚಾಲನೆ

ಹುಕ್ಕೇರಿ: ಇಲ್ಲಿನ ತಾಲೂಕಾ ಪಂಚಾಯತ ಸಭಾಭವನದಲ್ಲಿ ಒಂದು ವಾರ ಏರ್ಪಡಿಸಿರುವ ಕೂಸಿನ ಮನೆ ಆರೈಕೆದಾರರ ತರಬೇತಿಗೆ ಸೋಮವಾರ ಚಾಲನೆ ನೀಡಲಾಯಿತು.

ಸಸಿಗೆ ನೀರುಣಿಸುವ ಮೂಲಕ ತರಬೇತಿಗೆ ಚಾಲನೆ ನೀಡಿದ ಉದ್ಯೋಗ ಖಾತರಿ ಯೋಜನೆ ಸಹಾಯಕ ನಿರ್ದೇಶಕ ಪಿ.ಲಕ್ಷ್ಮೀನಾರಾಯಣ ಮಾತನಾಡಿ, ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಕೆಲಸಕ್ಕೆ ಬರುವ ಕಾರ್ಮಿಕರ ಮಕ್ಕಳನ್ನು ಕೂಸಿನ ಮನೆಗಳಲ್ಲಿ ಪಾಲನೆ ಮಾಡಬೇಕಾಗಿದೆ. ಹಾಗಾಗಿ ಇಲ್ಲಿ ತರಬೇತಿ ಪಡೆದುಕೊಂಡು ಕೂಸಿನ ಮನೆಗಳನ್ನು ಯಶಸ್ವಿಯಾಗಿ ನಡೆಸಿಕೊಂಡು ಹೋಗಬೇಕು ಎಂದು ಕಿವಿಮಾತು ಹೇಳಿದರು.

ತಾಂತ್ರಿಕ ಸಂಯೋಜಕ ಅರ್ಷದ ನೇರ್ಲಿ ಮಾತನಾಡಿ, ಮಕ್ಕಳು ದೇವರ ಸಮಾನ. ಮಕ್ಕಳಲ್ಲಿ ಬೇಧಭಾವ ಮಾಡದೇ ಎಲ್ಲಾ ಮಕ್ಕಳನ್ನು ತಮ್ಮ ಮಕ್ಕಳಂತೆ ಆರೈಕೆ ಮಾಡಬೇಕು. 3 ವರ್ಷದೊಳಗಿನ ಮಕ್ಕಳು ಈ ಮನೆಯಲ್ಲಿ ಬರುತ್ತವೆ. ಮಕ್ಕಳಿಗೆ ಬೇಕಾದ ಪೌಷ್ಠಿಕ ಆಹಾರವನ್ನು ಸಹ ನೀಡಲಾಗುತ್ತದೆ. ಸ್ವಚ್ಛತೆ ಕಡೆಗೆ ಹೆಚ್ಚಿನ ಗಮನಕೊಡಬೇಕು ಎಂದರು.



ಅಂಗನವಾಡಿ ಮೇಲ್ವಿಚಾರಕಿಂ–ಯರಾದ ಶೋಭಾ ಬಸ್ತವಾಡೆ, ಶೈಲಾ ಪಾಟೀಲ ತರಬೇತಿದಾರರಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. ಎಂಐಎಸ್ ಸಂಯೋಜಕ ಶಂಕರ ಶಿರಗುಪ್ಪಿ, ಐಇಸಿ ತಾಲೂಕಾ ಸಂಯೋಜಕ ಮಹಾಂತೇಶ ಬಾದವನಮಠ, ಆಡಳಿತ ಸಹಾಯಕಿ ಪ್ರೀತಿ ಜವಳಿ ಹಾಜರಿದ್ದರು.

ಪಂಚಾಯತ್ ರಾಜ್ ಆಯುಕ್ತಾಲಯ, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಮೈಸೂರಿನ ಅಬ್ದುಲ್ ನಜೀರ್‌ಸಾಬ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತರಾಜ್ ಸಂಸ್ಥೆ, ಜಿಲ್ಲಾ ಪಂಚಾಯತ ಹಾಗೂ ತಾಲೂಕಾ ಪಂಚಾಯತ ಸಹಯೋಗದಲ್ಲಿ ಈ ತರಬೇತಿ ಏರ್ಪಡಿಸಲಾಗಿದೆ.

# ಸಿಎಂ, ಡಿಸಿಎಂ, ಸಚಿವ ಸಂಪುಟಕ್ಕೆ ಧನ್ಯವಾದ ಸಲ್ಲಿಸಿದ ಚನ್ನರಾಜ ಹಟ್ಟಿಹೊಳಿ

ಬೆಳಗಾವಿ: ಬಸವಣ್ಣನವರನ್ನು ' ಸಾಂಸ್ಕೃತಿಕ ನಾಯಕ ' ಎಂದು ಘೋಷಣೆ ಮಾಡಿರುವ ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ, ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರವರಿಗೆ ಹಾಗೂ ಕಾರಣೀರ್ತರಾದ ಎಲ್ಲ ಸಂಪುಟ ಸಚಿವರಿಗೆ ಬೆಳಗಾವಿ ಜಿಲ್ಲಾ ಕಾಂಗ್ರೆಸ್ ಹಾಗೂ ಜಿಲ್ಲೆಯ ಜನರ ಪರವಾಗಿ ಧನ್ಯವಾದ ಸಲ್ಲಿಸುತ್ತೇವೆ ಎಂದು ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ ತಿಳಿಸಿದ್ದಾರೆ.

ವಿಶ್ವಗುರು, ಜಗಜ್ಯೋತಿ ಶ್ರೀ ಬಸವಣ್ಣನವರನ್ನು ರಾಜ್ಯ ಸರ್ಕಾರ 'ಸಾಂಸ್ಕೃತಿಕ ನಾಯಕ' ಎಂದು ಘೋಷಣೆ ಮಾಡಿರುವ ಹಿನ್ನೆಲೆಯಲ್ಲಿ ಮಂಗಳವಾರ ಬೆಳಗಾವಿಯ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಬಸವಣ್ಣನವರ ಭಾವಚಿತ್ರಕ್ಕೆ ಪೂಜೆ ಕೈಗೊಂಡು, ಗೌರವ ನಮನ ಸಲ್ಲಿಸಿ ಅವರು ಮಾತನಾಡಿದರು.

ವಿಶ್ವಗುರು ಬಸವಣ್ಣನವರನ್ನು ಕರ್ನಾಟಕದ ಸಾಂಸ್ಕೃತಿ–ಕ ನಾಯಕನೆಂದು ಘೋಷಿಸಿದ ನಮ್ಮ ಸರ್ಕಾರ ಶರಣ ತತ್ವ




ಪಾಲನೆಗೆ ಕಟಿಬದ್ಧವಾಗಿದೆ. ಬಸವಣ್ಣನವರ ಭಾವಚಿತ್ರವನ್ನು ವಿಧಾನ ಸೌಧದಲ್ಲಿ ಇಂದು ಅನಾವರಣಗೊಳಿಸಲಾಗಿದೆ ಹಾಗೂ ರಾಜ್ಯದ ಎಲ್ಲಾ ಸರ್ಕಾರಿ ಕಚೇರಿಗಳಲ್ಲೂ ಸಾಂಸ್ಕೃತಿ–ಕ ನಾಯಕ ಬಸವಣ್ಣನವರ ಭಾವಚಿತ್ರವನ್ನು ಕಡ್ಡಾಯವಾಗಿ ಹಾಕಬೇಕು ಎಂದು ಆದೇಶಿಸಲಾಗಿದೆ. ಬಸವಣ್ಣನವರನ್ನು ' ಸಾಂಸ್ಕೃತಿಕ ನಾಯಕ ' ಎಂದು ಘೋಷಣೆ ಮಾಡಿರುವ ಮಾನ್ಯ ಮುಖ್ಯ ಮಂತ್ರಿಗಳಾದ ಸಿದ್ದರಾಮಯ್ಯನವರಿಗೆ, ಉಪ ಮುಖ್ಯಮಂತ್ರಿಗಳಾದ ಡಿಕೆ ಶಿವಕುಮಾರವರಿಗೆ ಹಾಗೂ ಕಾರಣೀರ್ತರಾದ ಎಲ್ಲ ಸಂಪುಟ ಸಚಿವರಿಗೆ ಧನ್ಯವಾದ ಸಲ್ಲಿಸುಸುತ್ತೇವೆ. ಇದೊಂದು ಐತಿಹಾಸಿಕ ನಿರ್ಧಾರವಾಗಿದ್ದು, ಇದರಿಂದ ಕರ್ನಾಟಕ ರಾಜ್ಯದ ಹೆಸರು ವಿಶ್ವದಲ್ಲೇ ಬೆಳಗಲಿದೆ, ಜತೆಗೆ ಬಸವಣ್ಣನವರು ಕಂಡ ಕನಸು ನನಸಾಗಲಿದೆ. ರಾಜ್ಯ ಸರ್ಕಾರದ ಈ ನಿರ್ಧಾರವನ್ನು ನಾವು ಮನಪೂರ್ವಕವಾಗಿ ಸ್ವಾಗತಿಸುತ್ತೇವೆ ಎಂದು ಅವರು ಹೇಳಿದರು.

ಈ ಸಮಯದಲ್ಲಿ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ವಿನಯ ನಾವಲಗಟ್ಟಿ, ಕಿರಣ ಸಾಧುನವರ, ಮೋಹನ ರೆಡ್ಡಿ, ಬಸವರಾಜ ಶೇಗಾಂವಿ, ರಾಜಾಸಲೀಂ ಖಾಸೀಮನವರ ಹಾಗೂ ಮಹಿಳಾ ಕಾಂಗ್ರೆಸ್ ಪದಾದಿಕಾ–ರಿಗಳು ಉಪಸ್ಥಿತರಿದ್ದರು.

## ಸೊನಲೆ ಗ್ರಾಮದಲ್ಲಿ ಸಂವಿಧಾನ ಜಾಗೃತಿ ಜಾಥಾ



ಶಿವಮೊಗ್ಗ: ಸೊನಲೆ ಗ್ರಾಮದಲ್ಲಿ ಸಂವಿಧಾನ ಜಾಗೃತಿ ಜಾಥಾ ರವನ್ನು ಬರಮಾಡಿಕೊಂಡು ಸರ್ಕಾರಿ ಪ್ರೌಢಶಾಲೆಯಿಂದ ಪಂಚಾಯಿತಿ ವರೆಗೆ ಜಾಥಾ ನಡೆಸಲಾಯಿತು. ಕಾರ್ಯಕ್ರಮದಲ್ಲಿ ಗ್ರಾ.ಪಂ ಅಧ್ಯಕ್ಷೆ ಮಂಜುಳಾ, ಉಪಾಧ್ಯಕ್ಷ ಎಂ.ಕೃಷ್ಣಮೂರ್ತಿ, ನೋಡಲ್ ಅಧಿಕಾರಿ ಕರಿಬಸವ, ಪಿಡಿಓ ಕಾವೇರಿ, ಪ್ರೌಢಶಾಲಾ ಶಿಕ್ಷಕರು, ವಿವಿಧ ಸಂಘ ಸಂಸ್ಥೆಯ ಸದ್ಯರು, ಮಹಿಳೆಯರು, ಶಿಕ್ಷಕರು, ವಿದ್ಯಾರ್ಥಿಗಳು ಭಾಗವಹಿಸಿದ್ದರು.

## ಅರಸಾಳು ಗ್ರಾಮದಲ್ಲಿ ಸಂವಿಧಾನ ಜಾಗೃತಿ ಜಾಥಾ ಬೈಕ್ ರ್ಯಾಲಿ

ಶಿವಮೊಗ್ಗ: ಹೊಸನಗರ ತಾಲ್ಲೂಕಿನ ಅರಸಾಳು ಗ್ರಾಮ ಪಂಚಾಯ್ತಿಯಲ್ಲಿ ಇಂದು ಸಂವಿಧಾನ ಜಾಗೃತಿ ಜಾಥಾವನ್ನು ಬೈಕ್ ರ್ಯಾಲಿ ನಡೆಸುವ ಮೂಲಕ ಬರ ಮಾಡಿಕೊಳ್ಳಲಾಯಿತು. ಕಾರ್ಯಕ್ರಮದಲ್ಲಿ ಸಂವಿಧಾನದ ಕುರಿತು ಅರಿವು ಮೂಡಿಸಲಾಯಿತು. ಈ ವೇಳೆ ಗ್ರಾ.ಪಂ ಅಧ್ಯಕ್ಷೆ ಜಯಮ್ಮ, ಉಪಾಧ್ಯಕ್ಷರು, ಸದಸ್ಯರು, ಪಿಡಿಓ ರವಿ, ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕಿ ಗೀತಾ ಬಿ.ಎಂ, ಶಾಲಾ ಶಿಕ್ಷಕರು, ವಿವಿಧ ಸಂಘ



ಸಂಸ್ಥೆಯ ಸದಸ್ಯರು, ವಿದ್ಯಾರ್ಥಿಗಳು, ಗ್ರಾಮಸ್ಥರು ಭಾಗವಹಿಸಿದ್ದರು.

# ಹಿಂಡಾಲ್ಕೊ ಇಂಡಸ್ಟ್ರೀಸ್ ಲಿಮಿಟೆಡ್ ದಿಂದ ವಾಲಿಬಾಲ್ ಪಂದ್ಯಾವಳಿಗೆ ಚಾಲನೆ

ಬೆಳಗಾವಿ: "ಕ್ರೀಡೆಯಲ್ಲಿ ಭಾಗವಹಿಸುವುದರಿಂದ ಮನಸ್ಸಿಗೆ ಉಲ್ಲಾಸ ಸಿಗುವುದಲ್ಲದೆ, ದೈಹಿಕ ಹಾಗೂ ಮಾನಸಿಕ ಆರೋಗ್ಯ ವೃದ್ಧಿ ಆಗುತ್ತದೆ. ಗ್ರಾಮೀಣ ಕ್ರಿ?ಡಾ ಪ್ರತಿಭೆಗಳನ್ನು ಗುರುತಿಸಲು ಕ್ರಿ?ಡಾಕೂಟಗಳು ಸಹಕಾರಿಯಾಗಿದೆ. ಯುವಕರು ಅನೂನ್ಯತೆಯಿಂದ ಆಟ ಆಡುವುದರೊಂದಿಗೆ ಉತ್ತಮ ಪ್ರದರ್ಶನ ನೀಡಬೇಕು" ಎಂದು ಹಿಂಡಲ್ಕೊ ಇಂ–ಡಸ್ಟ್ರೀಸ್ ಲಿಮಿಟೆಡ್ ಮಾನವ ಸಂಪನ್ಮೂಲ ವಿಭಾಗದ ಮುಖ್ಯಸ್ಥರಾದ ಮಯೂರ ಕೃಷ್ಣ ಅವರು ಹೇಳಿದರು.

ನಗರದ ಹಿಂಡಲ್ಕೊ ಇಂಡಸ್ಟ್ರೀಸ್ ಲಿ. ಆವರಣದಲ್ಲಿ ಹಿಂಡಾಲ್ಕೊ ಇಂ–ಡಸ್ಟ್ರೀಸ್ ಲಿಮಿಟೆಡ್ ವತಿಯಿಂದ ಸೋಮವಾರ ಸಂಜೆ ಆಯೋಜಿಸಿಲಾದ ಹೊನಲು ಬೆಳಕಿನ ವಾಲಿಬಾಲ್ ಪಂದ್ಯಾವಳಿಗೆ ಚಾಲನೆ ನೀಡಿ ಅವರು ಮಾತನಾಡಿದರು.




ಸಾಮಾನ್ಯವಾಗಿ ಕ್ರೀಡಾ ಚಟುವಟಿ–ಕೆಗಳಲ್ಲಿ ಪಾಲ್ಗೊಳ್ಳುವ ಪ್ರತಿಯೊಬ್ಬರೂ ಗೆಲ್ಲಲೇಬೇಕು ಎಂಬ ಮನೋಭಾವ ಹೊಂದಿರುತ್ತಾರೆ. ಆಟದಲ್ಲಿ ಸೋಲು, ಗೆಲುವು ಮುಖ್ಯವಲ್ಲ. ಸ್ಪರ್ಧಾ ಮನೋಭಾವ ಬೆಳೆಸಿಕೊಂಡು ಭಾಗವಹಿಸುವುದೇ ಮುಖ್ಯ ಎಂದರು. ದತ್ತು ಗ್ರಾಮಗಳ ಅಭಿವೃದ್ಧಿ, ಯುವಕರ ಏಳಿಗೆಗಾಗಿ ಕಳೆದ 20 ವರ್ಷಗಳಿಂದ ಹಿಂಡಾಲ್ಕೊ ಇಂಡಸ್ಟ್ರೀಸ್ ಲಿಮಿಟೆಡ್ ಶ್ರಮಿಸುತ್ತಿದೆ. ಏಳು ಗ್ರಾಮದ ಯುವಕರು ಉತ್ಸಾಹದಿಂದ ಕ್ರೀಡೆಯಲ್ಲಿ ಭಾಗವಹಿಸಿರುವುದು ಹೆಮ್ಮೆಯ ಸಂಗತಿ ಎನ್ನುತ್ತ, ಶುಭಹಾರೈಸಿದರು.

ಬಹಳಷ್ಟು ಗ್ರಾಮೀಣ ಕ್ರೀಡೆಗಳು ನಶಿಸುತ್ತಿವೆ. ಹೀಗಾಗಿ ಕ್ರಿಕೆಟ್ , ವಾಲಿಬಾಲ್ ಜತೆಗೆ ಗ್ರಾಮೀಣ ಕ್ರೀಡೆಗಳಿಗೆ ಹೆಚ್ಚಿನ ಪ್ರಾಮುಖ್ಯತೆ ನೀಡಿಬೇಕಿದೆ. ಪ್ರತಿ ವರ್ಷವೂ ವಿವಿಧ ಕ್ರೀಡೆಗಳನ್ನು ಆಯೋಜನೆ ಮಾಡಲಾಗುವುದು. ಕ್ರೀಡೆಗಳಿಗೆ ಅಗತ್ಯ ಸಹಾಯ–ಸಹಕಾರ ಹಿಂಡಾಲ್ಕೊ ಇಂ–ಡಸ್ಟ್ರೀಸ್ ಲಿಮಿಟೆಡ್ ನೀಡಲಿದೆ ಎಂದು ಹೇಳಿದರು.

ಹಿಂಡಾಲ್ಕೊ ಇಂಡಸ್ಟ್ರೀಸ್ ಲಿಮಿಟೆಡ್ ಯ ಬೆಳಗಾವಿ ತಾಲೂಕಿನ 7 ದತ್ತು ಗ್ರಾಮಗಳಾದ ಬಸವನ ಕೊಳ್ಳ, ಮುತ್ತೆನಟ್ಟಿ , ಯಮನಾಪೂರ, ಕಾಕತಿ, ಗೌಂಡವಾಡ, ಕಣಬರ್ಗಿ, ಬಿ.ಕೆ ಕಂಗ್ರಾಳಿ ಗ್ರಾಮದ ಕ್ರೀಡಾಪಟುಗಳನ್ನು ಆಯ್ದುಕೊಂಡು. ಐದು ದಿನಗಳ ವರೆಗೂ ವಾಲಿಬಾಲ್ ಪಂದ್ಯಾವಳಿಗಳು ಆಯೋಜನೆ ಮಾಡಲಾಗಿದೆ. ಗ್ರಾಮಗಳ ಅಭಿವೃದ್ಧಿಗೆ ಜತೆಗೆ ಗ್ರಾಮೀಣ ಕ್ರೀಡಾಪಟುಗಳಿಗೆ ಹೆಚ್ಚಿನ ಪ್ರೋತ್ಸಾಹ ನೀಡಲಾಗುವುದು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಮಾಜಿ ಮೇಯರ್ ಬಸಪ್ಪಾ ಚಿಕ್ಕಲ್ಲದಿನ್ನಿ , ಮಹೇಶ ಶೆಟ್ಟಿ, ವಿಜಯಶೇಖರ, ಬಾವೇಶ , ದಿನೇಶ ನಾಯ್ಕ, ಹರ್ಷದಾ ದೇವಳೆ, ಅನೀಲಕುಮಾರ ಚವ್ಹಾನ, ಜಾನ್, ಶಂಕ, ರಾಜು, ದಿನೇಶ ನಾಯ್ಕ ಸ್ವಾಗತಿಸಿದರು, ರಾಜು ಮಾನೆನಿರೂಪಿಸಿದರು, ಶ್ರೀಧರ ಚಿಕ್ಕಮಠ ವಂದಿಸಿದರು. ಏಳು ಗ್ರಾಮದ ಗಣ್ಯರು ಹಾಗೂ ಹಿಂಡಾಲ್ಕೊ ಇಂ–ಡಸ್ಟ್ರೀಸ್ ಲಿಮಿಟೆಡ್ ಯ ಸಿಬ್ಬಂದಿ ಇತರರು ಇದ್ದರು.

BELAGAVI VARADI KANNADA DAILY MORNING : Editor, Printer, Publisher & Owned By : Satish Basavani Gudagenatti. Basavani House No.53, Ashray Colony Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089